24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 40 | ನವದೆಹಲಿ | ಬೆಲೆ ₹10 | ಆಗಸ್ಟ್ 5 2026 ಬುಧವಾರ

## ಒಳಪುಟಗಳಲ್ಲಿ

ಪಿಓಕೆ ಚುನಾವಣೆ ವಾಸ್ತವ ಮರೆಮಾಚುವ ಯತ್ನ- ಗುಂಡಿನ ದಾಳಿ ಮೂಲಕ ಆಕ್ರೋಶ ದಮನ - ಪು.4

ಬ್ರಾಹ್ಮಣ ಪ್ರಾತಿನಿಧ್ಯವಿಲ್ಲದ ಸಂಪುಟ ದೇಶಪಾಂಡೆ ಬೆಂಬಲಿಗರ ಆಕ್ರೋಶ - ಪು.5

ಫಸಲ್ ಬಿಮಾ ನೋಂದಣಿ: ರೈತರಿಗೆ ಭಗವಂತ ಖೂಬಾ ಅಭಿನಂದನೆ - ಪು.6

ಜಿಬಿಎ ಕೆಲವಾರ್ಡ್‌ಗಳಲ್ಲಿ ಎಸ್‌ಐಆರ್ ಅಮಾನತು - ಆಕ್ಷೇಪಣೆ ಬೆನ್ನಲ್ಲೇ ರಾಜ್ಯ ಚುನಾವಣಾ ಆಯೋಗದಿಂದ ಹೈಕೋರ್ಟ್‌ಗೆ ಮಾಹಿತಿ - ಪು.7

# ನ್ಯಾನೋ, ಎಐ ಕ್ಷೇತ್ರದಲ್ಲಿ ಬೆಂಗಳೂರನ್ನು ಜಾಗತಿಕ ಕೇಂದ್ರವಾಗಿಸುವ ಗುರಿ

## 14ನೇ ಬೆಂಗಳೂರು ಇಂಡಿಯಾ ನ್ಯಾನೋ 2026 ಸಮ್ಮೇಳನದಲ್ಲಿ ಸಿಎಂ ಡಿ.ಕೆ. ಶಿವಕುಮಾರ್




**ಬೆಂಗಳೂರು, ಆ.4:** ನ್ಯಾನೋ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ ಸೆಮಿಕಂಡಕ್ಟರ್, ಜೈವಿಕ ತಂತ್ರಜ್ಞಾನ ಹಾಗೂ ಕ್ವಾಂಟಮ್ ತಂತ್ರಜ್ಞಾನ ಸೇರಿ ಡೀಪ್–ಟೆಕ್ ಕ್ಷೇತ್ರಗಳಲ್ಲಿ ಬೆಂಗಳೂರನ್ನು ಜಾಗತಿಕ ಮಟ್ಟದ ಕೇಂದ್ರವನ್ನಾಗಿ ರೂಪಿಸುವುದು ರಾಜ್ಯ ಸರ್ಕಾರದ ಪ್ರಮುಖ ಗುರಿಯಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ನಗರದ ಖಾಸಗಿ ಹೋಟೆಲ್‌ನಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ನ್ಯಾನೋ ತಂತ್ರಜ್ಞಾನ ವಿಷನ್ ಗ್ರೂಪ್ ಆಯೋಜಿಸಿದ್ದ 14ನೇ ಬೆಂಗಳೂರು ಇಂಡಿಯಾ ನ್ಯಾನೋ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕರ್ನಾಟಕ ಮುಂದಿನ ತಾಂತ್ರಿಕ ಕ್ರಾಂತಿಗೆ ನಾಯಕತ್ವ ವಹಿಸಲು ಅಗತ್ಯವಾದ ಎಲ್ಲ ರೀತಿಯ ವಾತಾವರಣವನ್ನು ಸರ್ಕಾರ ನಿರ್ಮಿಸುತ್ತಿದೆ ಎಂದರು. ಬೆಂಗಳೂರು ಈಗಾಗಲೇ ಭಾರತವನ್ನು ಜಾಗತಿಕ ಐಟಿ ಕ್ಷೇತ್ರದಲ್ಲಿ ಗುರುತಿಸುವಂತೆ ಮಾಡಿದೆ. ಮುಂದಿನ ದಿನಗಳಲ್ಲಿ ಡೀಪ್–ಟೆಕ್ ಕ್ಷೇತ್ರದಲ್ಲೂ ವಿಶ್ವದ ಗಮನ ಸೆಳೆಯುವ ನಗರವಾಗಿ ರೂಪುಗೊಳ್ಳಬೇಕಿದೆ. ಸರ್ಕಾರ, ಶೈಕ್ಷಣಿಕ ಸಂಸ್ಥೆಗಳು, ಕೈಗಾರಿಕೆಗಳು ಹಾಗೂ ಸ್ಟಾರ್ಟ್‌ಅಪ್‌ಗಳು ಒಟ್ಟಾಗಿ ಕೆಲಸ ಮಾಡಿದಾಗ ಮಾತ್ರ ನಾವೀನ್ಯತೆಗೆ ವೇಗ ಸಿಗುತ್ತದೆ ಎಂದು ಸಿಎಂ ಡಿಕೆ ಶಿವಕುಮಾರ್ ತಿಳಿಸಿದರು.

ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಶೋಧನಾ ಸಂಸ್ಥೆ, ವಿಶ್ವವಿದ್ಯಾಲಯ, ಸ್ಟಾರ್ಟ್‌ಅಪ್ ಹಾಗೂ ಬಹುರಾಷ್ಟ್ರೀಯ ಕಂಪನಿಗಳ ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರಗಳು ಕರ್ನಾಟಕದ ದೊಡ್ಡಶಕ್ತಿಯಾಗಿವೆ. ಇದೇ ಪರಿಸರ ವ್ಯವಸ್ಥೆ ಡೀಪ್–ಟೆಕ್ ಕ್ಷೇತ್ರದಲ್ಲಿ ರಾಜ್ಯವನ್ನು ಜಾಗತಿಕ ಮಟ್ಟದಲ್ಲಿ ಮುಂಚೂಣಿಗೆ ತರುವ ಸಾಮರ್ಥ್ಯ ಹೊಂದಿದೆ ಎಂದು ಸಿಎಂ ವಿಶ್ವಾಸ ವ್ಯಕ್ತಪಡಿಸಿದರು.

### ಸಂಶೋಧನೆ ಮತ್ತು ಪೇಟೆಂಟ್‌ಗಳ ಸೃಷ್ಟಿಗೆ ಒತ್ತು ನೀಡಿ

ನ್ಯಾನೋ ತಂತ್ರಜ್ಞಾನ ಆರೋಗ್ಯ ಕ್ಷೇತ್ರದಲ್ಲಿ ನಿಖರ ಚಿಕಿತ್ಸಾ ಪದ್ಧತಿ ಹಾಗೂ ಗುರಿ ಆಧಾರಿತ ಔಷಧ ವಿತರಣೆಯ ಮೂಲಕ ಹೊಸಕ್ರಾಂತಿಯನ್ನು ತರಲಿದೆ. ಕೃಷಿಯಲ್ಲಿ ಸ್ಮಾರ್ಟ್ ರಸಗೊಬ್ಬರ, ನೀರಿನ ಸಮರ್ಪಕ ನಿರ್ವಹಣೆ ಹಾಗೂ ಉತ್ಪಾದಕತೆ ಹೆಚ್ಚಿಸುವ ತಂತ್ರಜ್ಞಾನಕ್ಕೂ ಇದು ನೆರವಾಗಲಿದೆ. ಜೊತೆಗೆ ಸ್ವಚ್ಛ ಇಂಧನ, ಸುಸ್ಥಿರ ಕೈಗಾರಿಕೆ ಮತ್ತು ಬಲಿಷ್ಠ ಮೂಲಸೌಕರ್ಯ ನಿರ್ಮಾಣಕ್ಕೂ ಪ್ರಮುಖ ಪಾತ್ರ ವಹಿಸಲಿದೆ ಎಂದು ತಿಳಿಸಿದರು.

ಬೆಂಗಳೂರುನಲ್ಲಿರುವ ಜಾಗತಿಕ ಸಾಮರ್ಥ್ಯ ಕೇಂದ್ರಗಳು ಕೇವಲ ಕಾರ್ಯಾಚರಣೆ ನಡೆಸುವುದಕ್ಕಿಂತ ಹೊಸ ಆವಿಷ್ಕಾರಗಳು, ಸಂಶೋಧನೆ ಮತ್ತು ಪೇಟೆಂಟ್‌ಗಳ ಸೃಷ್ಟಿಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಸಿಎಂ ಸಲಹೆ ನೀಡಿದರು. ಯುವ ವಿಜ್ಞಾನಿಗಳು ದೊಡ್ಡ ಕನಸುಗಳನ್ನು ಕಾಣಬೇಕು, ಹೊಸ ಸಂಶೋಧನೆಗಳಿಗೆ ಮುಂದಾಗಬೇಕು. ಇಂತಹ ಪ್ರಯತ್ನಗಳಿಗೆ ರಾಜ್ಯ ಸರ್ಕಾರ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಡಿಕೆಶಿ ಭರವಸೆ ನೀಡಿದರು.

### ಕೇವಲ ಹೂಡಿಕೆ ಸೆಳೆಯುವ ಸ್ಪರ್ಧೆಯಲ್ಲ, ವೈಜ್ಞಾನಿಕ ನಾಯಕತ್ವಕ್ಕಾಗಿ ಪೈಪೋಟಿ

ಪ್ರಸ್ತುತ ದೇಶಗಳ ನಡುವೆ ಕೇವಲ ಹೂಡಿಕೆ ಸೆಳೆಯುವ ಸ್ಪರ್ಧೆಯಷ್ಟೇ ಇಲ್ಲ, ವೈಜ್ಞಾನಿಕ ನಾಯಕತ್ವಕ್ಕಾಗಿ ಪೈಪೋಟಿ ನಡೆಯುತ್ತಿದೆ. ಸುಧಾರಿತ ತಂತ್ರಜ್ಞಾನಗಳಲ್ಲಿ ಮುನ್ನಡೆ ಸಾಧಿಸುವ ರಾಷ್ಟ್ರಗಳೇ ಭವಿಷ್ಯದ ಜಾಗತಿಕ ಆರ್ಥಿಕತೆಯನ್ನು ಮುನ್ನಡೆಸಲಿವೆ. ಆ ಸಾಲಿನಲ್ಲಿ ಕರ್ನಾಟಕವೂ ಇರಬೇಕು ಎಂಬ ಗುರಿಯೊಂದಿಗೆ ಸರ್ಕಾರ ಕೆಲಸ ಮಾಡುತ್ತಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು. ಶೈಕ್ಷಣಿಕ ಸಂಸ್ಥೆಗಳು, ಕೈಗಾರಿಕೆಗಳು ಹಾಗೂ ಸ್ಟಾರ್ಟ್‌ಅಪ್‌ಗಳ ನಡುವೆ ಇನ್ನಷ್ಟು ಸಹಭಾಗಿತ್ವ ಅಗತ್ಯವಾಗಿದೆ. ಸಂಶೋಧನೆಗಳು ಪ್ರಯೋಗಾಲಯಗಳಲ್ಲೇ ಉಳಿಯದೆ ಉದ್ಯಮ ಹಾಗೂ ವಾಣಿಜ್ಯ ಉತ್ಪನ್ನಗಳಾಗಿ ರೂಪುಗೊಳ್ಳುವ ವಾತಾವರಣ ನಿರ್ಮಾಣವಾಗಬೇಕು ಎಂದು ಕರೆ ನೀಡಿದರು.

ನ್ಯಾನೋ ತಂತ್ರಜ್ಞಾನ ಇಂದು ಕೇವಲ ಪ್ರಯೋಗಾಲಯಗಳಲ್ಲೇ ಸೀಮಿತವಾಗಿಲ್ಲ. ಆರೋಗ್ಯ, ಕೃಷಿ, ಎಲೆಕ್ಟ್ರಾನಿಕ್ಸ್, ಇಂಧನ, ಸಾರಿಗೆ, ರಕ್ಷಣಾ ಕ್ಷೇತ್ರ, ಬಾಹ್ಯಾಕಾಶ ಹಾಗೂ ಸುಧಾರಿತ ಉತ್ಪಾದನೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಇದು ಮಹತ್ವದ ಬದಲಾವಣೆ ತರಲಿದೆ. ಕೃತಕ ಬುದ್ಧಿಮತ್ತೆ, ನ್ಯಾನೋ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಕ್ವಾಂಟಮ್ ವಿಜ್ಞಾನ ಹಾಗೂ ಸೆಮಿಕಂಡಕ್ಟರ್ ತಂತ್ರಜ್ಞಾನಗಳ ಸಮನ್ವಯವೇ ಮುಂದಿನ ಜಾಗತಿಕ ಆರ್ಥಿಕತೆಯನ್ನು ರೂಪಿಸಲಿದೆ. ಈ ಕ್ಷೇತ್ರಗಳಲ್ಲಿ ಕರ್ನಾಟಕ ಅಗ್ರಸ್ಥಾನದಲ್ಲಿರಬೇಕು ಎಂಬುದು ಸರ್ಕಾರದ ಉದ್ದೇಶವಾಗಿದೆ ಎಂದು ಡಿಕೆಶಿ ತಿಳಿಸಿದರು.

# ಆ.7ರಿಂದ ದೆಹಲಿ ವಿಧಾನಸಭೆ ಮುಂಗಾರು ಅಧಿವೇಶನ



**ನವದೆಹಲಿ, ಆ.4:** ದೆಹಲಿ ವಿಧಾನಸಭೆಯ ಆರನೇ ಅಧಿವೇಶನವು ಆಗಸ್ಟ್ 7ರಂದು ಬೆಳಗ್ಗೆ 11 ಗಂಟೆಗೆ ಪ್ರಾರಂಭವಾಗಲಿದ್ದು, ಆಗಸ್ಟ್ 10 ಮತ್ತು 11ರವರೆಗೆ ಮುಂದುವರಿಯಲಿದೆ ಎಂದು ಸ್ಪೀಕರ್ ವಿಜೇಂದರ್ ಗುಪ್ತಾ ಮಂಗಳವಾರ ತಿಳಿಸಿದ್ದಾರೆ. ಜುಲೈ 31ರಂದು ಹೊರಡಿಸಲಾದ ಅಧಿಸೂಚನೆಯಂತೆ, ಉಪರಾಜ್ಯಪಾಲರ ಆದೇಶದ ಮೇರೆಗೆ ಈ ಅಧಿವೇಶನ ಕರೆಯಲಾಗಿದೆ. ಅಧಿವೇಶನ ಸುಸೂತ್ರವಾಗಿ ನಡೆಯಲು ಎಲ್ಲ ವ್ಯವಸ್ಥೆಗಳನ್ನು ಮಾಡಲಾಗಿದೆ ಎಂದು ಸ್ಪೀಕರ್ ಹೇಳಿದ್ದಾರೆ. ಸಾರ್ವಜನಿಕ ಮಹತ್ವದ ವಿಷಯಗಳನ್ನು ಸಭೆಯಲ್ಲಿ ಪ್ರಸ್ತಾಪಿಸಲು ಸದಸ್ಯರಿಗೆ ಅವಕಾಶ ನೀಡುವ ನಿಯಮ 280ರ ಅಡಿಯ ನೋಟಿಸ್‌ಗಳನ್ನು, ಸಂಬಂಧಿತ ಕಲಾಪದ ದಿನಕ್ಕೆ ಹಿಂದಿನ ಕೆಲಸದ ದಿನದ ಸಾಯಂಕಾಲ 5 ಗಂಟೆಯೊಳಗೆ ಸಲ್ಲಿಸಬೇಕಾಗುತ್ತದೆ. ದೆಹಲಿಗೆ ಸಂಬಂಧಿಸಿದ ವಿಷಯಗಳ ಕುರಿತು ಚರ್ಚೆಯಲ್ಲಿ ಭಾಗವಹಿಸಲು ಮತ್ತು ಸಾರ್ವಜನಿಕ ಮಹತ್ವದ ಪ್ರಶ್ನೆಗಳನ್ನು ಎತ್ತಲು ಈ ಅಧಿವೇಶನವು ಶಾಸಕರಿಗೆ ಅವಕಾಶವನ್ನು ಒದಗಿಸಲಿದೆ ಎಂದು ಗುಪ್ತಾ ತಿಳಿಸಿದ್ದಾರೆ.

# ರಾಮಮಂದಿರ ದೇಣಿಗೆ ಕಳ್ಳತನ, ವಿದ್ಯಾರ್ಥಿಗಳ ಮೇಲೆ ದೌರ್ಜನ್ಯ ಖಂಡಿಸಿ ಸಂಸತ್ ಭವನದ ಬಳಿ ಪ್ರತಿಪಕ್ಷ ಧರಣಿ



**ನವದೆಹಲಿ, ಆ.4:** ಅಯೋಧ್ಯೆಯ ರಾಮಮಂದಿರದಲ್ಲಿ ದೇಣಿಗೆ ಕಳ್ಳತನ ಮತ್ತು ನೀಟ್ ವಿದ್ಯಾರ್ಥಿ ಪ್ರತಿಭಟನಾಕಾರರ ಮೇಲೆ ಪೊಲೀಸ್ ದೌರ್ಜನ್ಯದ ವಿರುದ್ಧ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಸೇರಿ ವಿರೋಧ ಪಕ್ಷದ ಸಂಸದರು ಮಂಗಳವಾರ ಸಂಸತ್ ಭವನದ ಹೊರಗೆ ಪ್ರತಿಭಟನೆ ನಡೆಸಿದರು. ಕೇಂದ್ರ ಸರ್ಕಾರದ ವಿರುದ್ಧ ಫಲಕಗಳನ್ನು ಹಿಡಿದು, ಸಂಸತ್ತಿನ ಮಕರ ದ್ವಾರದ ಮುಂದೆ 'ಹಣ, ಅಧಿಕಾರ ಕಳ್ಳರು, 'ಅಮಿತ್ ಶಾ ಉತ್ತರ ನೀಡಿ' ಎಂಬ ಘೋಷಣೆ ಕೂಗಿದರು.

ರಾಮಮಂದಿರದಲ್ಲಿ ದೇಣಿಗೆ ಕಳ್ಳತನ ಆರೋಪದ ಹಿನ್ನೆಲೆ, ದೇಣಿಗೆ ಪೆಟ್ಟಿಗೆಗಳನ್ನು ಹಿಡಿದ ಸಂಸದರು ಅವನ್ನು ಪ್ರತಿಭಟನಾ ಸ್ಥಳದಲ್ಲಿ ಇಟ್ಟು ಕಳ್ಳತನದ ಅಣಕು ಪ್ರದರ್ಶನ ನೀಡಿದರು. ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ, ಪೆಟ್ಟಿಗೆಗಳ ಸುತ್ತಲೂ ನಿಂತು ಕೆಲವು ಸಂಸದರು ನೀಡಿದ ದೇಣಿಗೆಯನ್ನು ಪಡೆದು ಅದನ್ನು ಕಳ್ಳತನ ಮಾಡಿದಂತೆ ನಾಟಕೀಯವಾಗಿ ತೋರಿಸಿದರು. ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ವಾದ್ರಾ, ಸಮಾಜವಾದಿ ಪಕ್ಷದ ಸಂಸದರಾದ ಡಿಂಪಲ್ ಯಾದವ್ ಮತ್ತು ಧರ್ಮೇಂದ್ರ ಯಾದವ್, ಟಿಎಂಸಿಯ ಸಾಗರಿಕಾ ಘೋಷ್, ಆರ್‌ಜೆಡಿಯ ಸಂಜಯ್ ಯಾದವ್ ಮತ್ತು ಮನೋಜ್ ಝಾ, ಆರ್‌ಎಸ್‌ಪಿಯ ಎನ್‌ಕೆ ಪ್ರೇಮಚಂದ್ರನ್ ಇತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

**ರಾಜ್ಯಸಭೆಯಲ್ಲೂ ಗದ್ದಲ:** ಅಯೋಧ್ಯೆ ರಾಮ ಮಂದಿರದ ದೇಣಿಗೆ ಕಳ್ಳತನ ಆರೋಪದ ವಿಷಯವು ರಾಜ್ಯಸಭೆಯಲ್ಲೂ ಪ್ರತಿಧ್ವನಿಸಿತು. ವಿರೋಧ ಪಕ್ಷಗಳು ಘೋಷಣೆಗಳನ್ನು ಕೂಗಿ ಪ್ರತಿಭಟಿಸಿದ್ದರಿಂದ ಇಂದಿನ ಕಲಾಪ ಮಧ್ಯಾಹ್ನ 2 ಗಂಟೆಯವರೆಗೆ ಮುಂದೂಡಲಾಯಿತು.

ಬೆಳಗ್ಗೆ 11 ಗಂಟೆಗೆ ಕಲಾಪ ಆರಂಭವಾದ ಕೆಲವೇ ನಿಮಿಷಗಳಲ್ಲಿ ಪ್ರತಿಪಕ್ಷಗಳು ಗದ್ದಲ ಎಬ್ಬಿಸಿದ್ದರಿಂದ ಮಧ್ಯಾಹ್ನ 12 ಗಂಟೆಗೆ ಸದನ ಮುಂದೂಡಲಾಯಿತು. ನಂತರ ಮತ್ತೆ ಸದನ ಆರಂಭವಾದ ಬಳಿಕ ಸಭಾಪತಿ ಸಿ.ಪಿ. ರಾಧಾಕೃಷ್ಣನ್ ಅವರು ಪ್ರಶ್ನೋತ್ತರ ಅವಧಿಯನ್ನು ಕೈಗೆತ್ತಿಕೊಂಡರು. ಆದಾಗ್ಯೂ, ವಿರೋಧ ಪಕ್ಷಗಳು ದೇಣಿಗೆ ಕಳ್ಳತನದ ಆರೋಪದ ವಿಷಯವನ್ನು ಪ್ರಸ್ತಾಪಿಸಲು ಪ್ರಾರಂಭಿಸಿದವು.

ಜೊತೆಗೆ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಹಾಜರಾಗಿ ಉತ್ತರ ನೀಡಬೇಕು ಎಂದು ಪಟ್ಟುಹಿಡಿದವು. ನಿರಂತರ ಘೋಷಣೆಗಳು ಮತ್ತು ಪ್ರತಿಭಟನೆ ಹಿನ್ನೆಲೆಯಲ್ಲಿ ಸಭಾಪತಿ ಸದನವನ್ನು ಮಧ್ಯಾಹ್ನ 2 ಗಂಟೆಯವರೆಗೆ ಮುಂದೂಡಿದರು.

# ಸುಗಮ ಕಲಾಪಕ್ಕೆ ಪ್ರಧಾನಿ, ಗೃಹಸಚಿವರ ಹಾಜರಿ ಕಡ್ಡಾಯ: ಖರ್ಗೆ ಆಗ್ರಹ

**ನವದೆಹಲಿ, ಆ. 4:** ಸಂಸತ್ತಿನ ಮುಂಗಾರು ಅಧಿವೇಶನ ಸುಗಮವಾಗಿ ಹಾಗೂ ವ್ಯವಸ್ಥಿತವಾಗಿ ನಡೆಯಬೇಕಾದರೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಅವರು ಕಡ್ಡಾಯವಾಗಿ ಸದನದಲ್ಲಿ ಹಾಜರಿರಬೇಕು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆಗ್ರಹಿಸಿದ್ದಾರೆ.



ಅಯೋಧ್ಯೆ ರಾಮಮಂದಿರದ ದೇಣಿಗೆ ಕಳ್ಳತನದ ಆರೋಪ ಮತ್ತು ಸಿಜೆಪಿ ನೇತೃತ್ವದಲ್ಲಿ ಪ್ರತಿಭಟಿಸುತ್ತಿದ್ದ ವಿದ್ಯಾರ್ಥಿಗಳ ಮೇಲಿನ ಪೊಲೀಸ್ ದೌರ್ಜನ್ಯದ ಕುರಿತು ಸರ್ಕಾರ ಹೇಳಿಕೆ ನೀಡಬೇಕು. ಉಭಯ ಸದನಗಳಲ್ಲಿ ಈ ಬಗ್ಗೆ ಚರ್ಚೆಗೆ ಸಭಾಪತಿ ಹಾಗೂ ಸ್ಪೀಕರ್ ಅವಕಾಶ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ಮಂದಿರ ನಿರ್ಮಾಣದ ಭೂಮಿ ಪೂಜೆಯಿಂದ ಪ್ರಾಣಪ್ರತಿಷ್ಠೆ ಸಮಾರಂಭದವರೆಗೆ ಪ್ರಧಾನಿಯವರು ಪ್ರತಿಯೊಂದು ಹಂತದಲ್ಲೂ ಭಾಗಿಯಾಗಿದ್ದಾರೆ. ಮಂದಿರದ ಟ್ರಸ್ಟ್‌ಗೆ ಸರ್ಕಾರವೇ 70 ಎಕರೆ ಭೂಮಿಯನ್ನು ಹಸ್ತಾಂತರಿಸಿದೆ. ಹೀಗಿರುವಾಗ, ದೇಣಿಗೆ ಕಳ್ಳತನದಂತಹ ಅತ್ಯಂತ ಗಂಭೀರ ಆರೋಪಗಳಿಂದ ಪ್ರಧಾನಿ ನುಣುಚಿಕೊಳ್ಳಲು ಸಾಧ್ಯವಿಲ್ಲ. ಕೇಂದ್ರದ ತನಿಖಾ ಸಂಸ್ಥೆಗಳಾದ ಇಡಿ, ಸಿಬಿಐ ಹಾಗೂ ಆದಾಯ ತೆರಿಗೆ ಇಲಾಖೆಗಳು ಈಗ ಎಲ್ಲಿವೆ. ಭಗವಾನ್ ರಾಮನ ಹೆಸರಿನಲ್ಲಿ ಲೂಟಿ ಮಾಡುವವರು ಇಡೀ ದೇಶದ ಕ್ಷಮೆಯಾಚಿಸಬೇಕು ಹಾಗೂ ದಾರಿ ತಪ್ಪಿಸುವುದನ್ನು ನಿಲ್ಲಿಸಬೇಕು ಎಂದು ಖರ್ಗೆ ತೀವ್ರ ವಾಗ್ದಾಳಿ ನಡೆಸಿದರು.

ಗೃಹ ಸಚಿವರು ಹೆದರಿದ್ದಾರೆಯೇ ಅಥವಾ ಉದ್ದೇಶಪೂರ್ವಕವಾಗಿ ಸದನವನ್ನು ಅವಮಾನಿಸಲು ಬಯಸಿದ್ದಾರೆಯೇ, ಇದೇ ಕಾರಣಕ್ಕೆ ಅವರು ಸದನಕ್ಕೆ ಬರುತ್ತಿಲ್ಲ ಎಂದು ಖರ್ಗೆ ಕಿಡಿಕಾರಿದರು. ಇದೇ ವೇಳೆ, ಹಿರಿಯ ಕಾಂಗ್ರೆಸ್ ಸಂಸದ ಕೆ.ಸಿ. ವೇಣುಗೋಪಾಲ್ ಕೂಡ ಬಿಜೆಪಿ ಸರ್ಕಾರದ ವಿರುದ್ಧ ಹರಿಹಾಯ್ದರು.

# ಸುಂಕ ಬೆದರಿಕೆ ನಡುವೆಯೂ ದೇಶದ ಇಂಧನ ಅಗತ್ಯದಲ್ಲಿ ರಾಜೀ ಇಲ್ಲ

ನವದೆಹಲಿ, ಆ.4: ಅಮೆರಿಕ ಮತ್ತು ಯುರೋಪ್ ದೇಶಗಳಿಂದ ನಿರಂತರ ಒತ್ತಡ ಮತ್ತು ಸುಂಕದ ಬೆದರಿಕೆಗಳ ನಡುವೆಯೂ ಭಾರತ ತನ್ನ ಇಂಧನ ಅಗತ್ಯಗಳಿಗೆ ರಾಜಿ ಮಾಡಿಕೊಳ್ಳುತ್ತಿಲ್ಲ ಎನ್ನುವುದು ಸ್ಪಷ್ಟವಾಗಿದೆ. ದೇಶದ ಇಂಧನ ಭದ್ರತೆಯನ್ನು ಆದ್ಯತೆ ವಿಷಯವಾಗಿ ಮಾಡಿಕೊಂಡಿರುವ ಭಾರತ ರಷ್ಯಾದಿಂದ ದೊಡ್ಡ ಪ್ರಮಾಣದಲ್ಲಿ ಕಚ್ಚಾ ತೈಲ ಖರೀದಿಯನ್ನು ಮುಂದುವರಿಸಿದೆ. ಅದರಲ್ಲೂ, ಇದು ಕಳೆದ ಜುಲೈ ತಿಂಗಳಲ್ಲಿ ರಷ್ಯಾದಿಂದ ಭಾರತಕ್ಕೆ ದಾಖಲೆ ಮಟ್ಟದಲ್ಲಿ ಕಚ್ಚಾತೈಲ ಆಮದಾಗಿದೆ.

ಉಕ್ರೇನ್ ಯುದ್ಧ ಪ್ರಾರಂಭವಾದ ನಂತರ ರಷ್ಯಾದಿಂದ ತೈಲ ಆಮದನ್ನು ಭಾರತ ಕಡಿಮೆ ಮಾಡಿಕೊಂಡಿತ್ತು. ಆದರೆ, ಕಳೆದ ನಾಲ್ಕು ವರ್ಷಗಳಲ್ಲಿ ಇದೆ ಮೊದಲ ಭಾರಿಗೆ ಜುಲೈ ತಿಂಗಳಲ್ಲಿ ಭಾರತವು ರಷ್ಯಾದಿಂದ ದಿನಂಪ್ರತಿ ದಾಖಲೆಯ 2.8 ದಶಲಕ್ಷ ಬ್ಯಾರಲ್ ಕಚ್ಚಾತೈಲವನ್ನು ಆಮದು ಮಾಡಿಕೊಂಡಿದೆ. ಈ ಮೂಲಕ ಭಾರತದ ಒಟ್ಟು ತೈಲ ಆಮದಿನಲ್ಲಿ ರಷ್ಯಾದ ಪಾಲು ಶೇಕಡಾ 55ಕ್ಕಿಂತ ಅಧಿಕ (55.3%) ಮಟ್ಟಕ್ಕೆ ತಲುಪಿದೆ. ಇನ್ನು, ಭಾರತದ ಈ ನಿರ್ಧಾರಕ್ಕೆ ಮುಖ್ಯ ಕಾರಣ ಏನು ಎಂದು ನೋಡುವುದಾದರೆ, ಅಮೆರಿಕ – ಇರಾನ್ ಯುದ್ಧ. ಪಶ್ಚಿಮ ಏಷ್ಯಾದಲ್ಲಿ ಮುಖ್ಯವಾಗಿ ಹಾರ್ಮುಜ್ ಜಲಸಂಧಿ ಪ್ರದೇಶದಲ್ಲಿ ಉಂಟಾಗಿರುವ ಭೌಗೋಳಿಕ ರಾಜಕೀಯ ಬಿಕ್ಕಟ್ಟು ಮತ್ತು ಸರಬರಾಜು ವ್ಯತ್ಯಯದಿಂದಾಗಿ ಭಾರತೀಯ ತೈಲಸಂಸ್ಥೆಗಳು ರಷ್ಯಾದ ತೈಲವನ್ನು ಸುರಕ್ಷಿತ ಪರ್ಯಾಯವಾಗಿ ಅವಲಂಬಿಸಿವೆ.

**ಭಾರತದ ಲೆಕ್ಕಾಚಾರವೇನು?:** ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಬೆಲೆ ಏರಿಳಿತವಾದಾಗಲೂ ಸ್ಥಿರ ಬೆಲೆಗೆ ತೈಲ ಪೂರೈಕೆಯಾಗಬೇಕು. ಅದರಂತೆ, ರಷ್ಯಾ ರಿಯಾಯಿತಿ ದರದಲ್ಲಿ ತೈಲ ಪೂರೈಕೆ ಮಾಡುವ ಮೂಲಕ ಅವಕಾಶ ನೀಡಿದೆ. ಇದರೊಂದಿಗೆ ಭಾರತ ಯಾವುದೇ ಒಂದು ದೇಶದ ಮೇಲೆ ಅವಲಂಬಿತವಾಗದೆ ಬಹು ಮೂಲಗಳಿಂದ ತೈಲ ಖರೀದಿಸುವ ನೀತಿ ಅನುಸರಿಸುತ್ತಿದೆ. ಜೊತೆಗೆ ಅಮೆರಿಕದ ಡಾಲರ್ ಮೇಲಿನ ಅವಲಂಬನೆ ತಗ್ಗಿಸಲು ರಷ್ಯಾ ಜತೆ ತೈಲ ವ್ಯಾಪಾರದಲ್ಲಿ ರೂಪಾಯಿ ಮೂಲಕವೇ ಶತಕೋಟಿ ಡಾಲರ್ ಮೌಲ್ಯದ ವ್ಯವಹಾರ ನಡೆಸುತ್ತಿದೆ.

### ಅಮೆರಿಕದ ಸುಂಕದ ಬೆದರಿಕೆಗೆ ಡೋಂಟ್ ಕೇರ್

**ಕೆಲವು ದಿನಗಳ ಹಿಂದೆ ರಷ್ಯಾದಿಂದ ಅತಿಹೆಚ್ಚು ಇಂಧನ ಖರೀದಿಸುವ ಭಾರತ ಮತ್ತು ಚೀನಾ ಸೇರಿ ಪ್ರಮುಖ 5 ದೇಶಗಳ ಮೇಲೆ ಶೇಕಡಾ 100ರಷ್ಟು ಹೆಚ್ಚುವರಿ ವ್ಯಾಪಾರ ಸುಂಕ ವಿಧಿಸಲು ಅಮೆರಿಕದ ಸೆನೆಟ್‌ನಲ್ಲಿ ಮಸೂದೆ ಮಂಡಿಸಲಾಗಿತ್ತು. ಆದರೆ, ಅಮೆರಿಕದ ಈ ಏಕಪಕ್ಷೀಯ ನಿರ್ಧಾರಕ್ಕೆ ಭಾರತ ತೀವ್ರ ಆಕ್ಷೇಪ ವ್ಯಕ್ತಪಡಿಸಿ, ಯಾವುದೇ ಬೆದರಿಕೆಗಳಿಗೆ ಮಣಿಯದೆ ದೇಶದ ಇಂಧನ ಸ್ವಾಯತ್ತತೆ ಕಾಪಾಡಿಕೊಳ್ಳಲು ಮುಂದಾಗಿದೆ.**

# ಎರಡೂವರೆ ವರ್ಷ ಅಧಿಕಾರ ಪೂರೈಸಿರುವ ನಿಗಮ–ಮಂಡಳಿ ಅಧ್ಯಕ್ಷರ ರಾಜೀನಾಮೆಗೆ ಸೂಚನೆ

**ಬೆಂಗಳೂರು, ಆ.4:** ರಾಜ್ಯ ಸಚಿವ ಸಂಪುಟ ವಿಸ್ತರಣೆಯಾದ ಬೆನ್ನಲ್ಲೇ ಎರಡೂವರೆ ವರ್ಷ ಅಧಿಕಾರ ಪೂರೈಸಿರುವ ವಿವಿಧ ನಿಗಮ ಮಂಡಳಿಗಳ ಅಧ್ಯಕ್ಷರ ರಾಜೀನಾಮೆಗೆ ಸೂಚನೆ ನೀಡಲಾಗಿದೆ.



ಸಚಿವ ಸ್ಥಾನ ವಂಚಿತ ಶಾಸಕರು ಸೇರಿದಂತೆ ಕೆಲ ಹಿರಿಯ ಮುಖಂಡರು, ಕಾರ್ಯಕರ್ತರಿಗೆ ನಿಗಮ ಮಂಡಳಿಗಳ ಅಧ್ಯಕ್ಷ ಗಿರಿಯನ್ನು ನೀಡಲು ಎರಡೂವರೆ ವರ್ಷ ಪೂರೈಸಿರುವ ನಿಗಮ ಮಂಡಳಿಗಳ ಅಧ್ಯಕ್ಷರ ರಾಜೀನಾಮೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚನೆ ನೀಡಿದ್ದಾರೆ.

ಈ ಹಿಂದೆ ಈ ನಿಗಮ–ಮಂಡಳಿಗಳ ಅಧ್ಯಕ್ಷರನ್ನು ನೇಮಕ ಮಾಡಿದ ಸಂದರ್ಭದಲ್ಲೇ ಎರಡೂವರೆ ವರ್ಷ ಮಾತ್ರ ಅಧಿಕಾರಾವಧಿ. ನಂತರ ಬೇರೆಯವರಿಗೆ ಅವಕಾಶ ಮಾಡಿಕೊಡಲು ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂಬ ಸಂದೇಶವನ್ನು ನಿಗಮ ಮಂಡಳಿ ಅಧ್ಯಕ್ಷರುಗಳಿಗೆ ಕಾಂಗ್ರೆಸ್ ಪಕ್ಷ ನೀಡಿತ್ತು. ಅದರಂತೆ ಎರಡೂವರೆ ವರ್ಷ ಪೂರೈಸಿರುವ ನಿಗಮ ಮಂಡಳಿಗಳ ಅಧ್ಯಕ್ಷರುಗಳಿಗೆ ರಾಜೀನಾಮೆ ನೀಡಿ ಹೊಸಬರಿಗೆ ಅವಕಾಶ ಮಾಡಿಕೊಡಿ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿಗಮ ಮಂಡಳಿಗಳ ಅಧ್ಯಕ್ಷರಿಗೆ ಸೂಚನೆ ನೀಡಿದ್ದಾರೆ.

ಈ ಬಗ್ಗೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಮಾಹಿತಿ ನೀಡಿದ ಅವರು, ಮೊದಲು ಕಾರ್ಯಕರ್ತರಿಗೆ ರಾಜೀನಾಮೆ ನೀಡುವಂತೆ ಸೂಚನೆ ಕೊಟ್ಟಿದ್ದೇನೆ. ನಂತರ ವಿವಿಧ ನಿಗಮ–ಮಂಡಳಿ ಅಧ್ಯಕ್ಷರಾಗಿರುವ ಶಾಸಕರ ಜತೆ ಮಾತನಾಡುತ್ತೇನೆ ಎಂದರು.

# ಗಾಳಿಯ ಪ್ರಕ್ಷುಬ್ಧತೆಗೆ ಸಿಲುಕಿ ಗಗನದಲ್ಲೇ 300 ಅಡಿ ಕುಸಿದ ವಿಮಾನ

## 17 ಪ್ರಯಾಣಿಕರಿಗೆ ಗಾಯ: ತನಿಖೆಗೆ ಆದೇಶ

**ನವದೆಹಲಿ, ಆ.4:** ಫುಕೆಟ್‌ನಿಂದ ನವದೆಹಲಿಗೆ ಆಗಮಿಸುತ್ತಿದ್ದ ಸಂಚರಿಸುತ್ತಿದ್ದ ಏರ್ ಇಂಡಿಯಾ ವಿಮಾನವು ಮಂಗಳವಾರ ಗಗನದಲ್ಲಿದ್ದಾಗ ಕ್ಷಣಕಾಲ ಗಾಳಿಯ ಪ್ರಕ್ಷುಬ್ಧತೆಗೆ ಒಳಗಾಗಿ ದಿಢೀರನೆ 300 ಅಡಿ ಕೆಳಕ್ಕೆ ಜಾರಿದ ಪರಿಣಾಮ 17 ಪ್ರಯಾಣಿಕರು ಗಾಯಗೊಂಡಿದ್ದಾರೆ ಎಂದು ವಿಮಾನಯಾನ ಸಂಸ್ಥೆ ತಿಳಿಸಿದೆ.

ಈ ಘಟನೆ ಸಂಭವಿಸಿದಾಗ ಏರ್‌ಬಸ್ ಮಾದರಿಯ ವಿಮಾನದಲ್ಲಿ 137 ಪ್ರಯಾಣಿಕರು ಮತ್ತು ಎಂಟು ಮಂದಿ ಸಿಬ್ಬಂದಿ ಇದ್ದರು. ತದನಂತರ ವಿಮಾನವು ತನ್ನ ಪ್ರಯಾಣವನ್ನು ಮುಂದುವರಿಸಿ ದೆಹಲಿಯ ಇಂದಿರಾ ಗಾಂಧಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಭಾರತೀಯ ಕಾಲಮಾನ ಬೆಳಿಗ್ಗೆ 11:07ಕ್ಕೆ ಸುರಕ್ಷಿತವಾಗಿ ಲ್ಯಾಂಡ್ ಆಗಿದೆ.

ಗಾಯಗೊಂಡಿರುವ ಪ್ರಯಾಣಿಕರು ಮತ್ತು ನಾಲ್ವರು ಸಿಬ್ಬಂದಿಯನ್ನು ವೈದ್ಯಕೀಯ ತಪಾಸಣೆಗಾಗಿ ಆಸ್ಪತ್ರೆಗೆ ದಾಖಲಿಸಲಾಯಿತು. ಸಂಜೆ 6:50ರ ಹೊತ್ತಿಗೆ, ಐವರು ಪ್ರಯಾಣಿಕರು ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದು, ಉಳಿದ ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಏರ್ ಇಂಡಿಯಾ ಸಂಸ್ಥೆ ತಿಳಿಸಿದೆ.




ಆರಂಭಿಕ ವರದಿಗಳು ಈ ಘಟನೆಯನ್ನು ತೀವ್ರ ರೀತಿಯ 'ಟರ್ಬುಲೆನ್ಸ್' (ವಾಯುಭಾರ ವ್ಯತ್ಯಾಸ/ಗಾಳಿಯ ರಭಸ/ಗಾಳಿಯ ಪ್ರಕ್ಷುಬ್ಧತೆ) ಎಂದು ಬಣ್ಣಿಸಿದ್ದರೂ, ಎತ್ತರ ಕುಸಿತಕ್ಕೆ ನಿಖರ ಕಾರಣವನ್ನು ಏರ್ ಇಂಡಿಯಾ ಬಹಿರಂಗಪಡಿಸಿಲ್ಲ. ಸ್ಥಾಪಿತ ಭದ್ರತೆ ಮತ್ತು ನಿಯಂತ್ರಣ ನಿಯಮಾವಳಿಗಳಂತೆ ಸಂಬಂಧಪಟ್ಟ ವಿಮಾನಯಾನ ಪ್ರಾಧಿಕಾರಗಳಿಗೆ ಮಾಹಿತಿ ನೀಡಲಾಗಿದ್ದು, ತನಿಖೆಗೆ ಸಂಪೂರ್ಣ ಸಹಕಾರ ನೀಡಲಾಗುತ್ತಿದೆ ಎಂದು ವಿಮಾನಯಾನ ಸಂಸ್ಥೆ ತಿಳಿಸಿದೆ. ವಿಮಾನ ತಯಾರಿಕಾ ಸಂಸ್ಥೆಯಾದ ಏರ್‌ಬಸ್‌ಗೂ ಈ ಕುರಿತು ಮಾಹಿತಿ ನೀಡಲಾಗಿದೆ.

ಪ್ರಯಾಣಿಕರು ಮತ್ತು ಸಿಬ್ಬಂದಿಯ ಭದ್ರತೆ ಹಾಗೂ ಕ್ಷೇಮವೇ ತಮ್ಮ ಅತ್ಯುನ್ನತ ಆದ್ಯತೆಯಾಗಿದ್ದು, ಗಾಯಗೊಂಡ ಪ್ರಯಾಣಿಕರು ಮತ್ತು ಸಿಬ್ಬಂದಿಗೆ ನೆರವಾಗಲು ತಂಡಗಳು ಸಜ್ಜಾಗಿವೆ ಎಂದು ಏರ್ ಇಂಡಿಯಾ ಹೇಳಿದೆ.

## ನಿತ್ಯ ಪಂಚಾಂಗ 5.08.2026 ಬುಧವಾರ



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ಆಷಾಢ-ಶ್ರಾವಣ ಮಾಸ**

**ಆಷಾಢ ಬಹುಳ, ಸಪ್ತಮಿ, ಅಶ್ವಿನಿ ನಕ್ಷತ್ರ, ಮುಂಡೇವಾಡಿ ರಾಮದಾಸ ಆರಾಧನೆ, ಮಳಖೇಡ ರಾಮದಾಸ ಆರಾಧನೆ, ಮುಂಡೇವಾಡಿ ದಾಸರಾಯ ಪುಣ್ಯದಿನ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಕೃಷಿ ಅಧಿಕಾರಿಗಳ ನೇಮಕಾತಿ ಗೊಂದಲ ಬಗೆಹರಿಸಲು ಅಧಿಕಾರಿಗಳಿಗೆ ಸಿಎಂ ಸೂಚನೆ


**ಪ್ರತಿಭಟನಾ ನಿರತ ಜಿಕೆವಿಕೆ ವಿದ್ಯಾರ್ಥಿಗಳ ಸಮಸ್ಯೆ ಖುದ್ದು ಆಲಿಸಿದ ಸಿಎಂ ಡಿ ಕೆ ಶಿವಕುಮಾರ್**

**ಪ್ರತಿಭಟನೆ ಕೈಬಿಡಿ ಎಂದ ಸಿಎಂ, ಕಾನೂನಾತ್ಮಕವಾಗಿ ಶೀಘ್ರ ಸಮಸ್ಯೆ ಪರಿಹಾರ**

**ಬೆಂಗಳೂರು, ಆ.4:** ಈ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಮಾಡಲಾದ ನಿಯಮಗಳ ತಿದ್ದುಪಡಿಯಿಂದಾಗಿ ಕೃಷಿ ಹಾಗೂ ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳ ನೇಮಕಾತಿಯಲ್ಲಿ ಉಂಟಾಗಿರುವ ಸಮಸ್ಯೆಯನ್ನು ಕಾನೂನಾತ್ಮಕವಾಗಿ ಬಗೆಹರಿಸಲು ಸಂಬಂಧಪಟ್ಟ ಹಿರಿಯ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ಅವರು ವಿದ್ಯಾರ್ಥಿಗಳಿಗೆ ಭರವಸೆ ನೀಡಿದರು.

14ನೇ ಬೆಂಗಳೂರು ಇಂಡಿಯಾ ನ್ಯಾನೋ ಸಮ್ಮೇಳನ ಸ್ಥಳದ ಬಳಿ ತಮಗೆ ಮನವಿ ಸಲ್ಲಿಸಲು ಮಂಗಳವಾರ ಬಂದಿದ್ದ ಜಿಕೆವಿಕೆ ಕೃಷಿ ವಿ.ವಿ ವಿದ್ಯಾರ್ಥಿಗಳನ್ನು ಗಮನಿಸಿದ ಸಿಎಂ ಡಿ ಕೆ ಶಿವಕುಮಾರ್ ಅವರು ವಿದ್ಯಾರ್ಥಿಗಳನ್ನು ಹತ್ತಿರ ಕರೆದು ಮಾತನಾಡಿದರು.

ಅವರನ್ನು ಮರದ ನೆರಳಿಗೆ ಕರೆದುಕೊಂಡು ಹೋಗಿ ವಸ್ತುಸ್ಥಿತಿಯ ಬಗ್ಗೆ ಮಾಹಿತಿ ಪಡೆದು, ಯಾವ ಹಂತದಲ್ಲಿ ಸಮಸ್ಯೆ ಉಂಟಾಗಿದೆ ಎಂದು ಕೇಳಿದರು. ವಿದ್ಯಾರ್ಥಿಗಳ ಮಾತುಗಳನ್ನು ಆಲಿಸಿದ ನಂತರ ಪ್ರತಿಭಟನೆ ಕೈಬಿಡಿ. ನಮ್ಮ ಸರ್ಕಾರ ನಿರುದ್ಯೋಗ ನಿರ್ಮೂಲನೆಗೆ ಕ್ರಮ ತೆಗೆದುಕೊಂಡಿದೆ. ನಿಮಗೆ ಅನ್ಯಾಯವಾಗದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಇತ್ತೀಚೆಗಷ್ಟೇ ಸರ್ಕಾರವು 900ಕ್ಕೂ ಹೆಚ್ಚು ಕೃಷಿ ಹಾಗೂ ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಿತ್ತು. ಈ ಹುದ್ದೆಗೆ ಬಿ.ಇ, ಬಿ.ಟೆಕ್‌ನಲ್ಲಿ ಬಯೋ ಕೆಮಿಸ್ಟ್ರಿ ಓದಿದ ಅಭ್ಯರ್ಥಿಗಳಿಗೂ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದ್ದನ್ನು ಸ್ಮರಿಸಬಹುದು.



ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ವತಿಯಿಂದ ಸರ್ಕಾರಕ್ಕೆ 2025–26ನೇ ಸಾಲಿನ ಮಧ್ಯಂತರ ಲಾಭಾಂಶದ 1 ಕೋಟಿ ರೂ. ಗಳ ಚೆಕ್ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ವಿಧಾನಸೌಧದಲ್ಲಿ ಮಂಗಳವಾರ ಹಸ್ತಾಂತರಿಸಿದರು. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್, ಅಧ್ಯಕ್ಷ ಮನೋಹರ್, ವ್ಯವಸ್ಥಾಪಕ ನಿರ್ದೇಶಕಿ ಅನಿತಾ ಸಿ. ಹಾಜರಿದ್ದರು.

# ಕಾಂಗ್ರೆಸ್ ಹೈಕಮಾಂಡ್ - ಸಿಎಂ ನೀಡಿದ ಭರವಸೆ ಈಡೇರಿಸದಿರುವುದಕ್ಕೆ ಶಾಸಕರಲ್ಲಿ ತೀವ್ರ ಅಸಮಾಧಾನ: ಬಸವರಾಜ ಬೊಮ್ಮಾಯಿ



**ನವದೆಹಲಿ, ಆ.4:** ಕಾಂಗ್ರೆಸ್ ಹೈಕಮಾಂಡ್ ಹಾಗೂ ಮುಖ್ಯಮಂತ್ರಿಗಳು ಅನೇಕ ನಾಯಕರಿಗೆ ಕೊಟ್ಟಿದ್ದ ಭರವಸೆಗಳನ್ನು ಈಡೇರಿಸಲು ಸಾಧ್ಯವಾಗಿಲ್ಲ. ಈ ಹಿನ್ನೆಲೆಯಲ್ಲಿ ಪಕ್ಷದ ಹಿರಿಯ ಮತ್ತು ಕಿರಿಯ ನಾಯಕರಲ್ಲಿ ತೀವ್ರ ಅಸಮಾಧಾನ ಹೊಗೆಯಾಡುತ್ತಿದೆ ಎಂದು ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟಿದ್ದಾರೆ. ದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, "ಸರ್ಕಾರ ಮತ್ತು ಪಕ್ಷದ ಮೇಲಿದ್ದ ನಿರೀಕ್ಷೆಗಳು ಹೆಚ್ಚಾಗಿದ್ದವು. ಆದರೆ ಈಗಿನ ಪರಿಸ್ಥಿತಿಯಲ್ಲಿ ಹಿರಿಯ ನಾಯಕರಾಗಲಿ ಅಥವಾ ಕಿರಿಯ ನಾಯಕರಾಗಲಿ ಯಾರೂ ಸಂತುಷ್ಟರಾಗಿಲ್ಲ. ಪ್ರಾತಿನಿಧ್ಯದ ವಿಚಾರದಲ್ಲಿ ಮಹಿಳೆಯರಿಗೂ ಸರಿಯಾದ ಸ್ಥಾನಮಾನ ಸಿಕ್ಕಿಲ್ಲ ಹಾಗೂ ಹಲವು ಜಿಲ್ಲೆಗಳಿಗೆ ಸೂಕ್ತ ಪ್ರಾತಿನಿಧ್ಯ ನೀಡದೆ ಸಂಪೂರ್ಣವಾಗಿ ಕಡೆಗಣಿಸಲಾಗಿದೆ. ಕಾಂಗ್ರೆಸ್ ಹೈಕಮಾಂಡ್ ಅನುಕೂಲಕ್ಕಾಗಿ ಸಂಪುಟ ವಿಸ್ತರಣೆ ಮಾಡಲಾಗಿದೆ. ಹೀಗಾಗಿ ಬಹಳ ಜನರು ಬೇಸರಗೊಂಡಿದ್ದಾರೆ ಎಂದು ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದರು.

# ಸಂಪುಟ ವಿಸ್ತರಣೆ ಅಸಮಾಧಾನ ಸಹಜ, ಹೈಕಮಾಂಡ್ ಎಲ್ಲವನ್ನೂ ಸರಿಪಡಿಸಲಿದೆ: ಸಚಿವ ಯತೀಂದ್ರ ಸಿದ್ದರಾಮಯ್ಯ

**ಬೀದರ್, ಆ.4:** ನೂತನ ಸಂಪುಟ ರಚನೆಯಾದಾಗ ಅಥವಾ ವಿಸ್ತರಣೆಯಾದಾಗ ಶಾಸಕರಲ್ಲಿ ಅಸಮಾಧಾನ ಮೂಡುವುದು ಸಹಜ. ಎಲ್ಲಾ ಸಮುದಾಯಕ್ಕೂ ಸಚಿವ ಸ್ಥಾನ ಕೊಡಲು ಎಂದಿಗೂ ಸಾಧ್ಯವಿಲ್ಲ ಎಂದು ಯತೀಂದ್ರ ಸಿದ್ದರಾಮಯ್ಯ ಹೇಳೀದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಯಾವುದೇ ಸರ್ಕಾರ ಅಧಿಕಾರಕ್ಕೆ ಬಂದಾಗ ಹಿರಿಯರು ಹಾಗೂ ಕಿರಿಯರನ್ನು ಒಟ್ಟಾಗಿ ಸೇರಿಸಿ ಸಂಪುಟ ರಚನೆ ಮಾಡಬೇಕಾಗುತ್ತದೆ. ಸಚಿವ ಸ್ಥಾನ ಸಿಗದವರಿಗೆ ಬೇಸರವಾಗುವುದು ಸ್ವಾಭಾವಿಕ. ಎಲ್ಲ ಗೊಂದಲಗಳನ್ನು ಹೈಕಮಾಂಡ್ ಶೀಘ್ರವೇ ಸರಿಪಡಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.



ಸಂಪುಟದ ಸಾಮಾಜಿಕ ಪ್ರಾತಿನಿಧ್ಯದ ಕುರಿತು ಮಾತನಾಡಿದ ಅವರು, ಈ ಬಾರಿಯ ಸಂಪುಟದಲ್ಲಿ ಮುಸ್ಲಿಂ ಸಮುದಾಯದ ಮೂವರಿಗೆ ಸಚಿವ ಸ್ಥಾನ ಕಲ್ಪಿಸಲಾಗಿದೆ. ಒಂದೇ ಬಾರಿಗೆ ಎಲ್ಲಾ ಸಮುದಾಯಕ್ಕೂ ಸಚಿವ ಸ್ಥಾನ ನೀಡಲು ಎಂದಿಗೂ ಸಾಧ್ಯವಾಗುವುದಿಲ್ಲ. ಆದರೆ ಕಾಂಗ್ರೆಸ್ ಪಕ್ಷವು ಎಲ್ಲಾ ವರ್ಗದವರನ್ನು ಸರಿದೂಗಿಸಿಕೊಂಡು ಹೋಗುವ ಕೆಲಸವನ್ನು ಯಶಸ್ವಿಯಾಗಿ ಮಾಡಿದೆ ಎಂದು ಯತೀಂದ್ರ ಪ್ರತಿಪಾದಿಸಿದರು.

### ತಂದೆಯವರಿಗೆ ಬೇಸರವಿಲ್ಲ

ಸಂಪುಟ ವಿಸ್ತರಣೆ ವೇಳೆಯಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ ಅವರು ಗೈರಾಗಿದ್ದರ ಕುರಿತು ಸ್ಪಷ್ಟನೆ ನೀಡಿದ ಅವರು, ತಂದೆಯವರಿಗೆ ಈ ಬಗ್ಗೆ ಯಾವುದೇ ಅಸಮಾಧಾನವಿಲ್ಲ. ಅಂದು ಅವರ ಹುಟ್ಟುಹಬ್ಬವಿದ್ದ ಕಾರಣ ಶುಭಾಶಯ ಕೋರಲು ಸಾವಿರಾರು ಬೆಂಬಲಿಗರು ಹಾಗೂ ಹೊಸದಾಗಿ ಪ್ರಮಾಣವಚನ ಸ್ವೀಕರಿಸಿದ ಸಚಿವರು ಆಗಮಿಸಿದ್ದರು. ಹೀಗಾಗಿ ಅವರು ನಿರತರಾಗಿದ್ದರೆ ವಿನಃ ಯಾವುದೇ ಅಸಮಾಧಾನದಿಂದ ಗೈರುಹಾಜರಾಗಿರಲಿಲ್ಲ ಎಂದು ಯತೀಂದ್ರ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ಇದೇ ವೇಳೆ ಸಿದ್ದರಾಮಯ್ಯನವರ ರಾಜಕೀಯ ಭವಿಷ್ಯದ ಬಗ್ಗೆ ಪ್ರತಿಕ್ರಿಯಿಸಿ, ಅವರು 2028ರ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದು ಈಗಾಗಲೇ ಸ್ಪಷ್ಟಪಡಿಸಿದ್ದಾರೆ. ಆದರೆ ಚುನಾವಣಾ ರಾಜಕೀಯದಿಂದ ನಿವೃತ್ತಿ ಪಡೆದರೂ ಅವರು ಸಕ್ರಿಯ ರಾಜಕಾರಣದಲ್ಲಿ ಮುಂದುವರಿಯಲಿದ್ದಾರೆ. ಕಾಂಗ್ರೆಸ್ ಪಕ್ಷದ ಪರವಾಗಿ ಪ್ರಚಾರ ನಡೆಸುವುದರ ಜೊತೆಗೆ, ಸಮಾಜದಲ್ಲಿ ಧ್ವನಿಯಿಲ್ಲದ ಶೋಷಿತ ವರ್ಗದ ಪರವಾಗಿ ಸದಾ ಕೆಲಸ ಮಾಡಲಿದ್ದಾರೆ ಎಂದು ತಿಳಿಸಿದರು.

# ಹಿರಿಯ ನಾಯಕರ ಅಳಲು ಕೇಳುವವರೇ ಇಲ್ಲ ಕಾಂಗ್ರೆಸ್‌ನಲ್ಲಿ ಅನಾಥಭಾವ ಸೃಷ್ಟಿ: ಶಾಸಕ ಎನ್.ವೈ. ಗೋಪಾಲಕೃಷ್ಣ ಅಸಮಾಧಾನ



**ಬೆಂಗಳೂರು, ಆ.4:** ಪಕ್ಷದಲ್ಲಿ ಹಿರಿಯ ನಾಯಕರ ನೋವು–ನಲಿವುಗಳನ್ನು ಕೇಳುವವರೇ ಇಲ್ಲದ ಸ್ಥಿತಿ ನಿರ್ಮಾಣವಾಗಿದ್ದು, ಕಾಂಗ್ರೆಸ್‌ನಲ್ಲಿ ಅನಾಥ ವಾತಾವರಣ ಸೃಷ್ಟಿಯಾಗಿದೆ ಎಂದು ಹಿರಿಯ ಶಾಸಕ ಎನ್.ವೈ. ಗೋಪಾಲಕೃಷ್ಣ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಏಳು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರೂ ಸಚಿವ ಸ್ಥಾನದಿಂದ ವಂಚಿತನಾಗಿದ್ದೇನೆ. ಈ ಬಾರಿ ಹೊಸಬರಿಗೆ ಅವಕಾಶ ನೀಡುತ್ತೇವೆ ಎಂದು ಹೇಳಿದ್ದರಿಂದ, ಈ ಹಿಂದೆ ಸಚಿವರಾಗಿದ್ದ ಕೆಲವರನ್ನು ಕೈಬಿಟ್ಟು ನಮಗೆ ಅವಕಾಶ ನೀಡಬಹುದು ಎಂದು ನಿರೀಕ್ಷಿಸಿದ್ದೆವು. ಆದರೆ ಅದು ಆಗಲಿಲ್ಲ. ಸಂಪುಟ ವಿಸ್ತರಣೆ ಪ್ರಕ್ರಿಯೆಯೂ ಸಮರ್ಪಕವಾಗಿ ನಡೆದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಮ್ಮ ಅಳಲನ್ನು ಯಾರ ಬಳಿ ಹೇಳಿಕೊಳ್ಳಬೇಕು. ಕ್ಷೇತ್ರದ ಜನರ ಮುಂದೆ ಕೂಡ ನೋವನ್ನು ಹೇಳಿಕೊಳ್ಳಬೇಕಾದ ಪರಿಸ್ಥಿತಿ ಬಂದಿದೆ. ನಮಗೆ ದೇವರೇ ಗತಿ ಎಂದು ಭಾವುಕರಾದರು. ನಮಗೂ ವಯಸ್ಸಾಗುತ್ತಿದೆ. ಈ ಸಂದರ್ಭದಲ್ಲಿ ಸಚಿವ ಸ್ಥಾನ ಸಿಗಬಹುದು ಎಂದು ನಿರೀಕ್ಷಿಸಿದ್ದೆ. ಪಕ್ಷಕ್ಕೆ ಯಾವುದೇ ದ್ರೋಹ ಮಾಡದೆ ನಿಷ್ಠೆಯಿಂದ ಕೆಲಸ ಮಾಡಿದ್ದೇನೆ. 1994ರಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿಲ್ಲದಿದ್ದಾಗಲೂ ಟಿಕೆಟ್ ಪಡೆದು ಗೆದ್ದು ಬಂದಿದ್ದೆ. ಆಗಿನ ಮುಖ್ಯಮಂತ್ರಿ ಧರ್ಮಸಿಂಗ್ ಅವರು ನನ್ನನ್ನು ವಿಧಾನಸಭೆಯ ಉಪಸಭಾಧ್ಯಕ್ಷರನ್ನಾಗಿ ಮಾಡಿದ್ದರು. ಕೂಡ್ಲಗಿ, ಬಳ್ಳಾರಿ ಗ್ರಾಮಾಂತರ ಸೇರಿ ಹಲವು ಕ್ಷೇತ್ರಗಳಲ್ಲಿ ಗೆದ್ದು ಪಕ್ಷಕ್ಕಾಗಿ ದುಡಿದಿದ್ದೇನೆ. ನನ್ನ ಅನುಭವ, ಕಷ್ಟ ಮತ್ತು ನಿಷ್ಠೆಯನ್ನು ಪರಿಗಣಿಸುತ್ತಾರೆ ಎಂದುಕೊಂಡಿದ್ದೆ. ಆದರೆ ನಿರಾಶೆಯಾಗಿದೆ ಎಂದರು. ನಾನು ಸಚಿವನಾಗಿಲ್ಲ ಎಂಬ ನೋವಿಗಿಂತಲೂ ನನ್ನ ಕ್ಷೇತ್ರದ ಜನರು ಹಾಗೂ ಕಾರ್ಯಕರ್ತರು ಬೇಸರಗೊಂಡಿರುವುದು ಹೆಚ್ಚು ನೋವುಂಟು ಮಾಡುತ್ತಿದೆ ಎಂದು ಹೇಳಿದರು.

ಸಂಪುಟ ವಿಸ್ತರಣೆ ಕುರಿತು ಪ್ರಶ್ನಿಸಿದ ಅವರು, ಈ ಬಾರಿ ಯಾವುದೇ ಸ್ಪಷ್ಟ ಮಾನದಂಡಗಳನ್ನು ಪಾಲಿಸಿದಂತೆ ಕಾಣುತ್ತಿಲ್ಲ. ಮೊದಲ ಪಟ್ಟಿಯಲ್ಲಿ ಮಹಿಳಾ ಸಚಿವರ ಹೆಸರಿದ್ದು, ಬಳಿಕ ಮಂಕಾಳ ವೈದ್ಯ ಅವರನ್ನು ಸೇರಿಸಲಾಗಿದೆ. ಯಾವ ಮಾನದಂಡದ ಆಧಾರದ ಮೇಲೆ ಈ ಬದಲಾವಣೆಗಳು ನಡೆದವು ಎಂಬುದು ಅರ್ಥವಾಗುತ್ತಿಲ್ಲ ಎಂದು ಟೀಕಿಸಿದರು. ಹಿರಿಯರಿಂದ ಪಕ್ಷ ಸಂಘಟನೆ ಆಗುವುದಿಲ್ಲ ಎಂಬ ಅಭಿಪ್ರಾಯ ಸರಿಯಲ್ಲ. ತಾತ–ಮುತ್ತಾತಂದಿರು ಆಸ್ತಿ ಮಾಡದೇ ಇದ್ದರೆ, ನಾವು ಇಂದು ಈ ಮಟ್ಟಕ್ಕೆ ಬರುತ್ತಿರಲಿಲ್ಲ. ಪಕ್ಷದಲ್ಲಿ ಅನುಭವಕ್ಕೂ ಗೌರವ ಇರಬೇಕು ಎಂದು ಹೇಳಿದರು.

**ಸರ್ಕಾರ ಅಸ್ಥಿರಗೊಳಿಸುವ ಕೆಲಸ ಮಾಡಲ್ಲ**

ತಕ್ಷಣ ಯಾವುದೇ ಆತುರದ ನಿರ್ಧಾರ ತೆಗೆದುಕೊಳ್ಳುವುದಿಲ್ಲ. ಮೊದಲು ಕ್ಷೇತ್ರದ ಜನರ ಬಳಿ ಹೋಗಿ ಅವರ ಅಭಿಪ್ರಾಯ ಕೇಳುತ್ತೇನೆ. ಜನರು ತೆಗೆದುಕೊಳ್ಳುವ ನಿರ್ಧಾರಕ್ಕೆ ಬದ್ಧನಾಗಿರುತ್ತೇನೆ. ಸರ್ಕಾರವನ್ನು ಅಸ್ಥಿರಗೊಳಿಸುವುದು, ಮುಜುಗರಕ್ಕೆ ಸಿಲುಕಿಸುವಂತಹ ಕೆಲಸವನ್ನು ಮಾಡುವುದಿಲ್ಲ ಎಂದು ಗೋಪಾಲಕೃಷ್ಣ ಸ್ಪಷ್ಟಪಡಿಸಿದರು.

# ಬಿಜೆಪಿಯವರಿಗಷ್ಟೇ ಅಸಮಾಧಾನ, ಪಕ್ಷದಲ್ಲಿ ಯಾರಿಗೂ ಆಗಿಲ್ಲ: ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್

**ಬೆಂಗಳೂರು, ಆ.4:** ನಮ್ಮ ಪಕ್ಷದಲ್ಲಿ ಯಾರಿಗೂ ಅಸಮಾಧಾನ ಆಗಿಲ್ಲ. ಅಸಮಾಧಾನ ಯಾರಿಗಾದರೂ ಆಗಿದ್ದರೆ ಅದು ಬಿಜೆಪಿಯವರಿಗೆ. ಕಾಂಗ್ರೆಸ್ ಪಕ್ಷದಲ್ಲಿ ಶಾಸಕರು ತಮ್ಮ ಅಭಿಪ್ರಾಯ ಹೇಳಿದ್ದಾರೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹೇಳಿದ್ದಾರೆ.

ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಸಿದ್ದರಾಮಯ್ಯ, ಸಿಎಂ ಡಿ.ಕೆ. ಶಿವಕುಮಾರ್ ಅವರು ಶೋಷಿತ ಸಮುದಾಯಗಳಿಗೆ ಇದೇ ಮೊದಲ ಬಾರಿಗೆ ದೊಡ್ಡ ಪ್ರಮಾಣದಲ್ಲಿ ಸಂಪುಟದಲ್ಲಿ ಅವಕಾಶ ನೀಡಿದ್ದಾರೆ. ಈ ತೀರ್ಮಾನದಲ್ಲಿ ಕೆ.ಸಿ. ವೇಣುಗೋಪಾಲ್ ಹಾಗೂ ಸುರ್ಜೇವಾಲ ಇದ್ದರು. ನಮ್ಮ ಪಕ್ಷದಲ್ಲಿ ನಾಯಕತ್ವದ ಭಂಡಾರವೇ ಇದೆ. ಬಿಜೆಪಿಯವರಂತೆ ನಾಯಕತ್ವದ ಕೊರತೆ ಇಲ್ಲ. ನಮ್ಮಲ್ಲಿ ಬಹುತೇಕರು ನಾಲ್ಕರಿಂದ ಐದು ಬಾರಿ ಶಾಸಕರಾದವರು ಇದ್ದಾರೆ. 140 ಜನರ ಪೈಕಿ ಮೊದಲ ಬಾರಿ ಗೆದ್ದವರು 48 ಜನ, ಉಳಿದವರೆಲ್ಲರೂ ಹಲವು ಬಾರಿ ಗೆದ್ದಿರುವವರೆ ಎಂದು ವಿವರಿಸಿದರು.



ಪೌರಕಾರ್ಮಿಕರ ದಂಪತಿಗಳ ಮಗನಿಗೆ ಸಚಿವ ಸ್ಥಾನ ನೀಡುವ ಮೂಲಕ ನಾವು ಹೊಸ ಇತಿಹಾಸ ಬರೆದಿದ್ದೇವೆ. ಇಂತಹ ಇತಿಹಾಸ ಬಿಜೆಪಿಯವರಿಂದ ಸಾಧ್ಯವೇ. ಬೊಮ್ಮಾಯಿ ಅವರ ಸರ್ಕಾರದಲ್ಲಿ 13 ಜಿಲ್ಲೆಗಳಿಗೆ ಪ್ರಾತಿನಿಧ್ಯ ಇರಲಿಲ್ಲ. ಕೆಲವು ಸಮುದಾಯಗಳನ್ನು ಕೈಬಿಟ್ಟಿದ್ದರು. ನಾವು ಬಹುತೇಕ ಎಲ್ಲಾ ಜಿಲ್ಲೆಗಳಿಗೆ ಪ್ರಾತಿನಿಧ್ಯ ನೀಡಿದ್ದು, ಬೇರೆಯವರಿಗೆ ಅವಕಾಶ ನೀಡಬೇಕು ಎಂಬ ಮಾನದಂಡ ಹಿನ್ನೆಲೆಯಲ್ಲಿ ಕಳೆದ ಬಾರಿ ಸಚಿವರಾದವರಲ್ಲಿ ಕೆಲವರಿಗೆ ಈ ಬಾರಿ ಅವಕಾಶ ನೀಡಿಲ್ಲ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು, ಕ್ರೈಸ್ತರು, ಒಕ್ಕಲಿಗರು, ಲಿಂಗಾಯತರಿಗೆ ಅವಕಾಶ ಕಲ್ಪಿಸಿದ್ದು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲರನ್ನು ಒಳಗೊಂಡ ಸರ್ಕಾರ ಯಾವುದಾದರೂ ಇದ್ದರೆ ಅದು ಕಾಂಗ್ರೆಸ್ ಸರ್ಕಾರ. ಕೆಲವು ಸಂದರ್ಭದಲ್ಲಿ ಬೇಸರ ಆಗುತ್ತದೆ. ನಾವು ಎಲ್ಲರನ್ನು ಒಪ್ಪಿಸುತ್ತೇವೆ. ರಾಜೀನಾಮೆ ಹಿಂಪಡೆದಿದ್ದಾರೆ ಎಂದು ತಿಳಿಸಿದರು.

ನೀವು ಮನವೊಲಿಸುತ್ತೇವೆ ಎನ್ನುತ್ತೀರಿ, ಸಿಎಂ ರಾಜೀನಾಮೆ ಅಂಗೀಕರಿಸುತ್ತೇವೆ ಎಂದಿದ್ದು ನಿಮ್ಮಲ್ಲಿ ಹೊಂದಾಣಿಕೆ ಇಲ್ಲವೇ ಎಂದು ಕೇಳಿದಾಗ, ಮುಖ್ಯಮಂತ್ರಿಗಳು ಸರ್ಕಾರದಲ್ಲಿರುವವರು. ಅವರ ಸರ್ಕಾರದಲ್ಲಿರುವವರು ರಾಜೀನಾಮೆ ಕೊಟ್ಟರೆ ರಾಜೀನಾಮೆ ಅಂಗೀಕರಿಸುತ್ತಾರೆ. ಪಕ್ಷದಲ್ಲಿರುವವರು ನನ್ನ ಬಳಿ ರಾಜೀನಾಮೆ ತೆಗೆದುಕೊಂಡು ಬಂದರೆ ನಾನು ಮಾತನಾಡಿ ಮನವೊಲಿಸುತ್ತೇನೆ ಎಂದರು.

ನಿಮ್ಮ ಶಾಸಕರೇ ಟೀಕೆ ಮಾಡುತ್ತಿದ್ದಾರೆ ಹೊಸಬರಿಗೆ ಕೊಡುತ್ತೇನೆ ಎಂದು 2–3 ಬಾರಿ ಗೆದ್ದವರಿಗೆ ಅವಕಾಶ ನೀಡಿದ್ದೀರಿ ಎಂದು ಕೇಳಿದಾಗ, ಕೆಲವು ಸಮುದಾಯಗಳಲ್ಲಿ ಕೆಲವೇ ನಾಯಕರಿದ್ದಾರೆ. ಬೆಳೆದು ನಿಂತಿರುವ ಅವರನ್ನು ಹಾಳು ಮಾಡಲು ಆಗುವುದಿಲ್ಲ. ಮತ್ತೆ ಕೆಲವು ಸಮುದಾಯಗಳಲ್ಲಿ ನಾಯಕರುಗಳ ಭಂಡಾರವೇ ಇದೆ. ಎಲ್ಲರನ್ನು ಸಮಾಧಾನಪಡಿಸಲು ಆಗುವುದಿಲ್ಲ. ಪ್ರಾತಿನಿಧ್ಯ ವಂಚಿತ ಸಮುದಾಯಗಳಿಗೆ ಅವಕಾಶ ಮಾಡಿಕೊಡಲಾಗಿದೆ ಎಂದರು.

ಸಚಿವ ಸಂಪುಟ ವಿಸ್ತರಣೆ ನಿಮಗೆ ತೃಪ್ತಿ ತಂದಿದೆಯೇ ಎಂದು ಕೇಳಿದಾಗ, ನನಗೆ ತೃಪ್ತಿ ತಂದಿದೆ. ಪೌರಕಾರ್ಮಿಕ ಮಗನಿಗೆ ಅವಕಾಶ ಸಿಕ್ಕಿರುವುದು ನೋಡಿದರೆ ನನಗಾಗಿರುವ ಸಂತೋಷ ಬೇರೆ ಯಾರಿಗೂ ಆಗಿಲ್ಲ. ಇನ್ನೂ ಬೇರೆ ಬೇರೆ ಸಮುದಾಯಗಳಿಗೆ ಅವಕಾಶ ಮಾಡಿಕೊಟ್ಟಿದ್ದೇವೆ. ಸಾಮಾಜಿಕ ನ್ಯಾಯದಲ್ಲಿ ನಂಬಿಕೆ ಇಟ್ಟಿರುವುದು ಕಾಂಗ್ರೆಸ್ ಪಕ್ಷ. ಎಲ್ಲವೂ ಪರಿಪೂರ್ಣವಾಗಿ ಸರಿಯಾಗಿದೆ ಎಂದು ನಾನು ಹೇಳುವುದಿಲ್ಲ. ಲೋಪದೋಷಗಳು ಕಾರಣಾಂತರಗಳಿಂದ ಆಗಿದ್ದರೆ ಸರಿಪಡಿಸಿಕೊಳ್ಳಲಾಗುವುದು ಎಂದು ತಿಳಿಸಿದರು.

ಬ್ರಾಹ್ಮಣ ಸಮುದಾಯಕ್ಕೆ ಮೊದಲ ಬಾರಿಗೆ ಅವಕಾಶ ಸಿಕ್ಕಿಲ್ಲ ಎಂಬ ಬಗ್ಗೆ ಕೇಳಿದಾಗ, ಒಂದು ಸಮುದಾಯಕ್ಕೆ ಸಿಕ್ಕಿಲ್ಲ ಎಂಬುದಲ್ಲ. ಬಹಳಷ್ಟು ಸಮುದಾಯಗಳಿವೆ. ಯಾವ ಸಮುದಾಯಗಳಿಗೆ ಅವಕಾಶ ಸಿಕ್ಕಿಲ್ಲ ಅವರನ್ನು ಜೋಡಿಸುವ ಕೆಲಸ ಮಾಡಿದ್ದೇವೆ. ಅವಕಾಶ ಸಿಗದೇ ಇರುವ ಅನೇಕ ಸಮುದಾಯಗಳಿವೆ ಎಂದು ತಿಳಿಸಿದರು.

# ಮುಖ್ಯಮಂತ್ರಿಗೆ ಸಚಿವರ ಆಯ್ಕೆ ಸ್ವಾತಂತ್ರ್ಯವಿಲ್ಲ

## ಅನೇಕರು ಪೇಮೆಂಟ್ ಮೂಲಕ ಸಂಪುಟ ಸೇರಿದ್ದಾರೆ: ಪ್ರತಿಪಕ್ಷ ನಾಯಕ ಅಶೋಕ್ ಟೀಕೆ

**ಬೆಂಗಳೂರು, ಆ.4:** ಹೊಸ ಸಚಿವ ಸಂಪುಟದಲ್ಲಿ ಭ್ರಷ್ಟಾಚಾರಿಗಳು ತುಂಬಿಕೊಂಡಿದ್ದು, ಅನೇಕರು ಪೇಮೆಂಟ್ ಮೂಲಕ ಬಂದು ಸೇರಿದ್ದಾರೆ. ಸಚಿವರನ್ನು ಆಯ್ಕೆ ಮಾಡುವ ಸ್ವಾತಂತ್ರ್ಯ ಮುಖ್ಯಮಂತ್ರಿಗೆ ಇರಲಿಲ್ಲ ಎಂಬುದು ಸ್ಪಷ್ಟವಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಟೀಕಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಹಿಂದೆಂದೂ ಕಂಡಿರದ ಸಚಿವ ಸಂಪುಟ ರಚನೆಯಾಗಿದೆ. ಪರಿಶಿಷ್ಟರ 187 ಕೋಟಿ ರೂ. ಲೂಟಿಮಾಡಿ ಚುನಾವಣೆಗೆ ಬಳಸಿರುವುದು ಖಚಿತವಾಗಿದೆ. ಅದನ್ನು ಮಾಜಿ ಸಿಎಂ ಸಿದ್ದರಾಮಯ್ಯ ವಿಧಾನಸಭೆಯಲ್ಲಿ ಒಪ್ಪಿಕೊಂಡಿದ್ದರು. ಈ ಪ್ರಕರಣದಲ್ಲಿ ಬಿ.ನಾಗೇಂದ್ರ ಜೈಲಿಗೆ ಹೋದರೂ, ಈಗ ಮತ್ತೆ ಸಚಿವ ಸಂಪುಟ ಸೇರಿದ್ದಾರೆ. ಅವರಿಗೆ ಕ್ಲೀನ್‌ಚಿಟ್ ಕೊಟ್ಟವರು ಯಾರು ಎಂದು ಪ್ರಶ್ನಿಸಿದರು.

ಹಳೆ ಸಿಎಂ ಅವರನ್ನು ತೆಗೆದುಹಾಕಿದರೆ, ಹೊಸ ಸಿಎಂ ವಾಷಿಂಗ್ ಮಶೀನ್ ಬಳಸಿ ತೊಳೆದು ಕರೆದುಕೊಂಡಿದ್ದಾರೆ. ಕರಾವಳಿ–ಮಲೆನಾಡು ಭಾಗಕ್ಕೆ ಪ್ರಾತಿನಿಧ್ಯ ನೀಡಿಲ್ಲ. ಅಲ್ಲಿ ನಾವು ಹೇಗಿದ್ದರೂ ಸೋಲಲಿದ್ದೇವೆ ಎಂಬುದನ್ನು ಈಗಾಗಲೇ ಒಪ್ಪಿಕೊಂಡಿದ್ದಾರೆ ಎಂದು ವ್ಯಂಗ್ಯವಾಡಿದರು.

ಯಾದಗಿರಿ, ರಾಯಚೂರು, ವಿಜಯನಗರ, ಕೋಲಾರ, ಚಿಕ್ಕಬಳ್ಳಾಪುರ ಮೊದಲಾದ ಹಿಂದುಳಿದ ಜಿಲ್ಲೆಗಳಲ್ಲಿ ಸಚಿವರೇ ಇಲ್ಲ. ಬಹಳ ಸಮುದಾಯಗಳನ್ನು ಪ್ರತಿನಿಧಿಸುವವರೂ ಇಲ್ಲ ಎಂದರು.

ಕೆಲವು ಶಾಸಕರು, ಅವರ ಬೆಂಬಲಿಗರು ಪ್ರತಿಭಟನೆ ನಡೆಸುತ್ತಿದ್ದು, ಒಬ್ಬರು ರಾಜೀನಾಮೆ ನೀಡಲು ಮುಂದಾಗಿದ್ದಾರೆ.

ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ಮಾಡಿದರೆ ಕೇಸು ದಾಖಲಿಸುತ್ತಾರೆ. ಈಗ ಅನೇಕ ಕಡೆ ಕಾಂಗ್ರೆಸ್ ಕಾರ್ಯಕರ್ತರೇ ಕೈಗೇ ಏನೇನೂ ತೆಗೆದುಕೊಂಡು ಸಿಎಂ ಭಾವಚಿತ್ರಕ್ಕೆ ಹೊಡೆದಿದ್ದಾರೆ. ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಸಚಿವ ಸಂಪುಟದಲ್ಲಿ ಹೊಸತನವಿಲ್ಲ. ಅದೇ ಮುಖಗಳು, ಭ್ರಷ್ಟಾಚಾರಿಗಳನ್ನು ಮರಳಿ ಸಂಪುಟಕ್ಕೆ ತರಲಾಗಿದೆ. ಇದು ಸಿಎಂ ಡಿ.ಕೆ.ಶಿವಕುಮಾರ್ ಅವರ ಪಟ್ಟಿಯಲ್ಲ, ಪೇಮೆಂಟ್ ಲಿಸ್ಟ್ ಎಂದು ತಿಳಿದುಬಂದಿದೆ. ಏಕೆಂದರೆ ದಿಢೀರನೆ ಮಂಕಾಳು ವೈದ್ಯ ಅವರ ಹೆಸರು ತೆಗೆದುಹಾಕಿ ಎಸ್.ಎಸ್.ಮಲ್ಲಿಕಾರ್ಜುನ್ ಅವರ ಹೆಸರು ಸೇರಿಸಲಾಗಿದೆ. ಇದು ಕಾಂಚಾಣದ ಮಹಿಮೆ ಎಂದರು.



ಸಚಿವ ಸಂಪುಟದಲ್ಲಿ ಒಬ್ಬ ಮಹಿಳೆಗೂ ಸ್ಥಾನ ನೀಡಿಲ್ಲ. ಚುನಾವಣೆಗೆ ಮುನ್ನ ಮಹಿಳೆಯರ ಸಬಲೀಕರಣದ ಬಗ್ಗೆ ಉದ್ದುದ್ದ ಮಾತನಾಡಿದ್ದ ಕಾಂಗ್ರೆಸ್ ಹೈಕಮಾಂಡ್ ಈಗ ಒಬ್ಬ ಮಹಿಳೆಗೂ ಅವಕಾಶ ನೀಡಿಲ್ಲ. 12% ಇರುವ ಮುಸ್ಲಿಮರಿಗೆ 3 ಸ್ಥಾನ ನೀಡಲಾಗಿದೆ. 50% ಇರುವ ಮಹಿಳೆಯರಿಗೆ ಶೂನ್ಯ ಸ್ಥಾನ ನೀಡಲಾಗಿದೆ. ಗಾಯತ್ರಿ ಶಾಂತಗೌಡರು ಸುದ್ದಿಗೋಷ್ಠಿ ಮಾಡಿ ಮಾತಾಡಿದ್ದರು. ಕೊನೆಗೆ ಅವರಿಗೆ ಖಾತೆಯೇ ಇಲ್ಲವಾಯಿತು. ಇದು ರಾಜ್ಯದ ಮಹಿಳೆಯರಿಗೆ ಮಾಡಿದ ದ್ರೋಹ. ಈ ಇದುವರೆಗೆ ಟೇಕಾಫ್ ಆಗಿಲ್ಲ, ಇನ್ನು ಮುಂದೆಯೂ ಆಗಲ್ಲ ಎಂದರು.

ಕಾಂಗ್ರೆಸ್ ನಾಯಕರು ಸಂವಿಧಾನದ ಪುಸ್ತಕವನ್ನು ಹಿಡಿದುಕೊಂಡಿರುತ್ತಾರೆ. ಅದೇ ಕಾಂಗ್ರೆಸ್ ತನ್ನ ಲೆಟರ್ ಹೆಡ್ ನಲ್ಲಿ ಸ್ಪೀಕರ್, ಡೆಪ್ಯುಟಿ ಸ್ಪೀಕರ್, ಪರಿಷತ್ತಿನ ಸಭಾಪತಿ, ಉಪಸಭಾಪತಿ ಹೆಸರನ್ನು ಉಲ್ಲೇಖ ಮಾಡುವ ಮೂಲಕ ಸಂವಿಧಾನದ ಆಶಯಗಳನ್ನು ಗಾಳಿಗೆ ತೂರಿದೆ. ಇಡೀ ವಿಧಾನಸಭೆಯನ್ನು ಕಾಂಗ್ರೆಸ್ ಮನೆ ಮಾಡಲಾಗಿದೆ. ನೌಕರರನ್ನು ನೇಮಕ ಮಾಡುವ ಪಟ್ಟಿಯಂತೆ ಪರಿಗಣಿಸಿದ್ದಾರೆ. ಇದಕ್ಕಾಗಿ ಕಾಂಗ್ರೆಸ್ ಜನರ ಕ್ಷಮೆಯಾಚಿಸಬೇಕು. ಮುಖ್ಯಮಂತ್ರಿಯ ಪರಮಾಧಿಕಾರವನ್ನೇ ಕಿತ್ತುಕೊಂಡಿರುವುದರಿಂದ ಅವರು ರಬ್ಬರ್ ಸ್ಟಾಂಪ್ ಸಿಎಂ ಆಗಿದ್ದಾರೆ ಎಂದು ಟೀಕಿಸಿದರು.

**ಕಾವೇರಿ ನೀರು ಹಂಚಿಕೆ**

ಕಾವೇರಿ ನೀರು ಹಂಚಿಕೆಗಾಗಿ ತಮಿಳುನಾಡು ಸರ್ಕಾರ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ. ಇದರಿಂದಾಗಿ ನಮಗೆ ಗಂಡಾಂತರ ಕಾದಿದೆ ಎಂಬುದು ಸ್ಪಷ್ಟವಾಗಿದೆ. ಸಿಎಂ ಜೋಸೆಫ್ ವಿಜಯ್ ಜೊತೆ ಹೊಂದಾಣಿಕೆ ಮಾಡಿಕೊಂಡು ನೀರು ಹರಿಸಿದರೆ ಜನರು ಸುಮ್ಮನಿರುವುದಿಲ್ಲ. ಸುಪ್ರೀಂ ಕೋರ್ಟ್‌ನಲ್ಲಿ ಸೋತರೆ ರಾಜ್ಯದ ಕಾಂಗ್ರೆಸ್ ಟಿವಿಕೆಗೆ ಶರಣಾಗಿದೆ ಎಂದೇ ಅರ್ಥ ಮಾಡಿಕೊಳ್ಳಬೇಕಾಗುತ್ತದೆ. ಸಿಎಂ ವಿಜಯ್ ಜತೆ ಸಭೆ ನಡೆಸಲು ಲಕ್ಷಾಂತರ ಖರ್ಚು ಮಾಡಿ ಸಮ್ಮೇಳನ ಸಭಾಂಗಣವನ್ನು ನವೀಕರಣ ಮಾಡಲಾಗುತ್ತಿದೆ. ಬರಗಾಲವಿದ್ದಾಗ ಇಂತಹ ವೆಚ್ಚ ಅಗತ್ಯವಿರಲಿಲ್ಲ ಎಂದರು. ಶುಕ್ರವಾರ ಬೆಳಗ್ಗೆ ವಿಧಾನಸಭಾ ಅಧಿವೇಶನದ ಕುರಿತು ಸಭೆ ನಡೆಸಲಾಗುತ್ತಿದೆ. ಯಾವ ರೀತಿ ಹೋರಾಟ ಮಾಡಬೇಕು, ಚರ್ಚೆ ಮಾಡಬೇಕೆಂದು ಚರ್ಚಿಸಲಾಗುವುದು ಎಂದರು.

# ಕನ್ನಡ ಪುಸ್ತಕ ಪ್ರಾಧಿಕಾರದಿಂದ ನಾಲ್ಕು ಹೊಸ ಪ್ರಶಸ್ತಿ ಘೋಷಣೆ, ನಾಲ್ವರ ಆಯ್ಕೆ: ಅಧ್ಯಕ್ಷ ಡಾ. ಮಾನಸ

**ಬೆಂಗಳೂರು, ಆ.4:** ಕನ್ನಡ ಪುಸ್ತಕ ಪ್ರಾಧಿಕಾರದಿಂದ ಪ್ರಸಕ್ತ ವರ್ಷದಿಂದ ಜಾರಿಗೆ ಬರುವಂತೆ ನಾಲ್ಕು ಹೊಸ ಪ್ರಶಸ್ತಿಗಳನ್ನು ಸ್ಥಾಪಿಸಿ ಘೊಷಿಸಲಾಗಿದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ. ಮಾನಸ ಹೇಳಿದ್ದಾರೆ.

ಪುಸ್ತಕ ಪ್ರಾಧಿಕಾರ ಅನುಷ್ಠಾನಗೊಳಿಸಿ ಜಾರಿಗೊಳಿಸುತ್ತಿರುವ ಮನೆಗೊಂದು ಗ್ರಂಥಾಲಯ ಕಾರ್ಯಕ್ರಮದಡಿಯಲ್ಲಿ ವಿಶಿಷ್ಟ ಹಾಗೂ ಉತ್ತಮ ಗ್ರಂಥಾಲಯಗಳನ್ನು ಅನುಷ್ಠಾನಗೊಳಿಸಿದವರಿಗೆ ಕನ್ನಡದ ಶ್ರೇಷ್ಠ ಬರಹಗಾರರ ಹೆಸರಿನಲ್ಲಿ ಸ್ಥಾಪಿಸಲಾದ ಈ ಪ್ರಶಸ್ತಿಗಳನ್ನು ನೀಡಲಾಗುವುದೆಂದು ಅವರು ತಿಳಿಸಿದರು. ಈ ನಾಲ್ಕು ಪ್ರಶಸ್ತಿಗಳನ್ನು ರಾಜ್ಯದ ನಾಲ್ಕು ಕಂದಾಯ ವಿಭಾಗಗಳಿಗೆ ಒಂದರಂತೆ ನೀಡಲಾಗುತ್ತದೆ. ಡಾ. ಪಿ.ಆರ್. ತಿಪ್ಪೇಸ್ವಾಮಿ, ಶ್ರೀಮತಿ ನಂಜನಗೂಡು ತಿರುಮಲಾಂಬ, ಗಳಗನಾಥ ಹಾಗೂ ಡಾ. ಹಾ.ಮಾ. ನಾಯಕ ಅವರ ಹೆಸರಿನಲ್ಲಿ ಈ ಪ್ರಶಸ್ತಿಗಳನ್ನು ನೀಡಲಾಗುವುದು ಎಂದು ಡಾ. ಮಾನಸ ಹೇಳಿದ್ದಾರೆ.

2025ನೇ ಸಾಲಿನಲ್ಲಿ ರಾಜ್ಯದ ನಾಲ್ಕು ಕಂದಾಯ ವಿಭಾಗಗಳಲ್ಲಿ ನಾಲ್ಕು ಮಂದಿ ಗಣ್ಯರನ್ನು ಈ ಪ್ರಶಸ್ತಿಗಾಗಿ ಆಯ್ಕೆ ಮಾಡಲಾಗಿದ್ದು, ಪ್ರಶಸ್ತಿ ವಿವರ ಕೆಳಕಂಡಂತಿದೆ.

ಈ ಪ್ರಶಸ್ತಿಗಳನ್ನು ಪುಸ್ತಕ ಪ್ರಾಧಿಕಾರದ ವಾರ್ಷಿಕ ಪ್ರಶಸ್ತಿಗಳ ಜೊತೆಯಲ್ಲಿಯೇ ಪ್ರದಾನ ಮಾಡಲಾಗುವುದು ಪ್ರಸಸ್ತಿ ಪ್ರದಾನ ದಿನಾಂಕವನ್ನುಥ ಸಧ್ಯದಲ್ಲಿಯೇ ತಿಳಿಸಲಾಗುವುದು ಎಂದು ಡಾ. ಮಾನಸ ತಿಳಿಸಿದರು.

### ಯಾರಿಗೆ - ಯಾವ ಪ್ರಶಸ್ತಿ:

1) ಡಾ. ಪಿ.ಆರ್. ತಿಪ್ಪೇಸ್ವಾಮಿ ಪ್ರಶಸ್ತಿ: ಶ್ರೀ ಆಶಿಕ್, ಶಂಕರಘಟ್ಟ, ಶಿವಮೊಗ್ಗ (ಬೆಂಗಳೂರು ವಿಭಾಗ – ಪ್ರಶಸ್ತಿ ಮೊತ್ತ ರೂ.25,000–00)
2) ಶ್ರೀಮತಿ ನಂಜನಗೂಡು ತಿರುಮಲಾಂಬ ಪ್ರಶಸ್ತಿ: ಡಾ. ಬೆಟ್ಟಸ್ವಾಮಿ ಎಚ್.ಬಿ., ಮೈಸೂರು (ಮೈಸೂರು ವಿಭಾಗ – ಪ್ರಶಸ್ತಿ ಮೊತ್ತ ರೂ.25,000–00)
3) ಗಳಗನಾಥ ಪ್ರಶಸ್ತಿ: ಶೆಟ್ಟಿ ಚಿನ್ನದೊಡ್ಡಪ್ಪ ವಿಭೂತಿ, ಹಾವೇರಿ (ಬೆಳಗಾವಿ ವಿಭಾಗ – ಪ್ರಶಸ್ತಿ ಮೊತ್ತ ರೂ.25,000–00)
4) ಡಾ. ಹಾ.ಮಾ. ನಾಯಕ ಪ್ರಶಸ್ತಿ: ಡಾ. ಶೈಲಜಾ ಎನ್. ಬಾಗೇವಾಡಿ, ಕಲಬುರಗಿ (ಕಲಬುರಗಿ ವಿಭಾಗ – ಪ್ರಶಸ್ತಿ ಮೊತ್ತ ರೂ.25,000–00)

# ವಾಲ್ಮೀಕಿ ನಿಗಮ ಹಗರಣದಲ್ಲಿ ಮಾಫಿ ಸಾಕ್ಷಿದಾರ ಆಗುವ ಭಯ

**ನಾಗೇಂದ್ರಗೆ ಸಚಿವ ಸ್ಥಾನ ಒಲಿಯಲು ಕಾರಣ: ಶಾಸಕ ಜನಾರ್ದನರೆಡ್ಡಿ ಆರೋಪ**

**ಬಳ್ಳಾರಿ, ಆ.4:** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಚಿವ ಸಂಪುಟ ವಿಸ್ತರಣೆ ವೇಳೆ ವಾಲ್ಮೀಕಿ ನಿಗಮದ ಹಗರಣದಿಂದ ರಾಜೀನಾಮೆ ನೀಡಿದ್ದ ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಶಾಸಕ ಬಿ. ನಾಗೇಂದ್ರಗೆ ಮತ್ತೆ ಸಚಿವ ಸ್ಥಾನ ನೀಡಿರುವುದು ಪ್ರತಿಪಕ್ಷಗಳ ಕೆಂಗಣ್ಣಿಗೆ ಗುರಿಯಾಗಿದೆ. ಇದೇ ವಿಚಾರವಾಗಿ ಮಾತನಾಡಿರುವ ಶಾಸಕ ಗಾಲಿ ಜನಾರ್ದನ ರೆಡ್ಡಿ, ವಾಲ್ಮೀಕಿ ನಿಗಮದ ಹಗರಣದಲ್ಲಿ ನಾಗೇಂದ್ರ ಮಾತ್ರವಲ್ಲದೇ ಬಹುತೇಕ ಪಾಲುದಾರರು ಇದ್ದಾರೆ ಎಂದು ತಾನು ಹೇಳಿದ್ದು ಈಗ ನಿಜವಾಗಿದೆ. ನಾಗೇಂದ್ರ ಮುಖಕ್ಕೆ ಬೆಣ್ಣೆ ಹಚ್ಚಿರೋದು ತೋರಿಸಿ, ಉಳಿದವರು ಹಿಂದೆ ಲೂಟಿ ಹೊಡೆದಿದ್ದಾರೆ. ನಾಗೇಂದ್ರರಿಗೆ 10–20 ಪರ್ಸೆಂಟ್ ಕೊಟ್ಟು, ಉಳಿದ ಹಣವನ್ನು ಬಳ್ಳಾರಿ, ತೆಲಂಗಾಣ ಮತ್ತು ಗೋವಾ ಚುನಾವಣೆಗಳಿಗೆ ಬಳಸಿದ್ದಾರೆ. ಒಂದೊಮ್ಮೆ ನಾಗೇಂದ್ರರಿಗೆ ಮಂತ್ರಿ ಸ್ಥಾನ ನೀಡದಿದ್ದರೆ ಅವರು ಅಪ್ರೂವರ್ ಆಗಿ ಬಿಡುತ್ತಿದ್ದರು ಎಂಬ ಭಯದಿಂದ ಸಚಿವ ಸ್ಥಾನ ನೀಡಲಾಗಿದೆ ಎಂದು ಆರೋಪಿಸಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363




ಭಾರತೀಯ ತರಬೇತಿ ವಾಯುಪಡೆ ಮುಖ್ಯಸ್ಥ, ಏರ್ ಮಾರ್ಷಲ್ ಎಸ್. ಶ್ರೀನಿವಾಸ್ ಅವರ ನಿಯೋಗವು ಮಂಗಳವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಯಾಗಿ ಚರ್ಚಿಸಿದರು. ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಎಲ್.ಕೆ.ಅತೀಕ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ ರಾವ್, ಬೆಂಗಳೂರು ಪೊಲೀಸ್ ಕಮಿಷನರ್ ಸೀಮಂತ್ ಕುಮಾರ್ ಸಿಂಗ್ ಉಪಸ್ಥಿತರಿದ್ದರು.

# ಅತೃಪ್ತರು ರಾಜೀನಾಮೆ ನೀಡಿದರೆ ಕ್ಷಣದಲ್ಲೇ ಅಂಗೀಕಾರ

**ರಾಜಕೀಯ ಭವಿಷ್ಯ ಬೇಕೆಂದರೆ ಪಕ್ಷ ಮುಖ್ಯ, ತಾಳ್ಮೆ ಇರಬೇಕು: ಸಿಎಂ ಡಿ.ಕೆ. ಶಿವಕುಮಾರ್**



ಬೆಂಗಳೂರು, ಆ.4: ರಾಜೀನಾಮೆ ಕೊಡುವವರನ್ನು ಯಾರೂ ತಡೆಯೋಕೆ ಆಗುವುದಿಲ್ಲ. ರಾಜೀನಾಮೆ ನೀಡಿದ ಕೆಲವೇ ಕ್ಷಣಗಳಲ್ಲಿ ಅಂಗೀಕರಿಸಲಾಗುವುದು. ಇದೆಲ್ಲ ರಾಜಕೀಯದಲ್ಲಿ ನಡೆಯೊದೇ. ಈ ಹಿಂದೆ ನಾನು, ಪರಮೇಶ್ವರ್ ಮಂತ್ರಿ ಸ್ಥಾನ ಸಿಗದಿದ್ದಾಗ ತಾಳ್ಮೆಯಿಂದ ಇರಲಿಲ್ಲವೇ, ರಾಜಕೀಯ ಭವಿಷ್ಯ ಬೇಕು ಎಂದರೆ ಪಕ್ಷ ಮುಖ್ಯ ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಮಂಗಳವಾರ ಪ್ರತಿಕ್ರಿಯೆ ನೀಡಿದ ಅವರು, ನನಗೆ ಹಾಗೂ ಪರಮೇಶ್ವರ್ ಅವರಿಗೆ ಧರಂಸಿಂಗ್, ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಸಚಿವ ಸ್ಥಾನ ತಪ್ಪಿಸಿದರು. ಆಗ ನಾನೂ ರಾಜಿನಾಮೆ ಕೊಡಬಹುದಿತ್ತಲ್ಲವೇ. ವೀರೇಂದ್ರ ಪಾಟೀಲ್ ಕಾಲದಲ್ಲಿ ಬಂಗಾರಪ್ಪ ಅವರಿಗೇ ಮಂತ್ರಿಸ್ಥಾನ ನೀಡಿರಲಿಲ್ಲ. ನಂತರ ಬಂಗಾರಪ್ಪ ಅವರು, ಧರಂಸಿಂಗ್ ಅವರು ಮುಖ್ಯಮಂತ್ರಿಗಳಾಗಲಿಲ್ಲವೇ, ಮಲ್ಲಿಕಾರ್ಜುನ ಖರ್ಗೆ ಅವರಿಗೂ ಸ್ಥಾನ ನೀಡಿರಲಿಲ್ಲ ಎಂದು ಹೇಳಿದರು.

ಇಂತಹ ಸಂದರ್ಭದಲ್ಲಿ ತಾಳ್ಮೆಯಿಂದ ಇರಬೇಕು. ಎಲ್ಲದಕ್ಕಿಂತ ಪಕ್ಷ ಮುಖ್ಯ. ಎಲ್ಲಾ ನಿಗಮ, ಮಂಡಳಿಗಳ ಅಧ್ಯಕ್ಷ ಸ್ಥಾನವನ್ನು ಸೇರಿದಂತೆ ಇತರೇ ಹುದ್ದೆಗಳಿಗೆ ರಾಜಿನಾಮೆ ನೀಡಿ ಎಂದು ಸೂಚಿಸುತ್ತೇನೆ. ಎಲ್ಲರಿಗೂ ಮುಂಚಿತವಾಗಿ ಎರಡುವರೆ ವರ್ಷ ಎಂದು ಸೂಚನೆ ನೀಡಿದ್ದೆವು. ಶಾಸಕರು, ಮಂತ್ರಿಗಳಿಗೂ ಇದನ್ನು ತಿಳಿಸಿದ್ದೆವು. ಮೊದಲು ಕಾರ್ಯಕರ್ತರಿಗೆ ಅಧಿಕಾರ ನೀಡಲಾಗುವುದು. ನಂತರ ಶಾಸಕರನ್ನು ಕರೆದು ಚರ್ಚಿಸಲಾಗುವುದು. ಹೊಸವಿಚಾರ ಇದ್ದರೇ ನಾನೇ ಮಾಧ್ಯಮಗಳನ್ನು ಕರೆದು ಮಾತನಾಡುತ್ತೇನೆ" ಎಂದರು.

### ಬರ ಅಧ್ಯಯನ ನಡೆಸಲು ಸಚಿವರಿಗೆ ಸೂಚನೆ

ಎಲ್ಲ ನೂತನ ಸಚಿವರಿಗೆ ಕೂಡಲೇ ತಮಗೆ ಜವಾಬ್ದಾರಿ ನೀಡಿರುವ ಜಿಲ್ಲೆಗಳಿಗೆ ಭೇಟಿ ನೀಡಿ ಅತಿವೃಷ್ಟಿ, ಅನಾವೃಷ್ಟಿ ಪರಿಸ್ಥಿತಿಯ ಬಗ್ಗೆ ಅವಲೋಕಿಸಬೇಕು ಎಂದು ಹೇಳಿದ್ದೇನೆ. ಜೊತೆಗೆ ಸ್ಥಳ ವೀಕ್ಷಣೆಗೆ ಎಲ್ಲಾ ರೀತಿಯ ವ್ಯವಸ್ಥೆ ಮಾಡಬೇಕು ಎಂದು ಅಧಿಕಾರಿಗಳಿಗೂ ಸೂಚನೆ ನೀಡಿದ್ದೇನೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

# ಬರ ನಿರ್ವಹಣೆ: ಜಿಲ್ಲಾವಾರು ಉಸ್ತುವಾರಿ ಸಚಿವರ ನೇಮಕ, ಡಿಸಿಎಂಗೆ ವರದಿ ಸಲ್ಲಿಸುವಂತೆ ಸಿಎಂ ಸೂಚನೆ

ಬೆಂಗಳೂರು, ಆ.4: ರಾಜ್ಯದಲ್ಲಿನ ಅತಿವೃಷ್ಟಿ/ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಸಚಿವರು ತಕ್ಷಣ ಜಿಲ್ಲಾ ಪ್ರವಾಸ ಕೈಗೊಂಡು ಪರಿಸ್ಥಿತಿಯನ್ನು ಪರಿವೀಕ್ಷಣೆ ನಡೆಸಬೇಕು. ಜಿಲ್ಲೆಗಳ ವಾಸ್ತವ ಸ್ಥಿತಿಯ ಬಗ್ಗೆ ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರಿಗೆ ವರದಿ ನೀಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚಿಸಿದ್ದಾರೆ.

**ಯಾವ ಜಿಲ್ಲೆಗೆ ಯಾರು:**

ಡಾ.ಜಿ.ಪರಮೇಶ್ವರ್ – ತುಮಕೂರು
ರಘುಮೂರ್ತಿ– ಚಿತ್ರದುರ್ಗ
ಬೈರತಿ ಸುರೇಶ್ – ಚಿಕ್ಕಬಳ್ಳಾಪುರ
ಕೆ.ಎಚ್. ಮುನಿಯಪ್ಪ– ಬೆಂಗಳೂರು ಗ್ರಾಮಾಂತರ
ರಾಮಲಿಂಗಾ ರೆಡ್ಡಿ– ಕೋಲಾರ
ಎಚ್.ಸಿ. ಬಾಲಕೃಷ್ಣ– ಬೆಂಗಳೂರು ದಕ್ಷಿಣ
ಬಿ.ಝೆಡ್. ಝಮೀರ್ ಅಹ್ಮದ್ ಖಾನ್– ವಿಜಯನಗರ
ಕೆ.ಜೆ. ಜಾರ್ಜ್ –ಚಿಕ್ಕಮಗಳೂರು
ಕೆ.ಎಂ.ಶಿವಲಿಂಗೇಗೌಡ– ಹಾಸನ
ಮಧು ಬಂಗಾರಪ್ಪ– ಶಿವಮೊಗ್ಗ
ವಿಜಯಾನಂದ ಕಾಶಪ್ಪನವರ– ಬಾಗಲಕೋಟೆ
ಎಂ.ಬಿ.ಪಾಟೀಲ್ –ವಿಜಯಪುರ
ಎಸ್.ಎಸ್. ಮಲಿಕಾರ್ಜುನ– ದಾವಣಗೆರೆ
ಬಸವರಾಜ ರಾಯರೆಡ್ಡಿ – ಗದಗ
ರುದ್ರಪ್ಪ ಲಮಾಣಿ –ಹಾವೇರಿ
ಸತೀಶ್ ಜಾರಕಿಹೊಳಿ –ಬೆಳಗಾವಿ
ಸಂತೋಷ್ ಲಾಡ್ – ಧಾರವಾಡ
ಲಕ್ಷ್ಮಣ ಸವದಿ –ಉತ್ತರ ಕನ್ನಡ
ಪ್ರಿಯಾಂಕ್ ಖರ್ಗೆ – ಕಲಬುರಗಿ
ಅಜಯ್ ಧರಂ ಸಿಂಗ್– ರಾಯಚೂರು
ಈಶ್ವರ್ ಖಂಡ –ಬೀದರ್
ಯು.ಟಿ.ಖಾದರ್ –ದಕ್ಷಿಣ ಕನ್ನಡ ಮತ್ತು ಉಡುಪಿ
ಪಿ.ಎಂ.ನರೇಂದ್ರಸ್ವಾಮಿ –ಕೊಡಗು
ಯತೀಂದ್ರ –ಮೈಸೂರು
ಚಲುವರಾಯಸ್ವಾಮಿ – ಮಂಡ್ಯ
ಪುಟ್ಟರಂಗಶೆಟ್ಟಿ – ಚಾಮರಾಜನಗರ
ಬಿ.ನಾಗೇಂದ್ರ– ಬಳ್ಳಾರಿ
ಶರಣ ಪ್ರಕಾಶಪಾಟೀಲ – ಯಾದಗಿರಿ
ಶಿವರಾಜ್ ತಂಗಡಗಿ – ಕೊಪ್ಪಳ
ಕೃಷ್ಣಬೈರೇಗೌಡ – ಬೆಂಗಳೂರು ನಗರ

# ವಂದೇಭಾರತಂ ಯೋಜನೆ ಭಾಗವಾಗಿ ಡಿಸಿಎಂ ಡಾ.ಪರಮೇಶ್ವರ್ ಭೇಟಿಯಾದ ಅದಾನಿ ಸಮೂಹದ ಪ್ರತಿನಿಧಿಗಳು



ಬೆಂಗಳೂರು, ಆ.4: ಅದಾನಿ ಗ್ರೂಪ್‌ನ ವಿನೂತನ ಯೋಜನೆಯಾದ ವಂದೇಭಾರತಂ ಸಂಪರ್ಕ ಅಭಿಯಾನದ ಭಾಗವಾಗಿ ಅದಾನಿ ಗ್ರೂಪ್‌ನ ಪ್ರತಿನಿಧಿಗಳ ತಂಡ ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ ಅವರನ್ನು ಮಂಗಳವಾರ ಭೇಟಿಯಾಗಿ ಮಾತುಕತೆ ನಡೆಸಿತು.

ಈ ವೇಳೆ ನಾವೀನ್ಯತೆ, ಉದ್ಯಮಶೀಲತೆ ಹಾಗೂ ತಳಮಟ್ಟದ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ವಂದೇ ಭಾರತಂ ಅಭಿಯಾನದ ವಿವರಗಳನ್ನೊಳಗೊಂಡ ಕಾರ್ಯಕ್ರಮದ ಮಾಹಿತಿ ಪತ್ರವನ್ನು ಉಪಮುಖ್ಯಮಂತ್ರಿಗಳಿಗೆ ಹಸ್ತಾಂತರಿಸಿತು.

ಹೊಸ ಆಲೋಚನೆಗಳಿಗೆ ಸೂಕ್ತ ಮಾರ್ಗದರ್ಶನ, ಉದ್ಯಮ ಕ್ಷೇತ್ರದ ಸಂಪರ್ಕ ಮತ್ತು ರಾಷ್ಟ್ರೀಯ ಮಟ್ಟದ ವೇದಿಕೆಯನ್ನು ಕಲ್ಪಿಸುವ ಮೂಲಕ ರಾಜ್ಯದ ಯುವಜನರ ಉದ್ಯಮಶೀಲತೆಯ ಸಾಮರ್ಥ್ಯಕ್ಕೆ ಉತ್ತೇಜನ ನೀಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಈ ಅಭಿಯಾನಕ್ಕೆ ಕರ್ನಾಟಕದಿಂದ ಅತ್ಯುತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಈಗಾಗಲೇ 1,400ಕ್ಕೂ ಹೆಚ್ಚು ಅರ್ಜಿಗಳು ಸಲ್ಲಿಕೆಯಾಗಿವೆ. ಈ ಕುರಿತು ಈ ಸಂವಾದದಲ್ಲಿ ತಿಳಿಸಲಾಯಿತು ಜಿ. ಪರಮೇಶ್ವರ ಅವರು ಈ ಯೋಜನೆಯನ್ನು ಸ್ವಾಗತಿಸಿದರು ಮತ್ತು ಕರ್ನಾಟಕದ ವಿಶಿಷ್ಟ ಹೊಸ ಆವಿಷ್ಕಾರ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಇದರ ಪಾತ್ರವನ್ನು ಶ್ಲಾಘಿಸಿದರು.


ಅದಾನಿ ಗ್ರೂಪ್ ಅಧ್ಯಕ್ಷ ಗೌತಮ್ ಅದಾನಿ ಅವರು, "ವಂದೇ ಭಾರತಂ ಯೋಜನೆಯು ದೇಶದ ಮೂಲೆ ಮೂಲೆಯಲ್ಲೂ ಅಸಾಧಾರಣ ಪ್ರತಿಭೆಗಳಿವೆ ಮತ್ತು ಅವು ಬೆಳೆಯಲು ಸೂಕ್ತ ವೇದಿಕೆಯ ಅಗತ್ಯವಿದೆ ಎಂಬ ನಂಬಿಕೆಯ ಮೇಲೆ ರೂಪುಗೊಂಡಿದೆ. ಕರ್ನಾಟಕದಿಂದ ದೊರೆತ ಬೆಂಬಲ ಸೇರಿದಂತೆ ದೇಶಾದ್ಯಂತದ ನಾಯಕರು ನೀಡಿದ ಪ್ರೋತ್ಸಾಹವು, ಹೊಸ ಆವಿಷ್ಕಾರ ವ್ಯವಸ್ಥೆಯನ್ನು ಪೋಷಿಸುವ ಮತ್ತು ಯುವ ಉದ್ಯಮಿಗಳು ತಮ್ಮ ಆಲೋಚನೆಗಳನ್ನು ಪ್ರಭಾವಶಾಲಿ ಉದ್ದಿಮೆಗಳಾಗಿ ಪರಿವರ್ತಿಸಲು ಹೆಚ್ಚಿನ ಅವಕಾಶಗಳನ್ನು ಸೃಷ್ಟಿಸುವ ನಮ್ಮ ಜಂಟಿ ಬದ್ಧತೆಯನ್ನು ಮತ್ತಷ್ಟು ಬಲಪಡಿಸುತ್ತದೆ" ಎಂದಿದ್ದಾರೆ.

ಜೂನ್ 25 ರಂದು ಚಾಲನೆ ನೀಡಲಾದ ವಂದೇಭಾರತಂ ಅಭಿಯಾನವು, ಉದಯೋನ್ಮುಖ ಆವಿಷ್ಕಾರಕರಿಗೆ ತಮ್ಮ ಆಲೋಚನೆಗಳನ್ನು ನವೋದ್ಯಮಗಳಾಗಿ ಪರಿವರ್ತಿಸಲು ರಾಷ್ಟ್ರೀಯ ವೇದಿಕೆಯನ್ನು ಒದಗಿಸುವ ಮೂಲಕ ದೇಶಾದ್ಯಂತ ಇರುವ ಉದ್ಯಮಶೀಲತೆಯ ಪ್ರತಿಭೆಗಳನ್ನು ಗುರುತಿಸುವ ಗುರಿಯನ್ನು ಹೊಂದಿದೆ. ಯಾವುದೇ ವಯಸ್ಸು ಅಥವಾ ಹಿನ್ನೆಲೆಯ ವ್ಯಕ್ತಿಗಳೂ ಇದರಲ್ಲಿ ಭಾಗವಹಿಸಬಹುದಾಗಿದ್ದು, ಕೇವಲ ಒಂದು ಹೊಸ ಆಲೋಚನೆ ಮತ್ತು ಅದನ್ನು ಸಾಕಾರಗೊಳಿಸುವ ದೃಢಸಂಕಲ್ಪ ಮಾತ್ರ ಇದ್ದರೆ ಸಾಕು.

ಆಯ್ಕೆಯಾಗುವ 75 ಅಂತಿಮ ಸ್ಪರ್ಧಿಗಳಿಗೆ ವಿಶೇಷ ಮಾರ್ಗದರ್ಶನ ಕಾರ್ಯಕ್ರಮ, ಹೂಡಿಕೆದಾರರ ಸಂಪರ್ಕ ಹಾಗೂ ಸ್ವಾತಂತ್ರ್ಯ ದಿನಾಚರಣೆಯ ವೇಳೆಗೆ ಅಹಮದಾಬಾದ್ ನಲ್ಲಿ ನಡೆಯಲಿರುವ ಗ್ರಾಂಡ್ ಫಿನಾಲೆಯಲ್ಲಿ ಭಾಗವಹಿಸುವ ಸುವರ್ಣಾವಕಾಶ ದೊರೆಯಲಿದೆ.

# ಬೀಡಾಡಿ ವಾಹನಗಳ ತೆರವು ಕಾರ್ಯಾಚರಣೆಗೆ ಕ್ರಿಯಾಯೋಜನೆ ರೂಪಿಸಿ

**ಜಿಬಿಎ ಅಧಿಕಾರಿಗಳಿಗೆ ಸಚಿವ ಕೃಷ್ಣಬೈರೇಗೌಡ ಸೂಚನೆ**



ಬೆಂಗಳೂರು, ಆ.4: ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ರಸ್ತೆಬದಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ನಿಲ್ಲಿಸಿರುವ ಬೀಡಾಡಿ ವಾಹನಗಳ ತೆರವು ಕಾರ್ಯಾಚರಣೆಗೆ ಸಮಗ್ರ ಕ್ರಿಯಾಯೋಜನೆ ರೂಪಿಸಿ, ಪಾಲಿಕೆವಾರು ವೇಳಾಪಟ್ಟಿ ಸಿದ್ಧಪಡಿಸುವಂತೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದರು.

ನಗರದಲ್ಲಿ ಬೀಡಾಡಿ ವಾಹನಗಳು ಹಾಗೂ ಪಾದಚಾರಿ ಮಾರ್ಗಗಳ ಒತ್ತುವರಿ ತೆರವು ಕುರಿತು ಅಧಿಕಾರಿಗಳೊಂದಿಗೆ ನಡೆದ ವರ್ಚುವಲ್ ಸಭೆಯಲ್ಲಿ ಮಾತನಾಡಿದ ಅವರು, ತೆರವು ಕಾರ್ಯಾಚರಣೆಯನ್ನು ಚುರುಕುಗೊಳಿಸಿ, ನಿಗದಿತ ವೇಳಾಪಟ್ಟಿಯಂತೆ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು ಎಂದರು. ಕೆಳಹಂತದ ಅಧಿಕಾರಿಗಳ ಕಾರ್ಯ ವೈಖರಿಯನ್ನು ಹಿರಿಯ ಅಧಿಕಾರಿಗಳು ನಿರಂತರವಾಗಿ ಮೇಲ್ವಿಚಾರಣೆ ನಡೆಸಬೇಕು. ಗುರುತಿಸಲಾದ, ದಂಡ ಪಾವತಿಸಿ ಬಿಡುಗಡೆ ಮಾಡಲಾದ ಹಾಗೂ ಟೋಯಿಂಗ್ ಮಾಡಲಾದ ವಾಹನಗಳ ಕುರಿತು ನಿಖರ ಮಾಹಿತಿ ನಿರ್ವಹಿಸಬೇಕು ಎಂದು ಸೂಚಿಸಿದರು. ನೋಟಿಸ್ ಅಂಟಿಸಿ ಟೋಯಿಂಗ್ ಮಾಡಿದ ಬಳಿಕ 15 ದಿನ ಕಳೆದಿರುವ ಬೀಡಾಡಿ ವಾಹನಗಳನ್ನು ಹರಾಜು ಮಾಡಲು ಪತ್ರಿಕಾ ಪ್ರಕಟಣೆ ಹೊರಡಿಸುವಂತೆ ಪಾಲಿಕೆ ಆಯುಕ್ತರಿಗೆ ನಿರ್ದೇಶನ ನೀಡಿದರು.

**ಪ್ರತಿ ಸಂಚಾರಿ ಠಾಣೆಗೆ ಇಬ್ಬರು ಸಿಬ್ಬಂದಿ**

ಬಿಡಾಡಿ ವಾಹನಗಳ ತೆರವು ಕಾರ್ಯಾಚರಣೆಗೆ ಪ್ರತಿ ಸಂಚಾರಿ ಪೊಲೀಸ್ ಠಾಣೆಯಿಂದ ಇಬ್ಬರು ಪೊಲೀಸ್ ಸಿಬ್ಬಂದಿಯನ್ನು ಪ್ರತ್ಯೇಕವಾಗಿ ನಿಯೋಜಿಸಬೇಕು. ಪೊಲೀಸ್ ಇಲಾಖೆ ಗುರುತಿಸಿರುವ ವಾಹನಗಳಿಗೆ ನೋಟಿಸ್ ಅಂಟಿಸುವ ವೇಳೆ ವಾರ್ಡ್ ಅಧಿಕಾರಿಗಳೊಂದಿಗೆ ಮಾರ್ಷಲ್‌ಗಳನ್ನೂ ನಿಯೋಜಿಸುವಂತೆ ಸೂಚಿಸಿದರು.

**773 ಕಿ.ಮೀ. ಪಾದಚಾರಿ ಮಾರ್ಗ ಒತ್ತುವರಿ ತೆರವು**

ಜಿಬಿಎ ವ್ಯಾಪ್ತಿಯಲ್ಲಿ ಇದುವರೆಗೆ 773 ಕಿ.ಮೀ. ಪಾದಚಾರಿ ಮಾರ್ಗಗಳ ಒತ್ತುವರಿ ತೆರವುಗೊಳಿಸಲಾಗಿದೆ. ತೆರವುಗೊಳಿಸಿದ ಬಳಿಕ ಮತ್ತೆ ಅತಿಕ್ರಮಣ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಂಡು ನಿಯಮಾನುಸಾರ ದಂಡ ವಿಧಿಸಬೇಕು ಎಂದು ಬೈರೇಗೌಡ ಸೂಚಿಸಿದರು. ಒತ್ತುವರಿ ತೆರವುಗೊಳಿಸಿರುವ ಪಾದಚಾರಿ ಮಾರ್ಗಗಳಲ್ಲಿ ವಾಹನಗಳನ್ನು ನಿಲ್ಲಿಸುವುದಕ್ಕೂ ಕಡಿವಾಣ ಹಾಕಬೇಕು. ಅಗತ್ಯಕ್ಕಿಂತ ಹೆಚ್ಚು ಅಗಲವಿರುವ ಪಾದಚಾರಿ ಮಾರ್ಗಗಳಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಸೌಂದರ್ಯೀಕರಣ ಹಾಗೂ ನಾಗರಿಕಸ್ನೇಹಿ ಮೂಲಸೌಕರ್ಯ ಕಲ್ಪಿಸುವ ಸಾಧ್ಯತೆ ಪರಿಶೀಲಿಸುವಂತೆ ತಿಳಿಸಿದರು.

**ದುರಸ್ತಿಗೂ ಆದ್ಯತೆ**

ಐದು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಒತ್ತುವರಿ ತೆರವು ಜತೆಗೆ ಪಾದಚಾರಿ ಮಾರ್ಗಗಳ ದುರಸ್ತಿ ಕಾಮಗಾರಿಯನ್ನೂ ಸಮಾನಾಂತರವಾಗಿ ಕೈಗೊಳ್ಳಬೇಕು. ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿರುವ ಕಡೆ ಕಾಮಗಾರಿ ಆರಂಭಿಸಿ, ಬಾಕಿ ಇರುವ ಟೆಂಡರ್ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸುವಂತೆ ಸೂಚಿಸಿದರು.

**6,576 ಬೀಡಾಡಿ ವಾಹನ ಗುರುತು**

ಬೆಂಗಳೂರು ಪೊಲೀಸ್ ವಿಭಾಗದ ಜಂಟಿ ಪೊಲೀಸ್ ಆಯುಕ್ತ ಕಾರ್ತಿಕ್ ರೆಡ್ಡಿ ಸಭೆಗೆ ಮಾಹಿತಿ ನೀಡಿ, ಪೊಲೀಸ್ ಇಲಾಖೆ 2,533 ಹಾಗೂ ನಾಗರಿಕರಿಂದ 4,043 ಸೇರಿ ಒಟ್ಟು 6,576 ಬೀಡಾಡಿ ವಾಹನಗಳನ್ನು ಗುರುತಿಸಲಾಗಿದೆ ಎಂದು ತಿಳಿಸಿದರು. ಈ ಪೈಕಿ 1,605 ವಾಹನಗಳಿಗೆ ನೋಟಿಸ್ ಅಂಟಿಸಲಾಗಿದ್ದು, 263 ವಾಹನಗಳನ್ನು ಟೋಯಿಂಗ್ ಮಾಡಲಾಗಿದೆ. ನೋಟಿಸ್ ಹಾಗೂ ಟೋಯಿಂಗ್ ಕ್ರಮಕ್ಕೆ ಒಳಗಾದ ವಾಹನಗಳ ಮಾಲೀಕರು 2.16 ಲಕ್ಷ ದಂಡ ಪಾವತಿಸಿ ವಾಹನಗಳನ್ನು ಬಿಡಿಸಿಕೊಂಡಿದ್ದಾರೆ. ಎಂದರು.

# ಕೈಗಾರಿಕಾ ಕಾರ್ಬನ್ ಹೊರಸೂಸುವಿಕೆ ತಡೆಗೆ ಪ್ರತ್ಯೇಕ ಮಾರ್ಗಸೂಚಿ ಇಲ್ಲ: ಹವಾಮಾನ ಸಚಿವಾಲಯ

ನವದೆಹಲಿ, ಆ.4: ಇಂಧನ–ತೀವ್ರ ಉತ್ಪಾದನಾ ಮತ್ತು ಭಾರೀ ಕೈಗಾರಿಕೆಗಳಿಂದ ಉಂಟಾಗುವ ಕಾರ್ಬನ್ ಹೊರಸೂಸುವಿಕೆ ಕಡಿತಗೊಳಿಸಲು ಕೇಂದ್ರ ಸರ್ಕಾರ ಪ್ರತ್ಯೇಕ ಮಾರ್ಗಸೂಚಿ ರೂಪಿಸಿಲ್ಲ ಎಂದು ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ತಿಳಿಸಿದೆ.

ಲೋಕಸಭೆಯಲ್ಲಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರ ಪ್ರಶ್ನೆಗೆ ಉತ್ತರ ನೀಡಿರುವ ಭಾರೀ ಕೈಗಾರಿಕೆಗಳ ಸಚಿವಾಲಯ, ಕಳೆದ ಐದು ವರ್ಷಗಳಲ್ಲಿ ಹಸಿರು ತಂತ್ರಜ್ಞಾನಗಳ ಅಳವಡಿಕೆ, ಕೈಗಾರಿಕಾ ಇಂಧನ ದಕ್ಷತೆ, ನವೀಕರಿಸಬಹುದಾದ ಇಂಧನ ಬಳಕೆಗೆ ಜಾರಿಗೊಳಿಸಿರುವ ಯೋಜನೆಗಳ ವಿವರ, ಕೈಗಾರಿಕಾ ಡೀಕಾರ್ಬನೈಸೇಶನ್‌ಗೆ ರಾಜ್ಯವಾರು ನೀಡಿರುವ ಹಣಕಾಸು ನೆರವು ಹಾಗೂ ದಾವಣಗೆರೆ ಜಿಲ್ಲೆಯ ಕೈಗಾರಿಕೆಗಳು ಈ ಯೋಜನೆಗಳಿಂದ ಪ್ರಯೋಜನ ಪಡೆದಿರುವ ಬಗ್ಗೆಯೂ ಮಾಹಿತಿ ನೀಡಿದೆ. ಭಾರತದ ರಾಷ್ಟ್ರೀಯವಾಗಿ ನಿರ್ಧರಿತ ಕೊಡುಗೆಗಳು (ಎನ್‌ಡಿಸಿ) ಯಾವುದೇ ನಿರ್ದಿಷ್ಟ ಕೈಗಾರಿಕಾ ವಲಯಕ್ಕೆ ಸೀಮಿತವಾಗಿಲ್ಲದ ಕಾರಣ, ಇಂಧನ–ತೀವ್ರ ಮತ್ತು ಭಾರೀ ಕೈಗಾರಿಕೆಗಳಿಗಾಗಿಯೇ ಪ್ರತ್ಯೇಕ ಕಾರ್ಬನ್ ಹೊರಸೂಸುವಿಕೆ ಕಡಿತ ಮಾರ್ಗಸೂಚಿ ರೂಪಿಸಿಲ್ಲ ಎಂದು ಸ್ಪಷ್ಟಪಡಿಸಿದೆ. ಬದಲಿಗೆ, ಇಂಧನ ದಕ್ಷತೆ, ನವೀಕರಿಸಬಹುದಾದ ಇಂಧನ, ಹಸಿರು ಹೈಡ್ರೋಜನ್ ಹಾಗೂ ಸಂಪನ್ಮೂಲ ದಕ್ಷತೆ ಸಂಬಂಧಿತ ಯೋಜನೆಗಳ ಮೂಲಕ ಕಡಿಮೆ–ಕಾರ್ಬನ್ ಅಭಿವೃದ್ಧಿಯನ್ನು ಉತ್ತೇಜಿಸಲಾಗುತ್ತಿದೆ ಎಂದು ತಿಳಿಸಿದೆ.ರಾಷ್ಟ್ರೀಯ ಹವಾಮಾನ ಬದಲಾವಣೆ ಕ್ರಿಯಾ ಯೋಜನೆ ಮತ್ತು ರಾಜ್ಯ ಹವಾಮಾನ ಬದಲಾವಣೆ ಕ್ರಿಯಾ ಯೋಜನೆ ಅಡಿಯಲ್ಲಿ ಕರ್ನಾಟಕ ಸೇರಿದಂತೆ ಎಲ್ಲಾ ರಾಜ್ಯಗಳ ಅರ್ಹ ಕೈಗಾರಿಕೆಗಳು ಈ ಯೋಜನೆಗಳ ಪ್ರಯೋಜನ ಪಡೆಯಬಹುದು ಎಂದು ಸಚಿವಾಲಯ ಉತ್ತರಿಸಿದೆ.

# ಬರದಿಂದ ಸಂಕಷ್ಟದಲ್ಲಿರುವ ರೈತರಿಗೆ ಪರಿಹಾರ ನೀಡಿ

**ತಕ್ಷಣವೇ 10 ಸಾವಿರ ಕೋಟಿ ರೂ. ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಬಿ.ವೈ. ವಿಜಯೇಂದ್ರ ಆಗ್ರಹ**




ತುಮಕೂರು, ಆ.4: ರಾಜ್ಯದಲ್ಲಿ ಮಳೆ ಕೊರತೆಯಿಂದ ತೀವ್ರ ಬರ ಆವರಿಸಿದೆ. ಸಂಕಷ್ಟದಲ್ಲಿರುವ ರೈತರಿಗೆ ರಾಜ್ಯ ಸರ್ಕಾರ ಪರಿಹಾರ ನೀಡಬೇಕು. ಅದಕ್ಕಾಗಿ ತಕ್ಷಣ 10 ಸಾವಿರ ಕೋಟಿ ಬಿಡುಗಡೆ ಮಾಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ.

ಜಿಲ್ಲೆಯ ವಿವಿಧ ಭಾಗದಲ್ಲಿನ ರೈತರ ಜಮೀನಿಗೆ ಭೇಟಿ ನೀಡಿದ ಅವರು ಮಾಧ್ಯಮಗಳೊಂದಿಗೆ ಮಾತನಾಡಿ, ಬರ ಪರಿಹಾರಕ್ಕೆ ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರ ಪತ್ರ ಬರೆದು ಕೈ ಕಟ್ಟಿ ಕೂತರೆ ಸಾಲದು. ಇಲ್ಲಿ ರಾಜ್ಯ ಸರ್ಕಾರದ ಜವಾಬ್ದಾರಿಯೂ ಇದೆ. ರಾಜ್ಯದ 28ಕ್ಕೂ ಹೆಚ್ಚು ಜಿಲ್ಲೆಗಳು ತೀವ್ರ ಬರದ ಸಂಕಷ್ಟದಲ್ಲಿವೆ. ಕೇಂದ್ರ ಸರ್ಕಾರ ಬರ ಪರಿಶೀಲನೆಗೆ ತಂಡ ಕಳುಹಿಸಲಿದೆ. ಆದರೆ ಅದಕ್ಕೂ ಮೊದಲು ಸಂಕಷ್ಟದಲ್ಲಿರುವ ಅನ್ನದಾತರ ನೆರವಿಗೆ ರಾಜ್ಯ ಸರ್ಕಾರ ಮೊದಲು ಧಾವಿಸಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿನ ಬರ ಪರಿಸ್ಥಿತಿಯನ್ನು ಅರಿಯಲು ಬಿಜೆಪಿ ಮುಂದಾಗಿದೆ. ಶಾಸಕರು, ಪಕ್ಷದ ಮುಖಂಡರ ನೇತೃತ್ವದಲ್ಲಿ ಏಳು ತಂಡಗಳನ್ನು ಮಾಡಿ ರಾಜ್ಯದ ಬೇರೆ ಜಿಲ್ಲೆಗಳಿಗೆ ಬರ ಅಧ್ಯಯನಕ್ಕೆ ಪ್ರವಾಸ ಕೈಗೊಳ್ಳಲಾಗಿದೆ. ಬರದ ನೈಜ ಸ್ಥಿತಿಯನ್ನು ತಿಳಿದು ರೈತರ ಸಂಕಷ್ಟ ಆಲಿಸುತ್ತಿದ್ದೇವೆ, ರೈತರನ್ನು ಮಾತನಾಡಿಸಿ ವಾಸ್ತವಿಕ ಸತ್ಯ ತಿಳಿಯಲಾಗುತ್ತಿದೆ ಎಂದು ತಿಳಿಸಿದರು.

ತುಮಕೂರು ಜಿಲ್ಲೆಯಲ್ಲಿ ಬರದಿಂದ ತೀವ್ರ ಸಂಕಷ್ಟ ಇದೆ. ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಘೋಷಿಸಬೇಕಾದ ಸ್ಥಿತಿ ಇದೆ. ಜಿಲ್ಲೆಯ 10 ತಾಲೂಕುಗಳಲ್ಲಿ ಮಳೆಯ ಕೊರತೆ ತೀವ್ರವಾಗಿದೆ. ತೆಂಗು, ರಾಗಿ, ಹಣ್ಣು ಹಾಗೂ ತರಕಾರಿ ಬೆಳೆಯುವ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಹಲವು ಕಡೆಗಳಲ್ಲಿ ಇನ್ನೂ ಬಿತ್ತನೆ ಆರಂಭವಾಗಿಲ್ಲ ಎಂದರು.ರೈತರು ಎಷ್ಟು ಸಂಕಷ್ಟದಲ್ಲಿದ್ದಾರೆ ಎಂದರೆ ಫಸಲ್‌ಬಿಮಾ ಯೋಜನೆಗೆ ಹಣ ಕಟ್ಟಲೂ ಅವರಿಂದ ಆಗ್ತ ಇಲ್ಲ. ಇಂತಹ ಸಂದರ್ಭದಲ್ಲಿ ರಾಜ್ಯ ಸರ್ಕಾರವೇ ಅದನ್ನು ಭರಿಸಬೇಕು. ಪ್ರತಿ ತಾಲೂಕಿಗೂ ಕನಿಷ್ಠ 50 ಲಕ್ಷ ಬಿಡುಗಡೆ ಮಾಡಿ ರೈತರ ವಿಮಾ ಪ್ರೀಮಿಯಂ ಪಾವತಿಗೆ ಕೈ ಜೋಡಿಸಬೇಕು ಎಂದು ಒತ್ತಾಯಿಸಿದರು.

ಮಳೆ ಕೊರತೆಯಿಂದ ಕುಡಿಯುವ ನೀರಿಗೂ ರಾಜ್ಯದ ಹಲವು ಭಾಗದಲ್ಲಿ ಹಾಹಾಕಾರ ಆರಂಭವಾಗಿದೆ. ಮಳೆಗಾಲದಲ್ಲೇ ಇಂತಹ ಸ್ಥಿತಿ ಇದೆ. ಇನ್ನು ಮುಂದಿನ ದಿನಗಳಲ್ಲಿ ಇದು ಇನ್ನೂ ಉಲ್ಬಣವಾಗಬಹುದು. ಕೆರೆ–ಕಟ್ಟೆಗಳು ಬತ್ತುತ್ತಿವೆ. ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ತೀವ್ರ ಸಮಸ್ಯೆ ಎದುರಾಗಿದೆ. ಪ್ರತಿ ತಾಲೂಕಿಗೆ ಈಗಾಗಲೇ 1 ಕೋಟಿ ಅನುದಾನ ಘೋಷಿಸಲಾಗಿದೆ. ಇದು ಸಾಕಾಗುವುದಿಲ್ಲ. ಹೆಚ್ಚುವರಿಯಾಗಿ 2 ಕೋಟಿ ರೂ. ಬಿಡುಗಡೆ ಮಾಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು. ರಾಜ್ಯ ಸರಕಾರ ಬರ ಪರಿಹಾರಕ್ಕೆ ಹಣ ಬಿಡುಗಡೆ ಮಾಡಿದ ಬಳಿಕ ಕೇಂದ್ರದ ನೆರವು ಕೇಳಬೇಕು ಎಂದು ಅವರು ತಿಳಿಸಿದರು.

ಅಂತರ್ಜಲ ಮಟ್ಟ ಕುಸಿದಿರುವುದರಿಂದ ಕೊಳವೆಬಾವಿ ಅವಲಂಬಿಸಿರುವ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಅವರಿಗೆ ಬೇಕಾದಷ್ಟು ವಿದ್ಯುತ್ ಪೂರೈಕೆ ಆಗುತ್ತಿಲ್ಲ. ತೆಂಗು, ಅಡಿಕೆ ಹಾಗೂ ಇತರ ಬೆಳೆಗಳನ್ನು ಉಳಿಸಲು ಪ್ರತಿದಿನ ಕನಿಷ್ಠ 7 ಗಂಟೆಗಳ ಕಾಲ ನಿರಂತರ 3–ಫೇಸ್ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಆಗ್ರಹಿಸಿದರು.

### ತಕ್ಷಣವೇ ಕೃಷಿ, ತೋಟಗಾರಿಕೆ ಸಚಿವರ ಹೆಸರು ಪ್ರಕಟಿಸಿ

ಹರಸಾಹಸ ಮಾಡಿ ಸಂಪುಟ ವಿಸ್ತರಣೆ ಮಾಡಿದ ಚುನಾಯಿತ ಸರಕಾರ ಇಲ್ಲಿದೆ. ತಕ್ಷಣ ಕೃಷಿ ಸಚಿವರು, ತೋಟಗಾರಿಕೆ ಸಚಿವರು ಯಾರೆಂದು ಪ್ರಕಟಿಸಬೇಕು. ನಾವು ರಾಜಕಾರಣ ಮಾಡಲು ಬಂದಿಲ್ಲ. ಬರದ ವಿಚಾರದಲ್ಲಿ ವಾಸ್ತವಿಕ ಸತ್ಯವನ್ನು ಮನವರಿಕೆ ಮಾಡುತ್ತಿದ್ದೇವೆ. ಅಧಿಕಾರದ ದುರಹಂಕಾರ ಪ್ರಿಯಾಂಕ್ ಖರ್ಗೆಯವರನ್ನು ಈ ರೀತಿ ಮಾಡಿಸುತ್ತಿದೆ. ಅಧಿಕಾರ ಶಾಶ್ವತವಲ್ಲ ಎಂದು ಅವರು ಅರ್ಥ ಮಾಡಿಕೊಳ್ಳಬೇಕು. ಅವರೇನು ಕಾಯಂ ಶಾಸಕರೇ ಅಥವಾ ಕಾಯಂ ಸಚಿವರೇ ಎಂದು ವಿಜಯೇಂದ್ರ ಪ್ರಶ್ನಿಸಿದರು.

### ಸಿದ್ದರಾಮಯ್ಯ - ಡಿಕೆಶಿ ಮಧ್ಯೆ ಅಸಮಾಧಾನವಿದೆ

ಸಿದ್ದರಾಮಯ್ಯ– ಡಿ.ಕೆ. ಶಿವಕುಮಾರ್ ಮಧ್ಯೆ ಅಸಮಾಧಾನ ಇದೆ. ನಮಗೇನೂ ಅಸಮಾಧಾನ ಇಲ್ಲ. ನಾವು ವಿಪಕ್ಷವಾಗಿ ಚಟುವಟಿಕೆ ಮಾಡುತ್ತಿದ್ದೇವೆ. ಇನ್ನೂ ಎರಡು ವರ್ಷ ಕಾಯುತ್ತೇವೆ. ನಮಗೇನೂ ಆತುರ ಇಲ್ಲ. ಸಿದ್ದರಾಮಯ್ಯ ಸಿಎಂ ಆಗಿದ್ದಾಗ ಡಿ.ಕೆ.ಶಿವಕುಮಾರ್ ಅವರಿಗೆ ತೊಂದರೆ ಕೊಡುವ ಕೆಲಸ ಮಾಡಿದರು. ಈಗ ಡಿ.ಕೆ.ಶಿವಕುಮಾರ್ ಆದ ಮೇಲೆ ಸಿದ್ದರಾಮಯ್ಯನವರು ಮಂತ್ರಿಮಂಡಲ ವಿಸ್ತರಣೆ ಕಾರ್ಯಕ್ರಮಕ್ಕೆ ಬಂದಿಲ್ಲ ಎಂದು ಮತ್ತೊಂದು ಪ್ರಶ್ನೆಗೆ ವಿಜಯೇಂದ್ರ ಉತ್ತರಿಸಿದರು.

# ಶಿರಚ್ಛೇದನಕ್ಕೂ ಮುನ್ನ ಕೊನೆಯ ಅವಕಾಶ: ಇರಾನ್‌ಗೆ ಕಡೆ ಗಡುವು ಘೋಷಿಸಿದ ಟ್ರಂಪ್



ವಾಷಿಂಗ್ಟನ್, ಆ. 4: ಯಾವುದೇ ಕಾರಣಕ್ಕೂ ಇರಾನ್ಗೆ ಇನ್ನೂ ಹೆಚ್ಚಿನ ಕಾಲಾವಕಾಶ ಕೊಡುವುದಿಲ್ಲ ಎಂಬ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಿಡಿನುಡಿಗಳು ಸದ್ಯ ಭೀಕರ ಯುದ್ಧದ ಮುನ್ಸೂಚನೆಯನ್ನು ನೀಡಿದೆ. ಇರಾನ್ ನಾಯಕತ್ವವನ್ನು ತರಾಟೆಗೆ ತೆಗೆದುಕೊಂಡಿರುವ ಟ್ರಂಪ್, ತೆರೆಮರೆಯಲ್ಲಿ ಅಮೆರಿಕ ಜತೆ ಮಾತುಕತೆಗೆ ಪ್ರಯತ್ನಿಸುತ್ತಿರುವ ಇರಾನ್, ಅದೇ ಸಾರ್ವಜನಿಕವಾಗಿ ತಮ್ಮ ರಾಷ್ಟ್ರ ಯಾವುದೇ ಮಾತುಕತೆಯಲ್ಲಿ ತೊಡಗಿಲ್ಲ ಎಂದು ಹೇಳುವ ಮೂಲಕ ನಾಟಕವಾಡುತ್ತಿರುವುದು ಏಕೆ? 'ಶಿರಚ್ಛೇದನ'ವನ್ನು ಎದುರಿಸುವ ಮೊದಲು ಇರಾನ್‌ಗೆ ಅಮೆರಿಕದ ಪರಮಾಣು ಒಪ್ಪಂದವನ್ನು ಸ್ವೀಕರಿಸಲು ಒಂದು "ಕೊನೆಯ ಅವಕಾಶ" ಇತ್ತು ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದರು, ರಾಜತಾಂತ್ರಿಕತೆಗೆ ಒಂದು ಅಂತಿಮ ಅವಕಾಶವನ್ನು ನೀಡಲು "ಎರಡನೇ ಮಹಾಯುದ್ಧದ ನಂತರದ ಅತಿದೊಡ್ಡ ದಾಳಿ"ಯನ್ನು ರದ್ದುಗೊಳಿಸಿದ್ದೇನೆ ಎಂದು ಹೇಳಿಕೊಂಡರು.

"ನಾವು ಏನನ್ನಾದರೂ ಪಡೆಯಲಿದ್ದೇವೆ ಎಂದು ನಾನು ಭಾವಿಸುತ್ತೇನೆ, ಆದರೆ ಶಿರಚ್ಛೇದನದ ಮೊದಲು ಅವರಿಗೆ ಪ್ರತಿಯೊಂದು ಕೊನೆಯ ಅವಕಾಶವನ್ನು ನೀಡಲು ನಾನು ಬಯಸುತ್ತೇನೆ" ಎಂದು ಟ್ರಂಪ್ ಹೇಳಿದರು. "ಇದು ಉತ್ತಮ ದಾಖಲೆಗೆ ಸಹಿ ಹಾಕಲು ಇರಾನ್‌ನ ಕೊನೆಯ ಅವಕಾಶ." ಒಪ್ಪಂದಕ್ಕೆ ಅಸ್ತು ಎನ್ನಲಿಲ್ಲ ಎಂದರೆ, ನೀವು ಸಂಪೂರ್ಣವಾಗಿ ಶರಣಾಗಲು ರೆಡಿಯಿರಿ ಎಂದು ಟ್ರಂಪ್‌ಗೆ ಗುಡುಗಿದ್ದಾರೆ. ನಮ್ಮ ಅನುಮತಿಯಿಲ್ಲದೆ ಯಾವುದೇ ಸರಬರಾಜುಗಳು ಇರಾನ್ಗೆ ತಲುಪುವುದಿಲ್ಲ ಎಂದಿದ್ದಾರೆ. ಇರಾನ್ನ ಪರಮಾಣು ಯೋಜನೆ ಮತ್ತು ಹಾರ್ಮುಜ್ ಜಲಸಂಧಿಯ ಬಗ್ಗೆ ನಡೆಯುತ್ತಿರುವ ಉದ್ವಿಗ್ನತೆಯ ಮಧ್ಯೆ ಅಮೆರಿಕ ಅಧ್ಯಕ್ಷರಿಂದ ಈ ಇತ್ತೀಚಿನ ಹೇಳಿಕೆಗಳು ಹೊರಬಂದಿರುವುದು ಯುದ್ಧ ಭೀತಿಯನ್ನು ಸೂಚಿಸಿದೆ. ಈ ಬಗ್ಗೆ ತಮ್ಮ ಸಾಮಾಜಿಕ ಜಾಲತಾಣದ ಖಾತೆ ಟ್ರೂತ್ ಸೋಷಿಯಲ್‌ನಲ್ಲಿ ಪೋಸ್ಟ್ ಮಾಡಿರುವ ಟ್ರಂಪ್, ಇರಾನ್ ನಾಯಕತ್ವವು ದ್ವಂದ್ವ ಎಂದು ಆರೋಪಿಸಿದ್ದಾರೆ. "ಇರಾನ್ ನಾಯಕತ್ವವು ನಂಬಲಾಗದಷ್ಟು ದ್ವಂದ್ವದಿಂದ ಕೂಡಿದೆ. ತೆರೆ ಮರೆಯಲ್ಲಿ ನಮ್ಮ ಜತೆ ಸಭೆ ನಡೆಸಲು ಕೇಳಿಕೊಳ್ಳುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಹೆಚ್ಚಿನ ಮಾತುಕತೆಗಳನ್ನು ನಿರೀಕ್ಷಿಸಲಾಗಿದೆ.

ಆದರೆ, ಸಾರ್ವಜನಿಕ ವಾಗಿ ಅವರು ಅಮೆರಿಕದೊಂದಿಗೆ ನಾವು ಯಾವುದೇ ಮಾತುಕತೆ ಯನ್ನೂ ನಡೆಸುತ್ತಿಲ್ಲ ಎಂದು ಗರ್ವದಿಂದ ಹೇಳುತ್ತಿರುವುದು ಸರಿಯಾದ ನಡೆಯಲ್ಲ. ಇರಾನ್ ಒಮಾನ್ನೊಂದಿಗೆ ಮಾತ್ರ ಮಾತುಕತೆ ನಡೆಸುತ್ತಿರುವುದು ಗೊತ್ತಿದೆ" ಎಂದಿದ್ದಾರೆ.

ಹಾರ್ಮುಜ್ ಜಲಮಾರ್ಗವನ್ನು ಬಲವಂತವಾಗಿ ನಿಯಂತ್ರಿಸುವುದಾಗಿ ಇರಾನ್ ಹೇಳಿದ್ದರೂ, ಅದು ಈಗಾಗಲೇ ಅಮೆರಿಕ ನೌಕಾಪಡೆಯ ಸಂಪೂರ್ಣ ನಿಯಂತ್ರಣದಲ್ಲಿದೆ. ನಮ್ಮ ದಿಗ್ಬಂಧನ ಅಥವಾ ಕೆಲವರು ಹೇಳುವಂತೆ, ಯುಎಸ್ ಉಕ್ಕಿನ ಗೋಡೆ ಅಲ್ಲಿ ನೆಲೆಯೂರಿದೆ. ಒಪ್ಪಂದ ಮಾಡಿಕೊಳ್ಳದೆ ಅಥವಾ ಸಂಪೂರ್ಣವಾಗಿ ಶರಣಾಗದೆ ಹೋದರೆ, ಖಂಡಿತ ಯಾವುದೇ ಸರಬರಾಜುಗಳು ಅಲ್ಲಿಗೆ ತಲುಪುವುದಿಲ್ಲ ಎಂದು ಟ್ರಂಪ್ ನೀಡಿರುವ ಎಚ್ಚರಿಕೆಗೆ ಇರಾನ್‌ನಿಂದ ಇಲ್ಲಿಯವರೆಗೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ.

### ಕೊನೆಯ ಅವಕಾಶ

ಶಿರಚ್ಛೇದನ'ವನ್ನು ಎದುರಿಸುವ ಮೊದಲು ಇರಾನ್‌ಗೆ ಅಮೆರಿಕದ ಪರಮಾಣು ಒಪ್ಪಂದವನ್ನು ಸ್ವೀಕರಿಸಲು ಒಂದು "ಕೊನೆಯ ಅವಕಾಶ" ಇತ್ತು ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದರು, ರಾಜತಾಂತ್ರಿಕತೆಗೆ ಒಂದು ಅಂತಿಮ ಅವಕಾಶವನ್ನು ನೀಡಲು "ಎರಡನೇ ಮಹಾಯುದ್ಧದ ನಂತರದ ಅತಿದೊಡ್ಡ ದಾಳಿ"ಯನ್ನು ರದ್ದುಗೊಳಿಸಿದ್ದೇನೆ ಎಂದು ಹೇಳಿಕೊಂಡರು.

ಐದು ತಿಂಗಳ ಸಂಘರ್ಷವನ್ನು ಕೊನೆಗೊಳಿಸಲು ಇರಾನ್ ಜೊತೆಗಿನ ಇತ್ತೀಚಿನ ಸುತ್ತಿನ ಮಾತುಕತೆ "ಕೊನೆಯ ಅವಕಾಶ" ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಸಿದ ನಂತರ, ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯುವ ಒಪ್ಪಂದವು ಗೋಚರಿಸುತ್ತಿದೆ ಎಂದು ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಹೇಳಿದ್ದಾರೆ. "ನಾವು ಇರಾನಿಯನ್ನರೊಂದಿಗೆ ಮಾತುಕತೆ ನಡೆಸುತ್ತಿದ್ದೇವೆ" ಎಂದು ಬೆಸೆಂಟ್ ಮಂಗಳವಾರ ಹೇಳಿದರು. "ಜಲಸಂಧಿಯನ್ನು ತೆರೆಯಲು ಮತ್ತು ಈ ಸಂಘರ್ಷದಲ್ಲಿ ಹೆಚ್ಚು ಸಾಮಾನ್ಯ ಸ್ಥಿತಿಯತ್ತ ಸಾಗಲು ನಾವು ಇಂದು ಅಥವಾ ನಾಳೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆಯಿದೆ." ಇರಾನ್‌ಗೆ ಟೋಲ್ ವಿಧಿಸಲು ಅವಕಾಶ ನೀಡಲಾಗುತ್ತದೆಯೇ ಎಂದು ಕೇಳಿದಾಗ, ಒಪ್ಪಂದವು ಜಲಸಂಧಿಯಲ್ಲಿ ಚಲನೆಯ ಸ್ವಾತಂತ್ರ್ಯವನ್ನು ಅನುಮತಿಸುತ್ತದೆ ಎಂದು ಖಜಾನೆ ಕಾರ್ಯದರ್ಶಿ ಹೇಳಿದರು.

# ಪಿಓಕೆ ಚುನಾವಣೆ ವಾಸ್ತವ ಮರೆಮಾಚುವ ಯತ್ನ ಗುಂಡಿನ ದಾಳಿ ಮೂಲಕ ಆಕ್ರೋಶ ದಮನ

**ನವದೆಹಲಿ, ಆ.4:** ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಚುನಾವಣಾ ಪ್ರಕ್ರಿಯೆಯೂ ವಾಸ್ತವವನ್ನು ಮರೆಮಾಚುವ ಪ್ರಯತ್ನ ಎಂದು ಭಾರತ ಬಣ್ಣಿಸಿದೆ. ಜನರ ಅಸಮಾಧಾನವನ್ನು ಗುಂಡಿನ ದಾಳಿ ಮೂಲಕ ದಮನ ಮಾಡಲು ಮುಂದಾಗಿದೆ ಭಾರತ ಹೇಳಿದೆ. ಈ ಕ್ರೌರ್ಯಕ್ಕೆ ಅಂತರರಾಷ್ಟ್ರೀಯ ಸಮುದಾಯವು ಪಾಕಿಸ್ತಾನವನ್ನು ಹೊಣೆಗಾರರನ್ನಾಗಿ ಮಾಡಬೇಕು ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ.



ಮಂಗಳವಾರ ಮಾಧ್ಯಮಗೋಷ್ಠಿಯಲ್ಲಿ ಈ ಕುರಿತಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಪಾಕಿಸ್ತಾನವು ಪೊಳ್ಳು ಮತ್ತು ನೆಪ ಚುನಾವಣೆಗಳ ಮೂಲಕ ತನ್ನ ಕ್ರಮಗಳನ್ನು ನ್ಯಾಯಸಮ್ಮತಗೊಳಿಸಲು ಪ್ರಯತ್ನಿಸುತ್ತಿದೆ. ಅಲ್ಲಿನ ನಿಜವಾದ ಪರಿಸ್ಥಿತಿ ಎಂದರೆ ನಡೆಯುತ್ತಿರುವ ಸಾರ್ವಜನಿಕ ಪ್ರತಿಭಟನೆಗಳು ಮತ್ತು ಪಾಕಿಸ್ತಾನ ಪಡೆಗಳಿಂದ ಕ್ರೂರ ಹತ್ಯೆಗಳು. ಇಂತಹ ಪೊಳ್ಳು ವ್ಯಾಯಾಮಗಳು ವಾಸ್ತವವನ್ನು ಮರೆಮಾಡಲು ಸಾಧ್ಯವಿಲ್ಲ. ಈ ವರ್ಷದ ಜೂನ್ನಿಂದ ಅಲ್ಲಿ ನಡೆಯುತ್ತಿರುವ ಪ್ರತಿಭಟನೆಗಳಲ್ಲಿ ಕನಿಷ್ಠ 90 ಜನರು ಸಾವನ್ನಪ್ಪಿದ್ದಾರೆ ಮತ್ತು ಅನೇಕರು ಗಾಯಗೊಂಡಿದ್ದಾರೆ ಎಂದು ಆರೋಪಿಸಿದರು.

ಪಾಕಿಸ್ತಾನದ ಆಡಳಿತವು ಸಾರ್ವಜನಿಕ ಅಸಮಾಧಾನಕ್ಕೆ ಬುಲೆಟ್ ಮತ್ತು ದಮನದ ಮೂಲಕ ಪ್ರತಿಕ್ರಿಯಿಸುತ್ತಿದೆ ಎಂದು ಅವರು ಹೇಳಿದರು. ಪಾಕಿಸ್ತಾನದ ಆಡಳಿತ ಸಂಸ್ಥೆಯು ಸಾರ್ವಜನಿಕ ಅಸಮಾಧಾನಕ್ಕೆ ಗುಂಡುಗಳು, ಇಂಟರ್ನೆಟ್ ಸೆನ್ಸಾರ್ಶಿಪ್ ಮತ್ತು ದಮನದೊಂದಿಗೆ ಪ್ರತಿಕ್ರಿಯಿಸುತ್ತಿದೆ ಎಂದು ವಕ್ತಾರರು ಹೇಳಿದ್ದಾರೆ. ಈಗ ಅದು ಇದನ್ನು ಒಂದು ಪೊಳ್ಳು ಚುನಾವಣಾ ಪ್ರಕ್ರಿಯೆಯ ಮೂಲಕ ನ್ಯಾಯಸಮ್ಮತಗೊಳಿಸಲು ಪ್ರಯತ್ನಿಸುತ್ತಿದೆ. ಇದಕ್ಕೆ ಅದನ್ನು ಹೊಣೆಗಾರರನ್ನಾಗಿ ಮಾಡಬೇಕು ಮತ್ತು ಮಾನವ ಹಕ್ಕುಗಳ ಕುರಿತು ಪಾಕಿಸ್ತಾನದ ಬೂಟಾಟಿಕೆ ಉಪದೇಶದ ಈ ಪೊಳ್ಳು ಮುಖದ ಹಿಂದಿನ ವಾಸ್ತವವನ್ನು ಅಂತರರಾಷ್ಟ್ರೀಯ ಸಮುದಾಯ ನೋಡಬೇಕು ಎಂದರು.

ಭಾರತದ ಗಡಿಯ ಬಳಿ ಪಾಕಿಸ್ತಾನದ ಫಿರಂಗಿಗಳ ನಿಯೋಜನೆಗೆ ಸಂಬಂಧಿಸಿದಂತೆ, ಆಪರೇಷನ್ ಸಿಂಧೂರ್ನಲ್ಲಿ ಭಾರತೀಯ ಪಡೆಗಳ ಶೌರ್ಯವನ್ನು ಎಲ್ಲರೂ ನೋಡಿದ್ದಾರೆ. ಭಾರತವು ಗಡಿಯಾಚೆಗಿನ ಭಯೋತ್ಪಾದನೆಯನ್ನು ಸಂಪೂರ್ಣವಾಗಿ ನಿಲ್ಲಿಸಬೇಕೆಂದು ಬಯಸುತ್ತದೆ. ರಾಷ್ಟ್ರೀಯ ಹಿತಾಸಕ್ತಿಗಾಗಿ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದನ್ನು ಮುಂದುವರಿಸುತ್ತದೆ ಎಂದು ಅವರು ಹೇಳಿದರು. ಯಾವುದೇ ಪರಿಸ್ಥಿತಿಗೆ ಭಾರತೀಯ ಪಡೆಗಳು ಸಿದ್ಧವಾಗಿವೆ ಎಂದು ಪ್ರತಿಪಾದಿಸಿದರು. ಮತ್ತೊಂದು ಪ್ರಶ್ನೆಗೆ ಉತ್ತರಿಸುತ್ತಾ, ಭಾರತವು ನಿರಂತರವಾಗಿ ಗಡಿಯಾಚೆಗಿನ ಭಯೋತ್ಪಾದನೆಯನ್ನು ವಿರೋಧಿಸುತ್ತಿದೆ ಮತ್ತು ಭಯೋತ್ಪಾದನೆಯನ್ನು ಬೆಂಬಲಿಸುವವರ ವಿರುದ್ಧ ಬಲವಾದ ಕ್ರಮ ಕೈಗೊಳ್ಳುವಂತೆ ಎಲ್ಲಾ ದೇಶಗಳನ್ನು ಒತ್ತಾಯಿಸಿದೆ ಎಂದು ವಕ್ತಾರರು ಹೇಳಿದರು.

# ಲಿವ್‌ಇನ್ ಸಂಬಂಧಕ್ಕೂ 498ಎ ಕಾನೂನು ಅನ್ವಯ: ಸುಪ್ರೀಂ

**ನವದೆಹಲಿ, ಆ. 4:** ವಿವಾಹದ ಸ್ವರೂಪದಲ್ಲಿರುವ ಮತ್ತು ಮದುವೆಯಾಗುವ ಉದ್ದೇಶವನ್ನು ಹೊಂದಿರುವ ಲಿವ್–ಇನ್ ಸಂಬಂಧಗಳಿಗೂ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 498A ಅನ್ವಯವಾಗುತ್ತದೆ. ಈ ಸೆಕ್ಷನ್ ಅಡಿಯಲ್ಲಿ ಮಹಿಳೆಯರಿಗೆ ರಕ್ಷಣೆ ದೊರೆಯುತ್ತದೆ ಎಂದು ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ. ಸೆಕ್ಷನ್ 498A ಮಹಿಳೆಯರ ಮೇಲೆ ಗಂಡ ಅಥವಾ ಆತನ ಸಂಬಂಧಿಕರಿಂದ ನಡೆಯುವ ಕ್ರೌರ್ಯವನ್ನು ತಡೆಯುವ ಕಾನೂನಾಗಿದೆ.



ಕರ್ನಾಟಕ ಹೈಕೋರ್ಟ್‌ನ ತೀರ್ಪನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಮೇಲ್ಮನವಿಯ ನ್ಯಾಯಮೂರ್ತಿ ಸಂಜಯ್ ಕರೋಲ್ ಮತ್ತು ನ್ಯಾಯಮೂರ್ತಿ ನೋಂಗ್ಮೈಕಪಂ ಕೋಟೀಶ್ವರ್ ಸಿಂಗ್ ಅವರಿದ್ದ ಪೀಠವು ವಿಚಾರಣೆ ನಡೆಸಿದೆ. ಔಪಚಾರಿಕ ಮದುವೆಯಾಗಿಲ್ಲ ಎಂಬ ಒಂದೇ ಕಾರಣಕ್ಕೆ ಲಿವ್‌ಇನ್‌ನಲ್ಲಿರುವ ಮಹಿಳೆಗೆ ಕಾನೂನಿನ ರಕ್ಷಣೆ ನಿರಾಕರಿಸುವುದು ಸಂವಿಧಾನದ ವಿಧಿ 14ರ ಉಲ್ಲಂಘನೆಯಾಗುತ್ತದೆ. ಅಲ್ಲದೆ, ಗೃಹಹಿಂಸೆ ತಡೆಯುವ ಉದ್ದೇಶಕ್ಕೆ ವಿರುದ್ಧವಾಗುತ್ತದೆ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.

ಪರಸ್ಪರ ಸಮ್ಮತಿಯುಳ್ಳ ಇಬ್ಬರು ಪ್ರಾಪ್ತವಯಸ್ಕರು ವಿವಾಹದ ಸ್ಪಷ್ಟ ಉದ್ದೇಶದೊಂದಿಗೆ ಲಿವ್‌ಇನ್ ಸಂಬಂಧದಲ್ಲಿದ್ದಾಗ ಮಾತ್ರ ಈ ಕಾನೂನು ರಕ್ಷಣೆ ಸಿಗಲಿದೆ ಎಂದು ಕೋರ್ಟ್ ಸ್ಪಷ್ಟಪಡಿಸಿದೆ. ಈ ತೀರ್ಪು ಕೇವಲ ಸೆಕ್ಷನ್ 498ಂ ಪ್ರಕರಣಗಳಿಗೆ ಮಾತ್ರ ಸೀಮಿತವಾಗಿರುತ್ತದೆ ಎಂದೂ ಹೇಳಿದೆ.

ಲಿವ್‌ಇನ್ ಸಂಬಂಧದಲ್ಲಿದ್ದು, ಗೃಹಹಿಂಸೆ ಅನುಭವಿಸಿದ ಪ್ರಕರಣಗಳಲ್ಲಿ ಆರಂಭಿಕ ಸಾಕ್ಷ್ಯ ಒದಗಿಸುವ ಜವಾಬ್ದಾರಿ ದೂರು ನೀಡುವ ಮಹಿಳೆಯ ಮೇಲೆಯೇ ಇರಲಿದ್ದು, ಅರ್ನೇಶ್ ಕುಮಾರ್ (2014) ಪ್ರಕರಣದಲ್ಲಿ ವಿಧಿಸಲಾದ ಮಾರ್ಗದರ್ಶಿ ಸೂತ್ರಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ನ್ಯಾಯಪೀಠ ನಿರ್ದೇಶಿಸಿದೆ.

ಬೆಂಗಳೂರು ಮೂಲದ ದೂರುದಾರ ಮಹಿಳೆ ಮತ್ತು ಆರೋಪಿ ಲೋಕೇಶ್ ಎಂಬಾತ 2010ರಿಂದಲೂ ಲಿವ್‌ಇನ್ ಸಂಬಂಧದಲ್ಲಿ ವಾಸಿಸುತ್ತಿದ್ದರು. ಲೋಕೇಶ್ ತನಗೆ ಈಗಾಗಲೇ ಮದುವೆಯಾಗಿದ್ದ ವಿಷಯವನ್ನು ಮುಚ್ಚಿಟ್ಟು ತಮ್ಮೊಂದಿಗೆ ಸಂಬಂಧದಲ್ಲಿದ್ದರು ಎಂದು ಮಹಿಳೆ ಆರೋಪಿಸಿದ್ದರು. ಅಲ್ಲದೆ, ಲೋಕೇಶ್ ಹಾಗೂ ಅವರ ಕುಟುಂಬದವರು ತನಗೆ ವರದಕ್ಷಿಣೆಗಾಗಿ ಕಿರುಕುಳ ನೀಡಿ, ಶಾರೀರಿಕವಾಗಿ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಿ ದೂರು ದಾಖಲಿಸಿದ್ದರು.

ತಮ್ಮ ವಿರುದ್ಧದ ಪ್ರಕರಣವನ್ನು ವಜಾಗೊಳಿಸುವಂತೆ ಲೋಕೇಶ್ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು. ನಾವು ಕಾನೂನುಬದ್ಧವಾಗಿ ಮದುವೆಯಾಗಿಲ್ಲ. ಐಪಿಸಿ ಸೆಕ್ಷನ್ 498A ಅನ್ವಯವಾಗುವುದು ಮದುವೆಯಾದ ಪತಿಗೆ ಅಥವಾ ಆತನ ಸಂಬಂಧಿಕರಿಗೆ ಮಾತ್ರ. ನಾವು ಲಿವ್–ಇನ್ನಲ್ಲಿದ್ದ ಕಾರಣ, ಈ ಸೆಕ್ಷನ್ ಅಡಿಯಲ್ಲಿ ಪ್ರಕರಣ ದಾಖಲಿಸಲು ಬರುವುದಿಲ್ಲ ಎಂದು ವಾದಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ್ದ ಹೈಕೋರ್ಟ್, ಇಬ್ಬರು ದಂಪತಿಯಂತೆ ವಾಸಿಸುತ್ತಿರುವಾಗ ಸೆಕ್ಷನ್ 498ಂ ನಲ್ಲಿರುವ ಗಂಡ ಎಂಬ ಪದವನ್ನು ತಾಂತ್ರಿಕವಾಗಿ ಅಥವಾ ಕಿರಿದಾದ ಅರ್ಥದಲ್ಲಿ ನೋಡಲಾಗುವುದಿಲ್ಲ ಎಂದು ಹೇಳಿ ಪ್ರಕರಣವನ್ನು ವಜಾಗೊಳಿಸಲು ನಿರಾಕರಿಸಿತ್ತು. ಬಳಿಕ, ಆರೋಪಿಗಳು ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು. ಆದಾಗ್ಯೂ, ಸುಪ್ರೀಂ ಕೋರ್ಟ್ ಕೂಡ ಕರ್ನಾಟಕ ಹೈಕೋರ್ಟ್ ನ ಆದೇಶವನ್ನು ಎತ್ತಿ ಹಿಡಿದಿದೆ.

**45,000 ಕೋಟಿ ರೂ.ಹೂಡಿಕೆಗೆ ಭಾರತ ಯೋಜನೆ, ಸೂಕ್ಷ್ಮ ಪ್ರದೇಶಗಳಲ್ಲಿ ಸಂಪರ್ಕ ಬಲಪಡಿಸುವ ಯತ್ನ**

# ಚೀನಾ, ಪಾಕ್, ಬಾಂಗ್ಲಾ ಗಡಿಯಲ್ಲಿ ರೈಲ್ವೆ ಮೂಲಸೌಕರ್ಯ ವೃದ್ಧಿಗೆ ಕ್ರಮ

**ನವದೆಹಲಿ, ಆ.4:** ಚೀನಾ, ಪಾಕಿಸ್ತಾನ ಮತ್ತು ಬಾಂಗ್ಲಾದೇಶದೊಂದಿಗಿನ ತನ್ನ ಗಡಿಗಳಲ್ಲಿ ರೈಲ್ವೆ ಮೂಲಸೌಕರ್ಯವನ್ನು ನವೀಕರಿಸಲು ಭಾರತ 45,000 ಕೋಟಿ ರೂ.ಗಳಷ್ಟು (4.7 ಶತಕೋಟಿ ಡಾಲರ್) ಹೂಡಿಕೆ ಮಾಡಲು ಯೋಜಿಸುತ್ತಿದೆ. ಈ ಮೂಲಕ ಕಾರ್ಯತಂತ್ರದ ಸೂಕ್ಷ್ಮ ಪ್ರದೇಶಗಳಲ್ಲಿ ಸಂಪರ್ಕವನ್ನು ಬಲಪಡಿಸುವ ಪ್ರಯತ್ನಗಳನ್ನು ಚುರುಕುಗೊಳಿಸಿದೆ.



ವರದಿಯೊಂದರ ಪ್ರಕಾರ, ಪ್ರಸ್ತಾವಿತ ಗಡಿ–ರಾಜ್ಯ ರೈಲ್ವೆ ಕಾರ್ಯಕ್ರಮ ಮುಂದಿನ ಎರಡು ವರ್ಷಗಳಲ್ಲಿ ಯೋಜಿಸಲಾದ ದೇಶದ ಒಟ್ಟಾರೆ ರೈಲ್ವೆ ಮೂಲಸೌಕರ್ಯ ವೆಚ್ಚದ ಸುಮಾರು 22 ಪ್ರತಿಶತವನ್ನು ಪ್ರತಿನಿಧಿಸುತ್ತದೆ. ಹಂಚಿಕೆಯ ಪ್ರಮಾಣ ಭಾರತದ ಅಂತರರಾಷ್ಟ್ರೀಯ ಗಡಿಗಳಿಗೆ ಹೊಂದಿಕೊಂಡಿರುವ ಪ್ರದೇಶಗಳಲ್ಲಿ ಸಾರಿಗೆ ಮೂಲಸೌಕರ್ಯದ ಹೆಚ್ಚುತ್ತಿರುವ ಕಾರ್ಯತಂತ್ರದ ಪ್ರಾಮುಖ್ಯವನ್ನು ಒತ್ತಿಹೇಳುತ್ತದೆ.

ರೈಲ್ವೆ ಪ್ರಗತಿಯು ಗಡಿನಾಡಿನ ರಾಜ್ಯಗಳಲ್ಲಿ ಸಂಪರ್ಕವನ್ನು ಸುಧಾರಿಸುವ ಜೊತೆಗೆ ದೂರದ ಪ್ರದೇಶಗಳಿಗೆ ಜನರು, ಸರಕುಗಳು ಮತ್ತು ಅಗತ್ಯ ಸರಬರಾಜುಗಳ ಚಲನೆಯನ್ನು ಬಲಪಡಿಸುವ ನಿರೀಕ್ಷೆಯಿದೆ. ಉತ್ತಮ ರೈಲು ಸಂಪರ್ಕಗಳು ಐತಿಹಾಸಿಕವಾಗಿ ರಸ್ತೆ ಜಾಲಗಳ ಮೇಲೆ ಹೆಚ್ಚು ಅವಲಂಬಿತವಾಗಿರುವ ಪ್ರದೇಶಗಳಿಗೆ ಲಾಜಿಸ್ಟಿಕ್ ಪ್ರವೇಶವನ್ನು ಸುಧಾರಿಸಬಹುದು.

ಭಾರತ ತನ್ನ ಗಡಿಗಳಲ್ಲಿ, ವಿಶೇಷವಾಗಿ ಚೀನಾವನ್ನು ಎದುರಿಸುತ್ತಿರುವ ಪ್ರದೇಶಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿಯನ್ನು ವೇಗಗೊಳಿಸುವುದರಿಂದ ಯೋಜಿತ ಹೂಡಿಕೆ ಬರುತ್ತದೆ. ನವದೆಹಲಿ ಇತ್ತೀಚಿನ ವರ್ಷಗಳಲ್ಲಿ ರಸ್ತೆಗಳು, ಸುರಂಗಗಳು, ಸೇತುವೆಗಳು ಮತ್ತು ಇತರ ಸಂಪರ್ಕ ಯೋಜನೆಗಳ ಮೇಲೆ ತನ್ನ ಗಮನವನ್ನು ವಿಸ್ತರಿಸಿದ್ದು, ಕಷ್ಟಕರವಾದ ಹಿಮಾಲಯನ್ ಭೂಪ್ರದೇಶದಲ್ಲಿ ಮೂಲಸೌಕರ್ಯ ಅಂತರವನ್ನು ಕಡಿಮೆ ಮಾಡಲು ಪ್ರಯತ್ನಿಸುತ್ತಿದೆ.

ಸಾರಿಗೆ ಸಾಮರ್ಥ್ಯವನ್ನು ಹೆಚ್ಚಿಸುವ ಮೂಲಕ ಮತ್ತು ರಸ್ತೆ ಆಧಾರಿತ ಲಾಜಿಸ್ಟಿಕ್ಸ್ಗೆ ಪರ್ಯಾಯವನ್ನು ಒದಗಿಸುವ ಮೂಲಕ ರೈಲ್ವೆ ಸಂಪರ್ಕವು ಅಂತಹ ಪ್ರದೇಶಗಳಲ್ಲಿ ಪ್ರಮುಖ ಕಾರ್ಯತಂತ್ರದ ಪಾತ್ರವನ್ನು ವಹಿಸುತ್ತದೆ. ದೂರದ ಗಡಿ ಜಿಲ್ಲೆಗಳನ್ನು ಪ್ರಮುಖ ವಾಣಿಜ್ಯ ಕೇಂದ್ರಗಳು ಮತ್ತು ರಾಷ್ಟ್ರೀಯ ರೈಲ್ವೆ ಜಾಲದೊಂದಿಗೆ ಹೆಚ್ಚು ನಿಕಟವಾಗಿ ಸಂಪರ್ಕಿಸುವ ಮೂಲಕ ಯೋಜನೆಗಳು ಆರ್ಥಿಕ ಪರಿಣಾಮವನ್ನು ಬೀರುವ ನಿರೀಕ್ಷೆಯಿದೆ.

ಪ್ರಸ್ತಾವಿತ 45,000 ಕೋಟಿ ರೂ.ಗಳ ಕಾರ್ಯಕ್ರಮ ಚೀನಾ, ಪಾಕಿಸ್ತಾನ ಮತ್ತು ಬಾಂಗ್ಲಾದೇಶಕ್ಕೆ ಹೊಂದಿಕೊಂಡಿರುವ ಗಡಿ ಪ್ರದೇಶಗಳನ್ನು ಒಳಗೊಳ್ಳುತ್ತದೆ, ಇದು ಭಾರತದ ಉತ್ತರ, ಪಶ್ಚಿಮ ಮತ್ತು ಪೂರ್ವ ಗಡಿಗಳಲ್ಲಿ ಮೂಲಸೌಕರ್ಯಕ್ಕೆ ಮಹತ್ವ ನೀಡುತ್ತದೆ.

ಭಾರತ ಇತ್ತೀಚಿನ ವರ್ಷಗಳಲ್ಲಿ ರೈಲ್ವೆಗಳ ಮೇಲಿನ ಬಂಡವಾಳ ವೆಚ್ಚವನ್ನು ಗಮನಾರ್ಹವಾಗಿ ಹೆಚ್ಚಿಸಿದೆ, ಹೊಸ ಮಾರ್ಗಗಳು, ಹಳಿ ವಿಸ್ತರಣೆ, ವಿದ್ಯುದೀಕರಣ, ನಿಲ್ದಾಣದ ಪುನರಾಭಿವೃದ್ಧಿ ಮತ್ತು ಆಧುನೀಕರಣದ ಕಡೆಗೆ ಹೂಡಿಕೆಗಳನ್ನು ನಿರ್ದೇಶಿಸಿದೆ. ಇತ್ತೀಚಿನ ಗಡಿ–ಕೇಂದ್ರಿತ ಕಾರ್ಯಕ್ರಮವು ಮೂಲಸೌಕರ್ಯ ದೇಶದ ಕಾರ್ಯತಂತ್ರದ ಪ್ರಮುಖ ಭಾಗಗಳಿಗೆ ಆಳವಾಗಿ ಚಲಿಸುವಂತೆ ಮಾಡುತ್ತದೆ.

# ದೆಹಲಿ ಮತದಾರರ ಪಟ್ಟಿ ಪರಿಷ್ಕರಣೆ ವೇಳಾಪಟ್ಟಿ ಅ.27ರ ವರೆಗೆ ವಿಸ್ತರಣೆ

**ನವದೆಹಲಿ, ಆಗಸ್ಟ್ 4:** ದೆಹಲಿಯ ರಾಷ್ಟ್ರೀಯ ರಾಜಧಾನಿ ಪ್ರದೇಶದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ವೇಳಾಪಟ್ಟಿಯನ್ನು ಮಂಗಳವಾರ ಪರಿಷ್ಕರಿಸಿದೆ, ಅಕ್ಟೋಬರ್ 1, 2026 ಅನ್ನು ಅರ್ಹತಾ ದಿನಾಂಕವಾಗಿ ನಿಗದಿಪಡಿಸಲಾಗಿದೆ, ಬೂತ್ ಮಟ್ಟದ ಅಧಿಕಾರಿಗಳಿಂದ ಮನೆ–ಮನೆ ಪರಿಶೀಲನೆ, ಕರಡು ಪಟ್ಟಿಯ ಪ್ರಕಟಣೆ ಮತ್ತು ಹಕ್ಕುಗಳು ಮತ್ತು ಆಕ್ಷೇಪಣೆಗಳ ವಿಲೇವಾರಿ ಸೇರಿದಂತೆ ಪ್ರಮುಖ ಪರಿಷ್ಕರಣಾ ಚಟುವಟಿಕೆಗಳಿಗೆ ಸಮಯವನ್ನು ವಿಸ್ತರಿಸಲಾಗಿದೆ.

ದೆಹಲಿಯ ಮುಖ್ಯ ಚುನಾವಣಾ ಅಧಿಕಾರಿಗೆ ಹೊರಡಿಸಿದ ಆದೇಶದಲ್ಲಿ, ಆಯೋಗವು ಮೇ 14 ಮತ್ತು ಜುಲೈ 15, 2026 ರ ಹಿಂದಿನ ಆದೇಶಗಳನ್ನು ಮತ್ತು ಆಗಸ್ಟ್ 3 ರಂದು ದೆಹಲಿ CEO ಅವರಿಂದ ಸ್ವೀಕರಿಸಿದ ವಿನಂತಿಯನ್ನು ಉಲ್ಲೇಖಿಸಿದ ನಂತರ ವೇಳಾಪಟ್ಟಿಯನ್ನು ಪರಿಷ್ಕರಿಸಿದೆ ಎಂದು ಹೇಳಿದೆ. "ವಿಶೇಷ ತೀವ್ರ ಪರಿಷ್ಕರಣೆಯ ವೇಳಾಪಟ್ಟಿಗೆ ಸಂಬಂಧಿಸಿದ ಆಯೋಗದ ಆದೇಶ ಮತ್ತು ನಿಮ್ಮ ವಿನಂತಿಯನ್ನು ಉಲ್ಲೇಖಿಸಲು ಮತ್ತು ಆಯೋಗವು ದೆಹಲಿಯ NCT ಗಾಗಿ ಹೇಳಿದ ವೇಳಾಪಟ್ಟಿಯನ್ನು ಪರಿಷ್ಕರಿಸಲು ನಿರ್ಧರಿಸಿದೆ ಎಂದು ತಿಳಿಸಲು ನನಗೆ ನಿರ್ದೇಶಿಸಲಾಗಿದೆ" ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಪರಿಷ್ಕೃತ ವೇಳಾಪಟ್ಟಿಯಡಿಯಲ್ಲಿ, ಬಿಎಲ್ಒಗಳ ಮನೆ–ಮನೆ ಭೇಟಿ ಆಗಸ್ಟ್ 17 ರವರೆಗೆ ಮುಂದುವರಿಯುತ್ತದೆ, ಆದರೆ ಮತದಾನ ಕೇಂದ್ರಗಳ ತರ್ಕಬದ್ಧಗೊಳಿಸುವಿಕೆ ಮತ್ತು ಮರುಜೋಡಣೆ ಕೂಡ ಅದೇ ದಿನ ಪೂರ್ಣಗೊಳ್ಳುತ್ತದೆ. ಕರಡು ಮತದಾರರ ಪಟ್ಟಿಯನ್ನು ಈಗ ಆಗಸ್ಟ್ 24 ರಂದು ಪ್ರಕಟಿಸಲಾಗುವುದು.

ಆಯೋಗವು ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಆಗಸ್ಟ್ 24 ರಿಂದ ಸೆಪ್ಟೆಂಬರ್ 23 ರವರೆಗೆ ಅವಧಿಯನ್ನು ನಿಗದಿಪಡಿಸಿದೆ. ಹಕ್ಕುಗಳು ಮತ್ತು ಆಕ್ಷೇಪಣೆಗಳ ಸೂಚನೆ ಹಂತ ಮತ್ತು ವಿಲೇವಾರಿ ಅಕ್ಟೋಬರ್ 22 ರವರೆಗೆ ಮುಂದುವರಿಯುತ್ತದೆ, ಅದರ ನಂತರ ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 27 ರಂದು ಪ್ರಕಟಿಸಲಾಗುತ್ತದೆ. ಪರಿಷ್ಕರಣೆಯನ್ನು ನಿರ್ದಿಷ್ಟ ಅರ್ಹತಾ ದಿನಾಂಕಕ್ಕೆ ಸಂಬಂಧಿಸಿದಂತೆ ನಡೆಸಲಾಗುತ್ತದೆ, ಇದು ದೆಹಲಿಯಲ್ಲಿ ಪ್ರಸ್ತುತ ಪ್ರಕ್ರಿಯೆಗೆ ಅಕ್ಟೋಬರ್ 1, 2026 ಆಗಿದೆ. ನವೀಕರಿಸಿದ ಮತದಾರರ ಪಟ್ಟಿಯು ರಾಷ್ಟ್ರ ರಾಜಧಾನಿಯಲ್ಲಿ ಭವಿಷ್ಯದ ಚುನಾವಣೆಗಳಿಗೆ ಆಧಾರವಾಗಿ ಕಾರ್ಯನಿರ್ವಹಿಸುತ್ತದೆ.

# ದ್ವೇಷಭಾಷಣ ಮಾಡಿದ ಬಿಜೆಪಿ ನಾಯಕರಿಗೆ ಕ್ಲೀನ್‌ಚಿಟ್: ಅರ್ಜಿ ಸುಪ್ರೀಂನಲ್ಲಿ ವಜಾ

**ನವದೆಹಲಿ, ಆ.4:** ಪೌರತ್ವ ತಿದ್ದುಪಡಿ ಕಾಯ್ದೆ ವಿರೋಧಿ ಪ್ರತಿಭಟನೆ ವೇಳೆ ಬಿಜೆಪಿಯ ಅನುರಾಗ್ ಠಾಕೂರ್ ಮತ್ತು ಪರ್ವೇಶ್ ವರ್ಮಾ ಮಾಡಿದ್ದ ದ್ವೇಷ ಭಾಷಣ ಪ್ರಕರಣದಲ್ಲಿ ಅವರಿಗೆ ನೀಡಿದ್ದ ಕ್ಲೀನ್‌ಚಿಟ್ ಅನ್ನು ಮರುಪರಿಶೀಲಿಸುವಂತೆ ಸಲ್ಲಿಸಲಾಗಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ.

ಸಿಪಿಐಎಂ ನಾಯಕಿ ಬೃಂದಾ ಕಾರಟ್ ಸಲ್ಲಿಸಿದ್ದ ಮರುಪರಿಶೀಲನಾ ಅರ್ಜಿಯನ್ನು ನ್ಯಾಯಮೂರ್ತಿಗಳಾದ ವಿಕ್ರಂ ನಾಥ್ ಮತ್ತು ಸಂದೀಪ್ ಮೆಹ್ತಾ ಅವರಿದ್ದ ಪೀಠ ಜುಲೈ 29ರಂದು ವಜಾಗೊಳಿಸಿದೆ. ಮರುಪರಿಶೀಲನೆಗೆ ಅವಕಾಶ ಕಲ್ಪಿಸುವಂತಹ ಯಾವುದೇ ಸ್ಪಷ್ಟದೋಷ ಅಥವಾ ತಪ್ಪು ಹಿಂದಿನ ಆದೇಶದಲ್ಲಿ ಕಂಡುಬಂದಿಲ್ಲ ಎಂದು ನ್ಯಾಯಪೀಠ ತನ್ನ ಆದೇಶದಲ್ಲಿ ತಿಳಿಸಿದೆ. ಪ್ರಕರಣವನ್ನು ತೆರೆದ ನ್ಯಾಯಾಲಯದಲ್ಲಿ ಮರು ವಿಚಾರಣೆ ನಡೆಸುವ ಮನವಿಯನ್ನೂ ನ್ಯಾಯಾಲಯ ತಿರಸ್ಕರಿಸಿದೆ. ಸುಪ್ರೀಂ ಕೋರ್ಟ್ ನಿಯಮಗಳ ಪ್ರಕಾರ, ಮರುಪರಿಶೀಲನಾ ಅರ್ಜಿಗಳನ್ನು ಸಾಮಾನ್ಯವಾಗಿ ನ್ಯಾಯಮೂರ್ತಿಗಳು ತಮ್ಮ ಕೊಠಡಿಗಳಲ್ಲಿಯೇ ದಾಖಲೆಗಳನ್ನು ಪರಿಶೀಲಿಸಿ, ವಕೀಲರ ವಾದ ಅಥವಾ ಮೌಖಿಕ ವಿಚಾರಣೆ ನಡೆಸದೆ ತೀರ್ಮಾನಿಸುತ್ತಾರೆ. ಬಿಜೆಪಿ ಸಂಸದ ಅನುರಾಗ್ ಠಾಕೂರ್ ಕೇಂದ್ರದ ಮಾಜಿ ಸಚಿವರಾಗಿದ್ದು, ಪರ್ವೇಶ್ ವರ್ಮಾ ಪ್ರಸ್ತುತ ದೆಹಲಿ ಸರ್ಕಾರದಲ್ಲಿ ಸಚಿವರಾಗಿದ್ದಾರೆ.

2020ರ ಜನವರಿ 27ರಂದು ಸಿಎಎ ವಿರೋಧಿ ಪ್ರತಿಭಟನೆಗಳ ಸಂದರ್ಭದಲ್ಲಿ ಅನುರಾಗ್ ಠಾಕೂರ್ ?ದೇಶ್ ಕೆ ಗದ್ದಾರೋನ್ ಕೋ, ಗೋಲಿ ಮಾರೋ ಎಂಬ ಘೋಷಣೆ ಕೂಗಿದ್ದರು. ಅದೇ ವೇಳೆ ಶಾಹೀನ್ಬಾಗ್ ಪ್ರತಿಭಟನಾಕಾರರನ್ನು ಉದ್ದೇಶಿಸಿ ಪರ್ವೇಶ್ ವರ್ಮಾ ಕೂಡ ಇಂದು ಶಾಹೀನ್ಬಾಗ್ನಲ್ಲಿ ಸಾವಿರಾರು ಜನ ಸೇರಿದ್ದಾರೆ. ನಾಳೆ ಅವರು ನಿಮ್ಮ ಮನೆಗಳಿಗೆ ನುಗ್ಗುತ್ತಾರೆ, ನಿಮ್ಮ ಸಹೋದರಿಯರು ಮತ್ತು ಪುತ್ರಿಯರ ಮೇಲೆ ಅತ್ಯಾಚಾರ ಮಾಡುತ್ತಾರೆ ಹಾಗೂ ಅವರನ್ನು ಕೊಲ್ಲುತ್ತಾರೆ. ಇಂದೇ ನಿರ್ಧಾರ ತೆಗೆದುಕೊಳ್ಳುವ ಸಮಯ ಬಂದಿದೆ? ಎಂದು ದ್ವೇಷದ, ಪ್ರಚೋದನಾಕಾರಿ ಹೇಳಿಕೆ ಹೇಳಿದ್ದರು. ಇದನ್ನೇ ದ್ವೇಷಭಾಷಣಕ್ಕೆ ಸಮನಾಗಿವೆ ಎಂದು ಬೃಂದಾ ಕಾರಟ್ ಆರೋಪಿಸಿದ್ದರು.

ಈ ಸಂಬಂಧ ಭಾರತೀಯ ದಂಡ ಸಂಹಿತೆಯ (ಐಪಿಸಿ) ಸೆಕ್ಷನ್ 153ಎ, 153ಬಿ, 295ಎ ಮತ್ತು 505ರಡಿ ಎಫ್ಐಆರ್ ದಾಖಲಿಸುವಂತೆ ನಿರ್ದೇಶಿಸಬೇಕೆಂಬ ಮನವಿಯನ್ನು ಮ್ಯಾಜಿಸ್ಟ್ರೇಟ್ ತಿರಸ್ಕರಿಸಿದ್ದರು. ಆ ಆದೇಶವನ್ನು 2022ರಲ್ಲಿ ದೆಹಲಿ ಹೈಕೋರ್ಟ್ ಕೂಡ ಎತ್ತಿಹಿಡಿದಿತ್ತು. ಇದನ್ನು ಪ್ರಶ್ನಿಸಿ ಕಾರಟ್ ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದರು. ಏಪ್ರಿಲ್ 29ರಂದು ನೀಡಿದ್ದ ತೀರ್ಪಿನಲ್ಲಿ, ಸೆಕ್ಷನ್ 156(3)ರಡಿ ತನಿಖೆಗೆ ಆದೇಶಿಸಲು ಸೆಕ್ಷನ್ 196ರಡಿ ಪೂರ್ವಾನುಮತಿ ಅಗತ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿತ್ತು. ಆದರೆ, ಅನುರಾಗ್ ಠಾಕೂರ್ ಮತ್ತು ಪರ್ವೇಶ್ ವರ್ಮಾ ಅವರ ಭಾಷಣಗಳು ಯಾವುದೇ ನಿರ್ದಿಷ್ಟ ಸಮುದಾಯವನ್ನು ಗುರಿಯಾಗಿಸಿರಲಿಲ್ಲ. ಹೀಗಾಗಿ ಅವುಗಳಿಂದ ಸಂಜ್ಞೆಯ ಅಪರಾಧದ ಅಂಶಗಳು ಕಂಡುಬರುವುದಿಲ್ಲ ಎಂದು ಹೇಳಿ ಹೈಕೋರ್ಟ್ ಮತ್ತು ಮ್ಯಾಜಿಸ್ಟ್ರೇಟ್ ಅವರ ತೀರ್ಪನ್ನು ಎತ್ತಿಹಿಡಿದಿತ್ತು.

# ತಾಜ್‌ಮಹಲ್ ಶಿವನ ದೇವಾಲಯ ಒಳಪ್ರವೇಶಿಸಲು ಯತ್ನ:ಹಿಂದು ಮಹಾಸಭಾ ಸದಸ್ಯರ ತಡೆದ ಪೊಲೀಸರು

**ಆಗ್ರಾ, ಆ4.:** ತಾಜ್‌ಮಹಲ್ ಮೂಲತಃ ಶಿವನ ದೇವಾಲಯವಾಗಿತ್ತು ಎಂದು ಹೇಳುತ್ತಾ ಕನ್ವರ್‌ಗಳನ್ನು (ಶಿವನಿಗೆ ಅರ್ಪಿಸುವ ಪವಿತ್ರ ಜಲದ ಪಾತ್ರೆಗಳು) ಹೊತ್ತು ತಾಜ್‌ಮಹಲ್ ಪ್ರವೇಶಿಸಲು ಯತ್ನಿಸಿದ ಅಖಿಲ ಭಾರತ ಹಿಂದೂ ಮಹಾಸಭಾದ ಸದಸ್ಯರನ್ನು ಪೊಲೀಸರು ತಡೆದಿದ್ದಾರೆ.



ಪವಿತ್ರ ಶ್ರಾವಣ ಮಾಸದ ಮೊದಲ ಸೋಮವಾರದಂದು ಈ ಸಂರಕ್ಷಿತ ಸ್ಮಾರಕದಲ್ಲಿ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲು ಆ ಸಂಘಟನೆಯು ಉದ್ದೇಶಿಸಿತ್ತು ಎನ್ನಲಾಗಿದೆ.

ಸಂಘಟನೆಗೆ ಸೇರಿದ 11 ಮಹಿಳೆಯರು ಕಾವಡಿಗಳನ್ನು ಹೊತ್ತುಕೊಂಡು ತಾಜ್ ಮಹಲ್‌ನತ್ತ ಸಾಗುತ್ತಿದ್ದಾಗ ಅವರನ್ನು ಮಾರ್ಗ ಮಧ್ಯದಲ್ಲಿಯೇ ತಡೆಯಲಾಗಿದೆ. ಬಳಿಕ ಅವರನ್ನು ರಾಜೇಶ್ವರ ದೇವಾಲಯಕ್ಕೆ ಕರೆದೊಯ್ಯಲಾಯಿತು. ಅಲ್ಲಿ ಅವರು ಶಿವಲಿಂಗಕ್ಕೆ ಪವಿತ್ರ ಜಲಾಭಿಷೇಕ ನೆರವೇರಿಸಿದ್ದಾರೆ.

"ಧಾರ್ಮಿಕ ವಿಧಿವಿಧಾನ ನೆರವೇರಿಸಲು ಈ ಗುಂಪು ಪಶ್ಚಿಮ ದ್ವಾರದ ಮೂಲಕ ತಾಜ್ ಮಹಲ್‌ನತ್ತ ಸಾಗುತ್ತಿದೆ ಎಂಬ ಮಾಹಿತಿ ಅಧಿಕಾರಿಗಳಿಗೆ ಮೊದಲೇ ತಿಳಿದಿತ್ತು. ಅವರನ್ನು ದಾರಿಯಲ್ಲೇ ತಡೆದು ರಾಜೇಶ್ವರ ದೇವಾಲಯಕ್ಕೆ ಕರೆದೊಯ್ಯಲಾಯಿತು, ಅಲ್ಲಿ ಅವರು ಜಲಾಭಿಷೇಕ ಮಾಡಿದರು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದರು.

ತಾಜ್ ಮಹಲ್ ಮೂಲತಃ ಶಿವನ ದೇವಾಲಯವಾಗಿತ್ತು ಎಂದು ಅಖಿಲ ಭಾರತ ಹಿಂದೂ ಮಹಾಸಭಾದ ಜಿಲ್ಲಾಧ್ಯಕ್ಷೆ ಮೀರಾ ರಾಥೋರ್ ಆರೋಪಿಸಿದ್ದಾರೆ. ತಾಜ್ ಮಹಲ್‌ನಲ್ಲಿ ಕವ್ವಾಲಿ ಕಾರ್ಯಕ್ರಮಗಳನ್ನು ನಡೆಸಬಹುದಾದರೆ, ನಮಗೂ ಅಲ್ಲಿ ಪ್ರಾರ್ಥನೆ ಸಲ್ಲಿಸಲು ಅವಕಾಶ ನೀಡಬೇಕು. ಈ ಬಾರಿ ನಮ್ಮನ್ನು ತಡೆಯಲಾಗಿದೆ, ಆದರೆ ಶ್ರಾವಣ ಮಾಸದಲ್ಲಿ ಇನ್ನೂ ಹಲವು ಸೋಮವಾರಗಳಿವೆ. ನಾವು ಮತ್ತೆ 'ಕಾವಡಿ'ಗಳನ್ನು ಹೊತ್ತುಕೊಂಡು ಬಂದು ಪೂಜೆ ಸಲ್ಲಿಸುತ್ತೇವೆ ಎಂದು ಅವರು ಹೇಳಿದರು.

ತಾಜ್‌ಮಹಲ್ ಶಿವನ ದೇವಾಲಯವೆಂದು ಪ್ರತಿಪಾದಿಸುವ ಅಖಿಲ ಭಾರತ ಹಿಂದೂ ಮಹಾಸಭಾದಂತಹ ಬಲಪಂಥೀಯ ಗುಂಪುಗಳು, ಶ್ರಾವಣ ಮಾಸದಲ್ಲಿ ಗಂಗಾಜಲವನ್ನು ಅರ್ಪಿಸಲು ಅಲ್ಲಿಗೆ ಪ್ರವೇಶಿಸಲು ಆಗಾಗ್ಗೆ ಪ್ರಯತ್ನಿಸುತ್ತವೆ. ತಾಜ್ ಮಹಲ್ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ಅಡಿಯಲ್ಲಿ ಬರುವ ಸಂರಕ್ಷಿತ ಸ್ಮಾರಕವಾಗಿದೆ.

# ಮುಂಬೈ ಸಿದ್ಧಿವಿನಾಯಕ ದೇಗುಲದಲ್ಲಿ ದೇಣಿಗೆ ದುರುಪಯೋಗ: 8 ಮಂದಿ ಸೆರೆ

**ಮುಂಬಯಿ, ಆ.4:** ಮುಂಬೈ ಸಿದ್ಧಿವಿನಾಯಕ ದೇವಸ್ಥಾನದಲ್ಲಿ ನಡೆದ ದೇಣಿಗೆ ಹಗರಣದ ಕುರಿತು ಮಹಾರಾಷ್ಟ್ರ ನವನಿರ್ಮಾಣ ಸೇನೆ ಮುಖ್ಯಸ್ಥ ರಾಜ್ ಠಾಕ್ರೆ ಆರೋಪದ ಬೆನ್ನಲ್ಲೇ ದೇವಸ್ಥಾನ ಟ್ರಸ್ಟ್ ಅಧ್ಯಕ್ಷೆ ಸದಾ ಸರ್ವಾಂಕರ್ ಪ್ರತಿಕ್ರಿಯಿಸಿದ್ದಾರೆ. ಆರೋಪದ ಆಧಾರದ ಮೇಲೆ ಪೊಲೀಸರು ಬಂಧಿಸಿದ ದೇವಾಲಯದ ನೌಕರರನ್ನು ಮೊದಲು ಪೊಲೀಸ್ ಕಸ್ಟಡಿಗೆ ಮತ್ತು ನಂತರ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ ಎಂದು ಹೇಳಿದ್ದಾರೆ. ಪೊಲೀಸರು ಇಲ್ಲಿಯವರೆಗೆ ಒಟ್ಟು ಎಂಟು ಜನರನ್ನು ಬಂಧಿಸಿದ್ದಾರೆ. ಅವರೆಲ್ಲರನ್ನೂ ಆರಂಭದಲ್ಲಿ ಮೂರು ದಿನಗಳ ಪೊಲೀಸ್ ಕಸ್ಟಡಿಯಲ್ಲಿ ಇರಿಸಲಾಗಿತ್ತು. ಪೊಲೀಸ್ ಕಸ್ಟಡಿ ಪೂರ್ಣಗೊಂಡ ನಂತರ, ಅವರ ವಿರುದ್ಧ ಹೆಚ್ಚಿನ ಕಾನೂನು ಕ್ರಮಗಳನ್ನು ಪ್ರಾರಂಭಿಸಲಾಯಿತು. ನಂತರ ನ್ಯಾಯಾಲಯವು ಎಲ್ಲರಿಗೂ ಜಾಮೀನು ನೀಡಿತು. ಜಾಮೀನು ಪಡೆದವರಲ್ಲಿ ನರೇಶ್ ಖಾಡೆ ಕೂಡ ಇದ್ದಾರೆ ಎಂದು ಹೇಳಿದ್ದಾರೆ.

**ರಾಜ್ ಠಾಕ್ರೆ ಆರೋಪವೇನು?**

**ಕಳೆದ ಶನಿವಾರ ತಮ್ಮ ಪಕ್ಷದ ವಿದ್ಯಾರ್ಥಿ ವಿಭಾಗದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತಿದ್ದ ಅವರು, ಮುಂಬೈನ ಪ್ರಸಿದ್ಧ ಸಿದ್ಧಿವಿನಾಯಕ ದೇವಸ್ಥಾನದಲ್ಲಿ ವಾರ್ಷಿಕವಾಗಿ 18 ಕೋಟಿ ರೂ. ಮೌಲ್ಯದ ದೇಣಿಗೆಗಳನ್ನು ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ ಎಂದು ಆರೋಪ ಮಾಡಿದ್ದರು.**

ತನಿಖೆ ಕಾನೂನಿನ ಪ್ರಕಾರ ನಡೆಯುತ್ತಿದೆ ಮತ್ತು ನ್ಯಾಯಾಲಯದ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಗೌರವಿಸಲಾಗುತ್ತಿದೆ ಎಂದು ಟ್ರಸ್ಟ್ ಅಧ್ಯಕ್ಷರು ಹೇಳಿದ್ದಾರೆ. ಇದುವರೆಗಿನ ಪ್ರಕ್ರಿಯೆಗಳ ನಂತರ ಆರೋಪಿಗಳಿಗೆ ನ್ಯಾಯಾಲಯದಿಂದ ಪರಿಹಾರ ಸಿಕ್ಕಿದೆ ಎಂದು ಅವರು ಸೂಚಿಸಿದ್ದಾರೆ. ಇತ್ತೀಚೆಗೆ ರಾಜ್ ಠಾಕ್ರೆ ಸಿದ್ಧಿವಿನಾಯಕ ದೇವಸ್ಥಾನದಲ್ಲಿ ನಡೆದಿದೆ ಎನ್ನಲಾದ ದೇಣಿಗೆ ಹಗರಣದ ವಿಷಯವನ್ನು ಎತ್ತಿದ್ದು ನಿಷ್ಪಕ್ಷಪಾತ ತನಿಖೆಗೆ ಒತ್ತಾಯಿಸಿದರು. ಇದು ರಾಜಕೀಯ ಮತ್ತು ಸಾರ್ವಜನಿಕ ಚರ್ಚೆಗೆ ನಾಂದಿ ಹಾಡಿದೆ.

# ಬಿಜೆಪಿ ದುರಹಂಕಾರದ ವಿರುದ್ಧದ ಜನಾದೇಶ

**ಪಟನಾ, ಆ.4:** ಬಿಹಾರದ ಬಂಕಿಪುರ ವಿಧಾನಸಭಾ ಉಪಚುನಾವಣೆಯಲ್ಲಿ ಭರ್ಜರಿ ಗೆಲುವು ಸಾಧಿಸಿರುವ ಜನ್ ಸುರಾಜ್ ಪಕ್ಷದ ಸಂಸ್ಥಾಪಕ ಪ್ರಶಾಂತ್ ಕಿಶೋರ್ ಅವರು ತಮ್ಮ ಗೆಲುವು ಬಿಜೆಪಿಯ "ದುರಹಂಕಾರ"ದ ವಿರುದ್ಧದ ಜನಾದೇಶ ಎಂದು ಮಂಗಳವಾರ ಹೇಳಿದ್ದಾರೆ.

30 ವರ್ಷಗಳಿಂದ ಬಿಜೆಪಿಯ ಭದ್ರಕೋಟೆಯಾಗಿದ್ದ ಹಾಗೂ ಬಿಜೆಪಿ ರಾಷ್ಟ್ರಾಧ್ಯಕ್ಷ ನಿತಿನ್ ನಬಿನ್ ಅವರ ರಾಜೀನಾಮೆಯಿಂದ ತೆರವಾಗಿದ್ದ ಬಂಕಿಪುರ ಕ್ಷೇತ್ರಕ್ಕೆ ನಡೆದ ಉಪ ಚುನಾವಣೆಯಲ್ಲಿ ಪ್ರಶಾಂತ್ ಕಿಶೋರ್ ಅವರು ಪ್ರತಿಸ್ಪರ್ಧಿ ಬಿಜೆಪಿಯ ಅಭ್ಯರ್ಥಿ ನೀರಜ್ ಕುಮಾರ್ ಸಿನ್ಹಾ ವಿರುದ್ಧ 19,000ಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ.

ತಮ್ಮ ಗೆಲುವಿನ ಬಗ್ಗೆ ಮಾತನಾಡಿದ ಅವರು, ಬಂಕಿಪುರದ ಜನ ದುರಹಂಕಾರದ ವಿರುದ್ಧ ಮತ ಚಲಾಯಿಸಿದರು. ಅವರು ಮತ ಚಲಾಯಿಸುವಾಗ ಜಾತಿ ಮೀರಿ ಮತ ಚಲಾಯಿಸಿದ್ದಾರೆ ಎಂದು ಹೇಳಿದರು.

ಹಲವು ವರ್ಷಗಳಿಂದ ಆರ್‌ಜೆಡಿ ಮತ್ತು ಲಾಲೂ ಪ್ರಸಾದ್ ಯಾದವ್ ಬಗ್ಗೆ ಆತಂಕ ಸೃಷ್ಟಿಸಿ ಬಿಜೆಪಿ ಇಲ್ಲಿ ಗೆಲುವು ಸಾಧಿಸಿತ್ತು. ಆದರೆ ಈ ಬಾರಿ ಕ್ಷೇತ್ರದ ಮತದಾರರು ಆ ಭಯದ ರಾಜಕೀಯವನ್ನು ಬದಿಗೊತ್ತಿ, ಸಾಂಪ್ರದಾಯಿಕ ರಾಜಕೀಯ ಪಕ್ಷಗಳಿಗೆ ಸ್ಪಷ್ಟ ಹಾಗೂ ಗಟ್ಟಿಯಾದ ಪರ್ಯಾಯವಾಗಿ ತಮ್ಮ ಜನ ಸುರಾಜ್ ಪಕ್ಷವನ್ನು ಪೂರ್ಣ ನಂಬಿಕೆಯಿಂದ ಬೆಂಬಲಿಸಿದ್ದಾರೆ ಎಂದರು.

**ಗೆಲುವಿಗೆ ಮೂರು ಕಾರಣ ನೀಡಿದ ಪ್ರಶಾಂತ್ ಕಿಶೋರ್:** ತಮ್ಮ ಗೆಲುವಿಗೆ ಪ್ರಮುಖವಾಗಿ ಮೂರು ಕಾರಣಗಳನ್ನು ಪ್ರಶಾಂತ್ ಕಿಶೋರ್ ನೀಡಿದ್ದಾರೆ. ಮೊದಲನೆಯದಾಗಿ, ಬಿಹಾರದ ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಮತ್ತು ಬಿಜೆಪಿ ಆಡಳಿತದ ಮೇಲಿನ ಅಪನಂಬಿಕೆ ಹಾಗೂ ಸಾರ್ವಜನಿಕರಲ್ಲಿ ಹೆಚ್ಚಿದ್ದ ಆಕ್ರೋಶವೇ ಈ ಗೆಲುವಿಗೆ ಮುಖ್ಯ ಕಾರಣವಾಗಿದೆ. ಜಾತಿ ಮತ್ತು ಕೋಮು ರಾಜಕೀಯವನ್ನು ತೊರೆದು ಉತ್ತಮ ಆಡಳಿತ ನೀಡುವ ಪರ್ಯಾಯದತ್ತ ಮುಖ ಮಾಡಿದ್ದಾರೆ. ಎರಡನೆಯದಾಗಿ, ಬಿಜೆಪಿಯ ಸ್ಥಳೀಯ ನಾಯಕರ ಅತಿಯಾದ ಆತ್ಮವಿಶ್ವಾಸ ಮತ್ತು ಅಹಂಕಾರವೇ ಅವರ ಹಿನ್ನಡೆಗೆ ದಾರಿಯಾಯಿತು. ಯಾರನ್ನೇ ಅಭ್ಯರ್ಥಿಯಾಗಿ ಕಣಕ್ಕಿಳಿಸಿದರೂ ಗೆಲುವು ಖಚಿತ ಎಂಬ ಬಿಜೆಪಿ ನಾಯಕರ ಭಾವನೆಯ ವಿರುದ್ಧ ಬಂಕಿಪುರ ಜನತೆ ಸ್ಪಷ್ಟವಾಗಿ ಮತ ಚಲಾಯಿಸಿದ್ದಾರೆ.

ಮೂರನೆಯದಾಗಿ, ಬಿಜೆಪಿ ಮತ್ತು ಎನ್ಡಿಎ ನಾಯಕರು ತಮ್ಮ ಆಡಳಿತದ ಸಾಧನೆಯ ಆಧಾರದ ಮೇಲೆ ಚುನಾವಣೆ ಎದುರಿಸುವ ಬದಲು, ಪ್ರಧಾನಿ ನರೇಂದ್ರ ಮೋದಿ ಜನಪ್ರಿಯತೆ, ಹಿಂದುತ್ವ ರಾಜಕೀಯ ಅಥವಾ ಆರ್‌ಜೆಡಿ ಭಯದ ಮೇಲೆಯೇ ಅವಲಂಬಿತರಾಗಿದ್ದರು. ತಮ್ಮ ಕೆಲಸಗಳಿಗೆ ಹೊಣೆಗಾರರಾಗದ ಇಂತಹ ನಾಯಕರಿಗೆ ಮತದಾರರು ಈ ತೀರ್ಪಿನ ಮೂಲಕ ಸೂಕ್ತ ಪಾಠ ಕಲಿಸಿದ್ದಾರೆ ಎಂದರು.

# ಶೇ.100 ಪರಿಶುದ್ಧ ಜೇನು, ಹಸುವಿನ ತುಪ್ಪ, ತೆಂಗಿನ ಎಣ್ಣೆ ಮಾರಾಟ: ಡಾಬರ್ ಕಂಪನಿಗೆ ನಿರ್ಬಂಧ ಹೇರಿದ FSSAI


**ನವದೆಹಲಿ:** 100% ಪರಿಶುದ್ಧ ಎಂದು ಜೇನು, ದನದ ತುಪ್ಪ, ತೆಂಗಿನ ಎಣ್ಣೆ ಮಾರಾಟಕ್ಕೆ ಡಾಬರ್ ಕಂಪನಿಗೆ ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರವು ನಿರ್ಬಂಧ ಹೇರಿದೆ.

ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರವು ಪ್ರಮುಖ ಗ್ರಾಹಕ ಉತ್ಪನ್ನಗಳ ತಯಾರಕ ಸಂಸ್ಥೆಯಾದ ಡಾಬರ್ ಇಂಡಿಯಾ ಕಂಪನಿಗೆ ಎಚ್ಚರಿಕೆ ನೀಡಿದೆ. ಉತ್ಪನ್ನಗಳ ಮೇಲೆ 100% ಶುದ್ಧ ಎಂದು ಮಾರಾಟ ಮಾಡುವುದು ಹಾಗೂ ಇಂತಹ ಜಾಹೀರಾತು ಮತ್ತು ಲೇಬಲ್‌ಗಳನ್ನು ಬಳಸುವುದು ಕಾನೂನಿಗೆ ವಿರುದ್ಧವಾಗಿದೆ ಎಂದು ತಿಳಿಸಿ, ಮಾರಾಟಕ್ಕೆ ನಿಷೇಧ ಹೇರಿದೆ.

ಡಾಬರ್ ಇಂಡಿಯಾ ಕಂಪನಿಯು ತನ್ನ ಉತ್ಪನ್ನಗಳಾದ ಜೇನುತುಪ್ಪ, ಆಪಲ್ ಸೈಡರ್ ವಿನೆಗರ್, ತೆಂಗಿನ ಎಣ್ಣೆ, ಎಳ್ಳೆಣ್ಣೆ, ಹಸುವಿನ ತುಪ್ಪ, ತೆಂಗಿನ ನೀರು, ತೆಂಗಿನ ಹಾಲು ಮತ್ತು ಇತರ ಸಮಾನ ಉತ್ಪನ್ನಗಳ ಮೇಲೆ '100 ಪ್ರತಿಶತ ನ್ಯಾಚುರಲ್, '100 ಪ್ರತಿಶತ ಪ್ಯೂರ್, '100 ಪ್ರತಿಶತ ಪ್ಯೂರಿಟಿ ಗ್ಯಾರಂಟೀಡ್, '100 ಪ್ರತಿಶತ ಆರ್ಗ್ಯಾನಿಕ್ ಮತ್ತು '100 ಪ್ರತಿಶತ ಟೆಂಡರ್ ಕೋಕೊನಟ್ ವಾಟರ್ ಎಂಬ ದಾರಿ ತಪ್ಪಿಸುವ ಹಕ್ಕುಗಳನ್ನು ಬಳಕೆ ಮಾಡಿರುವುದು ಕಂಡುಬಂದಿದೆ.

**FSSAI ಪೋಸ್ಟ್‌ನಲ್ಲಿ ಏನಿದೆ?**

ಡಾಬರ್ ಇಂಡಿಯಾ ಕಂಪನಿಯು ತನ್ನ ಉತ್ಪನ್ನಗಳ ಮೇಲೆ '100% ಕ್ಲೇಮ್ ಬಳಸಿರುವುದು 2018ರ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ನಿಯಮಗಳ ಉಲ್ಲಂಘನೆಯಾಗಿದೆ. ಅಂತಹ ಸಂಪೂರ್ಣ ಹಕ್ಕುಗಳು ಅಸ್ಪಷ್ಟವಾಗಿರುತ್ತವೆ. ಅವುಗಳನ್ನು ಪ್ರಾಯೋಗಿಕವಾಗಿ ಅಥವಾ ವೈಜ್ಞಾನಿಕವಾಗಿ ಪರಿಶೀಲಿಸುವುದು ಅಸಾಧ್ಯವಾಗಿದೆ. ಇವು ನೇರವಾಗಿ ಗ್ರಾಹಕರನ್ನು ತಪ್ಪುದಾರಿಗೆಳೆಯುವ ಸಂಭವವಿರುತ್ತದೆ ಎಂದು ತನ್ನ ಆದೇಶದಲ್ಲಿ ತಿಳಿಸಿದೆ. ಇದರ ಬೆನ್ನಲ್ಲೇ ಜೇನುತುಪ್ಪ, ಹಸುವಿನ ತುಪ್ಪ ಸೇರಿದಂತೆ ವಿವಿಧ ಉತ್ಪನ್ನಗಳ ಮೇಲೆ '100% ಎಂದು ಹಾಗೂ ದಾರಿ ತಪ್ಪಿಸುವ ಜಾಹೀರಾತು ಮತ್ತು ಲೇಬಲ್‌ಗಳನ್ನು ಬಳಸಿ ಮಾರಾಟ ಮಾಡುವುದಕ್ಕೆ ನಿರ್ಬಂಧಿಸಿದೆ.



ಡಾಬರ್ ಹಿಮಾಲಯನ್ ಆರ್ಗ್ಯಾನಿಕ್ ಆಪಲ್ ಸೈಡರ್ ವಿನೆಗರ್ ಮತ್ತು ಡಾಬರ್ ಆರ್ಗ್ಯಾನಿಕ್ ಜೇನುತುಪ್ಪದ ಉತ್ಪನ್ನಗಳು ಈಖಖಂಖನ ಸಾವಯವ ಅನುಮೋದನೆ ಇಲ್ಲದೇ ಜೈವಿಕ ಭಾರತ್ ಲೋಗೋವನ್ನು ಪ್ರದರ್ಶಿಸುತ್ತಿರುವುದು ಕಂಡುಬಂದಿದೆ. ಇದು FSS ನಿಯಮಗಳು, 2017ರ ಉಲ್ಲಂಘನೆಯಾಗಿದೆ ಎಂದಿದೆ.

**ನಿರ್ದಿಷ್ಟವಾಗಿ 'ಡಾಬರ್ ಹೋಮ್ಮೇಡ್** ಕೋಕೊನಟ್ ಮಿಲ್ಕ್ ಉತ್ಪನ್ನವನ್ನು '100 ಪ್ರತಿಶತ ಪ್ಯೂರಿಟಿ ಎಂದು ಮಾರಾಟ ಮಾಡಲಾಗುತ್ತಿತ್ತು. ಹೀಗಾಗಿ **FSSAI** ಈ ಹಿಂದೆ ನೋಟಿಸ್ ನೀಡಿದ್ದರೂ, ಡಾಬರ್ ಕಂಪನಿ ಯಾವುದೇ ಕ್ರಮ ಕೈಗೊಂಡಿರಲಿಲ್ಲ. ಈ ಹಿನ್ನೆಲೆ, ನಿಯಂತ್ರಕರು ಈ ಆಹಾರ ಉತ್ಪನ್ನಗಳ ಮಾರಾಟವನ್ನು ತಕ್ಷಣವೇ ನಿಷೇಧಿಸುವಂತೆ ಸೂಚಿಸಿದ್ದು, 15 ದಿನಗಳ ಒಳಗೆ ಕೈಗೊಂಡ ಕ್ರಮಗಳ ವರದಿಯನ್ನು ಸಲ್ಲಿಸುವಂತೆ ಆದೇಶಿಸಿದ್ದಾರೆ.

**ಡಾಬರ್ ನೀಡಿದ ಪ್ರತಿಕ್ರಿಯೆ:** ನಾವು FSSAI ನೋಟಿಸ್ ಅನ್ನು ಸ್ವೀಕರಿಸಿದ್ದೇವೆ. ನಮ್ಮ ವೆಬ್‌ಸೈಟ್‌ನಲ್ಲಿ ನೋಟಿಸ್‌ನಲ್ಲಿ ಉಲ್ಲೇಖಿಸಲಾದ ವಿಷಯವನ್ನು ಪರಿಶೀಲಿಸುವ ಪ್ರಕ್ರಿಯೆಯಲ್ಲಿದ್ದೇವೆ ಎಂದು ತಿಳಿಸಿದೆ.

# ಭಾಷೆಯ ಹಂಗಿಲ್ಲದೆ ಜಗತ್ತಿಗೆ ಭಾವನೆ ತಲುಪಿಸುವ ಶಕ್ತಿ ಛಾಯಾಚಿತ್ರಕ್ಕಿದೆ: ರಾಮಲಿಂಗಾರೆಡ್ಡಿ

**ಬೆಂಗಳೂರು, ಆ.4:** ಭಾಷೆಯ ಹಂಗಿಲ್ಲದೆ ಭಾವನೆಗಳನ್ನು ಜಗತ್ತಿಗೆ ತಲುಪಿಸುವ ಶಕ್ತಿ ಛಾಯಾಚಿತ್ರಕ್ಕಿದೆ. ಒಂದು ಅತ್ಯುತ್ತಮ ಛಾಯಾಚಿತ್ರದ ಹಿಂದೆ ಛಾಯಾಗ್ರಾಹಕನ ತಾಳ್ಮೆ, ತಪಸ್ಸಿನಂತಹ ನಿರಂತರ ಶ್ರಮ ಹಾಗೂ ಸಮಯ ಪ್ರಜ್ಞೆ ಅಡಗಿರುತ್ತದೆ ಎಂದು ಜಲಸಂಪನ್ಮೂಲ ಸಚಿವ ರಾಮಲಿಂಗರೆಡ್ಡಿ ಅವರು ಅಭಿಪ್ರಾಯಪಟ್ಟರು.

ಇಂದು ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದಲ್ಲಿ ನಗರದ ಕರ್ನಾಟಕ ಚಿತ್ರಕಲಾ ಪರಿಷತ್ನಲ್ಲಿ ಪತ್ರಿಕಾ ಛಾಯಾಗ್ರಾಹಕರಿಗಾಗಿ ಆಯೋಜಿಸಲಾಗಿದ್ದ ರಾಷ್ಟ್ರ ಮಟ್ಟದ ಛಾಯಾಚಿತ್ರ ಪ್ರದರ್ಶನ, ಸ್ಪರ್ಧೆ ಹಾಗೂ ತರಬೇತಿ ಕಾರ್ಯಾಗಾರದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ "ಮೊದಲನೆಯದಾಗಿ ಕ್ಯಾಮರಾ ಕಂಡುಹಿಡಿದವರಿಗೆ ನನ್ನ ಅಭಿನಂದನೆಗಳು. ಈ ಅರ್ಥಪೂರ್ಣ ಕಾರ್ಯಾಗಾರದಲ್ಲಿ ಭಾಗವಹಿಸಿದ ಎಲ್ಲಾ ಛಾಯಾಗ್ರಾಹಕರು ಅಭಿನಂದನಾರ್ಹರು," ಎಂದು ಶುಭ ಹಾರೈಸಿದರು.ತಮ್ಮ ಜೀವವನ್ನೇ ಪಣಕ್ಕಿಟ್ಟು, ಸನ್ನಿವೇಶದ ಪ್ರತಿಯೊಂದು ಭಾವನೆಯನ್ನು ಕ್ಯಾಮೆರಾದಲ್ಲಿ ಸೆರೆಹಿಡಿದು ಇತಿಹಾಸವನ್ನು ಶಾಶ್ವತವಾಗಿ ದಾಖಲಿಸುವಲ್ಲಿ ಛಾಯಾಗ್ರಾಹಕರ ಪರಿಶ್ರಮ ಅತ್ಯಂತ ಅನನ್ಯವಾದದ್ದು, ಇಂದು ಛಾಯಾಗ್ರಾಹಕರಿಲ್ಲದ ಜಗತ್ತನ್ನು ಊಹಿಸಿಕೊಳ್ಳುವುದು ಅಸಾಧ್ಯವೆಂದು ಹೇಳಿದರು.

ಈ ಕಾರ್ಯಾಗಾರದಲ್ಲಿ ಕ್ಯಾಮರಾ ಹುಟ್ಟು, ಬೆಳವಣಿಗೆಗೆ ಸಂಬಂಧಿಸಿದಂತೆ ನೂರು ವರ್ಷದ ಹಳೆಯ ಕ್ಯಾಮೆರಾ ಪ್ರದರ್ಶನ ಮಾಡಿರುವುದು ಉತ್ತಮ ಕೆಲಸವಾಗಿದೆ. ಮುಂದೆ ಇಂತಹ ಕಾರ್ಯಕ್ರಮಗಳನ್ನು ಅಂತರಾಷ್ಟ್ರೀಯ ಮಟ್ಟದಲ್ಲೂ ಮಾಡಲು ಮುಂದಾಗಬೇಕು ಎಂದರು.

ಚಿತ್ರಕಲಾ ಪರಿಷತ್ ಅಧ್ಯಕ್ಷ ಡಾ. ಬಿ.ಎಲ್. ಶಂಕರ್ ಅವರು ಮಾತನಾಡಿ, ಸಾವಿರ ಪದಗಳಲ್ಲಿ ಹೇಳಲಾಗದ ಸುದ್ದಿಯನ್ನು ಒಂದೇ ಒಂದು ಛಾಯಾಚಿತ್ರ ಅತ್ಯದ್ಭುತವಾಗಿ ಕಟ್ಟಿಕೊಡುತ್ತದೆ. ಇತಿಹಾಸ ದಾಖಲಿಸುವಲ್ಲಿ ಛಾಯಾಗ್ರಾಹಕರ ಪಾತ್ರ ಅಪಾರ. ಪ್ರಸ್ತುತ ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನ ದೊಡ್ಡ ಸವಾಲಾಗಿದ್ದು, ಕಾಲಕ್ಕೆ ತಕ್ಕಂತೆ ಛಾಯಾಗ್ರಾಹಕರು ತಾಂತ್ರಿಕವಾಗಿ ಅಪ್ಡೇಟ್ ಆಗುವುದು ಅಗತ್ಯ, ಇಂತಹ ಕಾರ್ಯಾಗಾರಗಳು ಅವರಿಗೆ ಹೆಚ್ಚಿನ ಶಕ್ತಿ ತುಂಬುತ್ತವೆ ಎಂದು ತಿಳಿಸಿದರು. ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷೆ ಆಯೇಷಾ ಖಾನಂ ಮಾತನಾಡಿ, "ಜಗತ್ತಿಗೆ ಸ್ಮೈಲ್ ಎಂದು ಹೇಳುವ ಏಕೈಕ ವೃತ್ತಿ ಎಂದರೆ



ಅದು ಛಾಯಾಗ್ರಹಣ. ಛಾಯಾಚಿತ್ರ ಪತ್ರಿಕೋದ್ಯಮವು ಧ್ವನಿ ಇಲ್ಲದವರಿಗೆ ಧ್ವನಿಯಾಗಿದ್ದು, ಭಾಷೆಗಳ ಗಡಿಯನ್ನು ಮೀರಿ ಬೆಳೆದಿದೆ. ದೇಶಾದ್ಯಂತ 220 ಛಾಯಾಚಿತ್ರಗಳು ಈ ಪ್ರದರ್ಶನದಲ್ಲಿ ಭಾಗವಹಿಸಿರುವುದು ಹೆಮ್ಮೆಯ ವಿಷಯ. ಅಕಾಡೆಮಿ ವತಿಯಿಂದ ರಾಷ್ಟ್ರೀಯ ಮಟ್ಟದಲ್ಲಿ ಇದೇ ಮೊದಲ ಬಾರಿಗೆ ಇಂತಹ ಬೃಹತ್ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಧೈರ್ಯ ಮತ್ತು ಜಾಣತನದ ಜೊತೆಗೆ ಕಣ್ಣು ಹಾಗೂ ಹೃದಯದ ನಡುವೆ ಕ್ಯಾಮೆರಾ ಇಟ್ಟು ಚಿತ್ರ ತೆಗೆದಾಗ ಮಾತ್ರ ಅತ್ಯುತ್ತಮ ಫೋಟೋಗಳು ಹೊರಹೊಮ್ಮಲು ಸಾಧ್ಯ," ಎಂದರು.

ಕರ್ನಾಟಕ ಮಾಹಿತಿ ಆಯೋಗದ ಆಯುಕ್ತೆ ಡಾ. ಬಿ.ಆರ್. ಮಮತಾ ಅವರು ಮಾತನಾಡಿ, "ಪ್ರತಿ ಛಾಯಾಚಿತ್ರವೂ ಸಹನೆ ಮತ್ತು ತಪಸ್ಸಿನ ಪ್ರತಿಫಲ. ಬರವಣಿಗೆಯನ್ನು ಮೀರಿದ ಛಾಯಾಚಿತ್ರವು ಜಾಗತಿಕವಾಗಿ ಎಲ್ಲರಿಗೂ ಅರ್ಥವಾಗುವ ಭಾಷೆಯಾಗಿದೆ," ಎಂದು ಬಣ್ಣಿಸಿದರು. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಕಾರ್ಯದರ್ಶಿ ಪ್ರಭಾಕರ್ ಅವರು ಮಾತನಾಡಿ, "ಫೋಟೋ ತೆಗೆದವರು ಮತ್ತು ತೆಗೆಸಿಕೊಂಡವರು ಇಲ್ಲವಾಗಬಹುದು, ಆದರೆ ಫೋಟೋ ಮತ್ತು ಅದು ದಾಖಲಿಸಿದ ಇತಿಹಾಸ ಎಂದಿಗೂ ಅಳಿಯುವುದಿಲ್ಲ. ಮಾಧ್ಯಮಗಳಲ್ಲಿ ವರದಿಗಾರರಿಗೆ ಸಿಗುವಷ್ಟೇ ಮಾನ್ಯತೆ ಛಾಯಾಗ್ರಾಹಕರಿಗೂ ಸಿಗಬೇಕು ಎಂಬುದನ್ನು ಅರಿತು ಸಿದ್ದರಾಮಯ್ಯ ಅವರು ಮೊದಲ ಬಾರಿಗೆ ಛಾಯಾಗ್ರಾಹಕರೊಬ್ಬರಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡಿದ್ದರು," ಎಂದು ಸ್ಮರಿಸಿದರು.ಕಾರ್ಯಕ್ರಮದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಮಾಧ್ಯಮ ಅಕಾಡೆಮಿ ಸದಸ್ಯರಾದ ಡಾ. ಮಮತಾ, ಅಬ್ಬಾಸ್ ಅಲ್ಲಾ, ಕಂದವಾರ ವೆಂಕಟೇಶ್ ಹಾಗೂ ಕಿರಣ್ ಅವರು ಉಪಸ್ಥಿತರಿದ್ದರು. ಅಕಾಡೆಮಿಯ ಕಾರ್ಯದರ್ಶಿ ಎಲ್.ಪಿ. ಗಿರೀಶ್ ಅವರು ಸ್ವಾಗತಿಸಿದರೆ, ಹಿರಿಯ ಪತ್ರಕರ್ತ ನಂಜುಂಡಪ್ಪವಿ. ಅವರು ಕಾರ್ಯಕ್ರಮವನ್ನು ನಿರೂಪಿಸಿದರು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಲಬುರಗಿ ಉಪ ನಿರ್ದೇಶಕ ಜಡಿಯಪ್ಪ ಗೆದ್ಲಗಟ್ಟಿ ಅವರು ವಂದಿಸಿದರು.

### ಪ್ರಶಸ್ತಿ ವಿಜೇತರು

- ಪ್ರಥಮ ಬಹುಮಾನ: ಬಿನುರಾಜ್, ಕೇರಳ
- ದ್ವಿತಿಯ ಬಹುಮಾನ: ಕುನಾಲ್ ಪಾಟೀಲ್, ಮಹಾರಾಷ್ಟ್ರ (ಮುಂಬೈ)
- ತೃತೀಯ ಬಹುಮಾನ: ವೀರಗೋಣಿ ರಜಿನಿಕಾಂತ್, ತೆಲಂಗಾಣ

## ಅಧಿಕಾರಾವಧಿ ಮಧ್ಯದಲ್ಲಿ ಸಿಎಂ ಬದಲಾವಣೆ ಮಾಡಿದಾಗಲೆಲ್ಲ ಪಕ್ಷಕ್ಕೆ ಹಿನ್ನಡೆ: ಕೆ.ಎನ್.ರಾಜಣ್ಣ

**ಬೆಂಗಳೂರು, ಆ.4:** ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಸಂಪುಟ ವಿಸ್ತರಣೆ ಬೆನ್ನಲ್ಲೇ ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರ ಹೇಳಿಕೆ ಭಾರೀ ಸಂಚಲನ ಮೂಡಿಸಿದೆ. ರಾಜ್ಯದಲ್ಲಿ ಮಧ್ಯಂತರದಲ್ಲಿ ಮುಖ್ಯಮಂತ್ರಿಯನ್ನು ಬದಲಾಯಿಸಿದಾಗಲೆಲ್ಲ ಪಕ್ಷಕ್ಕೆ ತೀವ್ರ ಹಿನ್ನಡೆಯಾಗಿದೆ ಎಂದಿದ್ದಾರೆ. ಕರ್ನಾಟಕದ ರಾಜಕೀಯ ಇತಿಹಾಸವನ್ನು ಗಮನಿಸಿದರೆ, ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಾಗ ಅವಧಿಯ ಮಧ್ಯದಲ್ಲಿ ಮುಖ್ಯಮಂತ್ರಿಯನ್ನು ಬದಲಾವಣೆ ಮಾಡಿದಾಗಲೆಲ್ಲ ಪಕ್ಷಕ್ಕೆ ದೊಡ್ಡ ಮಟ್ಟದ ರಾಜಕೀಯ ಡ್ಯಾಮೇಜ್ ಆಗಿದೆ. ಈ ಹಿಂದೆ ನಡೆದ ಹಲವು ಉದಾಹರಣೆಗಳು ನಮ್ಮ ಮುಂದಿವೆ ಎಂದು ನೇರವಾಗಿಯೇ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಸಂಪುಟ ವಿಸ್ತರಣೆ ಮತ್ತು ಅಧಿಕಾರ ಹಂಚಿಕೆಯ ಕುರಿತು ಹೈಕಮಾಂಡ್ ಹಂತದಲ್ಲಿ



ಮಾತುಕತೆಗಳು ನಡೆಯುತ್ತಿರುವ ಬೆನ್ನಲ್ಲೇ ಬಂದಿರುವ ಈ ಹೇಳಿಕೆ ಕಾಂಗ್ರೆಸ್ ಒಳಗೆ ತೀವ್ರ ಕುತೂಹಲಕ್ಕೆ ಕಾರಣವಾಗಿದೆ. ನಾಯಕತ್ವ ಬದಲಾವಣೆಯಂತಹ ನಿರ್ಧಾರಗಳು ಸರ್ಕಾರದ ಸ್ಥಿರತೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತವೆ ಮತ್ತು ಮುಂಬರುವ ಚುನಾವಣೆಗಳಲ್ಲಿ ಪಕ್ಷಕ್ಕೆ ಹಿನ್ನಡೆ ತರಬಹುದು ಎಂಬ ಸುಳಿವನ್ನು ರಾಜಣ್ಣ ನೀಡಿದ್ದಾರೆ.ರಾಜಣ್ಣ ಅವರ ಈ ಅಚ್ಚರಿಯ ಹಾಗೂ ಸ್ಫೋಟಕ ಹೇಳಿಕೆಯು ಈಗ ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ಬೆಂಬಲಿಗರ ಪಾಳೆಯದಲ್ಲಿ ಭಾರೀ ಚರ್ಚೆಗೆ ಗ್ರಾಸವಾಗಿದೆ. ಪಕ್ಷದ ಆಂತರಿಕ ಭಿನ್ನಾಭಿಪ್ರಾಯಗಳು ಮತ್ತೆ ಬಹಿರಂಗಗೊಳ್ಳುತ್ತಿವೆಯೇ ಎಂಬ ಪ್ರಶ್ನೆಗಳು ಹುಟ್ಟಿಕೊಂಡಿದ್ದು, ಹೈಕಮಾಂಡ್ ಈ ಬಗ್ಗೆ ಹೇಗೆ ಸ್ಪಂದಿಸಲಿದೆ ಎಂಬುದನ್ನು ಕಾದುನೋಡಬೇಕಿದೆ.

## ಬ್ರಾಹ್ಮಣ ಪ್ರಾತಿನಿಧ್ಯವಿಲ್ಲದ ಸಂಪುಟ ದೇಶಪಾಂಡೆ ಬೆಂಬಲಿಗರ ಆಕ್ರೋಶ

**ಬೆಂಗಳೂರು, ಆ.4:** ಹಿರಿಯ ಕಾಂಗ್ರೆಸ್ ಮುಖಂಡ ಆರ್.ವಿ. ದೇಶಪಾಂಡೆ ಅವರಿಗೆ ಸಚಿವ ಸ್ಥಾನ ನೀಡದ ಪಕ್ಷದ ಕ್ರಮ ವಿರೋಧಿಸಿ ಕೆಪಿಸಿಸಿ ಕಚೇರಿ ಮುಂದೆ ನೂರಾರು ಕಾರ್ಯಕರ್ತರು, ಬೆಂಬಲಿಗರು ಮಂಗಳವಾರ ಪ್ರತಿಭಟನೆ ನಡೆಸಿದರು. ಸತತ 9 ಬಾರಿ ಶಾಸಕರಾಗಿ, 13 ವರ್ಷ ಕೈಗಾರಿಕಾ ಸಚಿವರಾಗಿ ಅತ್ಯಂತ ಹಿರಿತನ ಹೊಂದಿರುವ ನಾಯಕನನ್ನು ಕಡೆಗಣಿಸಿರುವುದಕ್ಕೆ ಹಳಿಯಾಳದಿಂದ ಬಂದಿದ್ದ ಅಸಂಖ್ಯಾತ ಕಾರ್ಯಕರ್ತರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

1952ರಿಂದ ಇಲ್ಲಿಯವರೆಗೆ ರಚಿಸಲಾದ ಎಲ್ಲಾ ಸರ್ಕಾರದಲ್ಲೂ ಬ್ರಾಹ್ಮಣರಿಗೆ ಪ್ರಾತಿನಿಧ್ಯ ದೊರಕಿತ್ತು. ಇದೇ ಮೊದಲ ಬಾರಿಗೆ ಬ್ರಾಹ್ಮಣ ಸಮುದಾಯ ಕಡೆಗಣಿಸಿ ಯಾವುದೇ ಒಬ್ಬ ಶಾಸಕರಿಗೂ ಮಂತ್ರಿಮಂಡಲದಲ್ಲಿ ಅವಕಾಶ ನೀಡಿಲ್ಲ. ಗುಂಡೂರಾಯರ ಕಾಲದಲ್ಲಿ ಮೂವರು, ದೇವರಾಜ ಕಾಲದಲ್ಲಿ ನಾಲ್ವರು, ವೀರಪ್ಪ ಮೊಯ್ಲಿ ಕಾಲದಲ್ಲೂ ನಾಲ್ವರು ಬ್ರಾಹ್ಮಣ ಶಾಸಕರಿಗೆ ಮಂತ್ರಿಗಿರಿ ನೀಡಲಾಗಿತ್ತು. ಕೆ.ಸಿ. ರೆಡ್ಡಿ ಕಾಲದಿಂದ ಸಿದ್ದರಾಮಯ್ಯ ಸರ್ಕಾರದವರೆಗೂ ಸಂಪುಟದಲ್ಲಿ ಬ್ರಾಹ್ಮಣರಿಗೆ ಅವಕಾಶ ನೀಡಲಾಗಿತ್ತು. ಸ್ವಾತಂತ್ರ ನಂತರದ 70 ವರ್ಷಗಳ ರಾಜ್ಯದ ರಾಜಕೀಯ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಬ್ರಾಹ್ಮಣ ಪ್ರಾತಿನಿಧ್ಯವಿಲ್ಲದ ಸಂಪುಟ ರಚಿಸಿ ಸಮುದಾಯಕ್ಕೆ ಅನ್ಯಾಯ ಎಸಗಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಕೃಷಿ ಅಧಿಕಾರಿ ಹುದ್ದೆ ನೇಮಕಾತಿ ನಿಯಮಗಳ ಸಂಬಂಧ ಜಿಕೆವಿಕೆ ಕೃಷಿ ವಿಶ್ವವಿದ್ಯಾಲಯ ವಿದ್ಯಾರ್ಥಿಗಳು ಮಂಗಳವಾರ ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿಮಾಡಿ ಮನವಿ ಸಲ್ಲಿಸಿದರು.ಈ ಸಂದರ್ಭದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಇದ್ದರು.



ಬೆಂಗಳೂರಿನಲ್ಲಿ ಮಂಗಳವಾರ ನಡೆದ 14ನೇ 'ಬೆಂಗಳೂರು ಇಂಡಿಯಾ ನ್ಯಾನೋ' ಸಮ್ಮೇಳನದಲ್ಲಿ, ನ್ಯಾನೊತಂತ್ರಜ್ಞಾನ ಮಿಷನ್ ಗ್ರೂಪ್‌ನ ಗೌರವಾಧ್ಯಕ್ಷ ಭಾರತರತ್ನ ಪ್ರೊ.ಸಿ.ಎನ್.ಆರ್.ರಾವ್ ಅವರನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸನ್ಮಾನಿಸಿದರು.

## ಪೀಣ್ಯ ಎಲಿವೇಟೆಡ್ ಫ್ಲೈಓವರ್‌ನಲ್ಲಿ ರಾತ್ರಿ ಸಂಚಾರ ತಾತ್ಕಾಲಿಕ ನಿಷೇಧ: ಪೊಲೀಸ್ ಇಲಾಖೆ ಆದೇಶ

**ಬೆಂಗಳೂರು, ಆ.4:** ರಾಜಧಾನಿಯ ರಾಷ್ಟ್ರೀಯ ಹೆದ್ದಾರಿ-4ರಲ್ಲಿರುವ ಪೀಣ್ಯ ಎಲಿವೇಟೆಡ್ ಫ್ಲೈಓವರ್ (ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಮೇಲ್ಸೇತುವೆ) ಮೇಲೆ ರಾತ್ರಿ ವೇಳೆಯಲ್ಲಿ ವಾಹನ ಸಂಚಾರವನ್ನು ತಾತ್ಕಾಲಿಕವಾಗಿ ನಿಷೇಧಿಸಿ ಬೆಂಗಳೂರು ನಗರ ಸಂಚಾರ ಪೊಲೀಸ್ ಇಲಾಖೆ ಆದೇಶ ಹೊರಡಿಸಿದೆ.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ಮೇಲ್ಸೇತುವೆಯ ಮೇಲೆ ಡಾಂಬರೀಕರಣ (ಆಸ್ಫಾಲ್ಟಿಂಗ್) ಕಾಮಗಾರಿಯನ್ನು ಕೈಗೆತ್ತಿಕೊಂಡಿರುವ ಹಿನ್ನೆಲೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಆಗಸ್ಟ್ 3ರಿಂದ 12ರವರೆಗೆ ಈ ಸಂಚಾರ ನಿರ್ಬಂಧ ಜಾರಿಯಲ್ಲಿರಲಿದೆ.ಕಾಮಗಾರಿಯ ಅವಧಿಯಲ್ಲಿ ಸಾಮಾನ್ಯ ದಿನಗಳಲ್ಲಿ ರಾತ್ರಿ 10:00 ಗಂಟೆಯಿಂದ ಬೆಳಗಿನ ಜಾವ 5:00 ಗಂಟೆಯವರೆಗೆ ತುಮಕೂರು ಕಡೆಗೆ ತೆರಳುವ ಎಲ್ಲಾ ರೀತಿಯ ವಾಹನಗಳ ಸಂಚಾರವನ್ನು ತಡೆಹಿಡಿಯಲಾಗುತ್ತದೆ. ಆದರೆ, ವಾರಾಂತ್ಯದ ದಿನಗಳಾದ ಶನಿವಾರ ಮತ್ತು ಭಾನುವಾರಗಳಂದು ಸಾರ್ವಜನಿಕರ ಅನುಕೂಲಕ್ಕಾಗಿ ರಾತ್ರಿ 12:00 ಗಂಟೆಯಿಂದ ಬೆಳಗಿನ ಜಾವ 5:00 ಗಂಟೆಯವರೆಗೆ ಮಾತ್ರ ಸಂಚಾರ ನಿರ್ಬಂಧ ವಿಧಿಸಲಾಗಿದೆ. ಈ ಸಂಚಾರ ನಿಷೇಧವು ಮೇಲ್ಸೇತುವೆಯ ಎಸ್‌ಆರ್‌ಎಸ್ ಅಪ್ಪರ್ ರ್‍ಯಾಂಪ್‌ನಿಂದ ಕೆನ್ನಮೆಟಲ್ ವಿಡಿಯಾ ಡೌನ್ ರ್‍ಯಾಂಪ್‌ವರೆಗಿನ ವ್ಯಾಪ್ತಿಗೆ ಅನ್ವಯಿಸಲಿದೆ.

## ದಾಖಲೆ ನೀಡದಿದ್ದರೆ ಗೃಹಜ್ಯೋತಿ ಕಡಿತ: ಇಂಧನ ಇಲಾಖೆ

**ಬೆಂಗಳೂರು, ಆ.4:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ಪಡೆಯುತ್ತಿರುವ ಗ್ರಾಹಕರಿಗೆ ಇಂಧನ ಇಲಾಖೆ ಶಾಕಿಂಗ್ ಸುದ್ದಿ ನೀಡಿದ್ದು, ರಾಜ್ಯಾದ್ಯಂತ ನಡೆಯುತ್ತಿರುವ ಮನೆ-ಮನೆ ಸಮೀಕ್ಷೆಯಲ್ಲಿ ಅಗತ್ಯ ದಾಖಲೆಗಳು ಮತ್ತು ಮಾಹಿತಿಯನ್ನು ನೀಡದಿದ್ದರೆ ಫಲಾನುಭವಿಗಳು ಯೋಜನೆಯ ವ್ಯಾಪ್ತಿಯಿಂದ ಹೊರಗುಳಿಯುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಯಾವುದೇ ಅರ್ಹ ಗ್ರಾಹಕರು ಯೋಜನೆಯ ಸೌಲಭ್ಯದಿಂದ ವಂಚಿತರಾಗದಂತೆ ವಿಶೇಷ ಶಿಬಿರಗಳನ್ನು ಆಯೋಜಿಸುವ ಪ್ರಸ್ತಾವನೆಯನ್ನೂ ಸರ್ಕಾರದ ಮುಂದಿಡಲಾಗಿದೆ. ಇಂಧನ ಇಲಾಖೆಯ ಅಂಕಿ-ಅಂಶಗಳ ಪ್ರಕಾರ ರಾಜ್ಯದಲ್ಲಿ ಗೃಹಜ್ಯೋತಿ ಯೋಜನೆಯಡಿ 1,65,32,652 ಗೃಹ ವಿದ್ಯುತ್ ಗ್ರಾಹಕರು ನೋಂದಾಯಿಸಿಕೊಂಡಿದ್ದಾರೆ. ಇವರಲ್ಲಿ ಆಗಸ್ಟ್ 2ರವರೆಗೆ 91,50,081 ಫಲಾನುಭವಿಗಳ ಮನೆಗಳಿಗೆ ಮೀಟರ್ ರೀಡರ್‌ಗಳು ಭೇಟಿ ನೀಡಿ ಸಮೀಕ್ಷೆ ಪೂರ್ಣಗೊಳಿಸಿದ್ದು, ಇನ್ನೂ 73,82,571 ಫಲಾನುಭವಿಗಳ ಮಾಹಿತಿ ಸಂಗ್ರಹವಾಗಿಲ್ಲ.

ಮನೆ-ಮನೆ ಸಮೀಕ್ಷೆಯ ಉದ್ದೇಶ ಯೋಜನೆಯ ಫಲಾನುಭವಿಗಳ ವಿವರಗಳನ್ನು ನವೀಕರಿಸುವುದು ಮತ್ತು ಯೋಜನೆಯ ಲಾಭ ಸರಿಯಾದ ಫಲಾನುಭವಿಗಳಿಗೆ ತಲುಪುತ್ತಿರುವುದನ್ನು ಖಚಿತಪಡಿಸಿಕೊಳ್ಳುವುದಾಗಿದೆ. ಸಮೀಕ್ಷೆ ವೇಳೆ ಗ್ರಾಹಕರು ಮನೆಯಲ್ಲಿ ಇಲ್ಲದಿದ್ದರೆ ಅಥವಾ ಮಾಹಿತಿ ನೀಡಲು ನಿರಾಕರಿಸಿದರೆ




ಅವರು ಯೋಜನೆಯ ಪಟ್ಟಿಯಿಂದ ಹೊರಗುಳಿಯುವ ಸಾಧ್ಯತೆ ಇದೆ ಎಂಬ ಎಚ್ಚರಿಕೆಯನ್ನು ಇಲಾಖೆ ನೀಡಿದೆ.

ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ರಾಜ್ಯದ ಎಲ್ಲಾ ಎಸ್ಕಾಂ ಕಚೇರಿಗಳಲ್ಲಿ ವಿಶೇಷ ಸಮೀಕ್ಷಾ ಶಿಬಿರಗಳನ್ನು ನಡೆಸಲು ಸರ್ಕಾರದ ಅನುಮತಿ ಕೋರಲಾಗಿದೆ. ಈ ಶಿಬಿರಗಳಲ್ಲಿ ಫಲಾನುಭವಿಗಳು ಸ್ವತಃ ಹಾಜರಾಗಿ ತಮ ದಾಖಲೆಗಳು ಮತ್ತು ಮಾಹಿತಿಯನ್ನು ಸಲ್ಲಿಸಬಹುದಾಗಿದೆ. ಅಲ್ಲದೆ ಮೊದಲ ಬಾರಿ ಮನೆಗೆ ಭೇಟಿ ನೀಡಿದಾಗ ಫಲಾನುಭವಿಗಳು ಸಿಗದಿದ್ದರೆ ಅಥವಾ ಮಾಹಿತಿ ನೀಡದಿದ್ದರೆ, ಮೀಟರ್ ರೀಡರ್‌ಗಳು ಮತ್ತೊಮ್ಮೆ ಮನೆಗಳಿಗೆ ಭೇಟಿ ನೀಡುವಂತೆ ನಿರ್ದೇಶನ ನೀಡಲಾಗಿದೆ.

ಈ ನಡುವೆ ಬೆಸ್ಕಾಂ ವ್ಯಾಪ್ತಿಯ ವೈಟ್‌ಫೀಲ್ಡ್, ಮಹದೇವಪುರ ಮತ್ತು ಸರ್ಜಾಪುರ ಸೇರಿದಂತೆ ಕೆಲವು ಪ್ರದೇಶಗಳ ದೊಡ್ಡ ಅಪಾರ್ಟ್‌ಮೆಂಟ್‌ಗಳಲ್ಲಿ ಮೀಟರ್ ರೀಡರ್‌ಗಳಿಗೆ ಪ್ರವೇಶ ನೀಡುತ್ತಿಲ್ಲ ಎಂಬ ದೂರುಗಳು ಕೇಳಿಬಂದಿವೆ.

ಕೆಲ ನಿವಾಸಿಗಳು ತಮ ವೈಯಕ್ತಿಕ ಮಾಹಿತಿಯನ್ನು ಹಂಚಿಕೊಳ್ಳಲು ಹಿಂದೇಟು ಹಾಕುತ್ತಿರುವುದರಿಂದ ಸಮೀಕ್ಷೆ ಕಾರ್ಯಕ್ಕೆ ಅಡ್ಡಿಯಾಗುತ್ತಿದೆ ಎಂದು ಸಿಬ್ಬಂದಿ ತಿಳಿಸಿದ್ದಾರೆ. ಈ ಬಗ್ಗೆ ಮೀಟರ್ ರೀಡರ್‌ಗಳು ಬೆಸ್ಕಾಂ ಮುಖ್ಯ ಕಚೇರಿಯ ಗಮನಕ್ಕೂ ತಂದಿದ್ದಾರೆಂದು ತಿಳಿದುಬಂದಿದೆ.

ಕೆಲವರು ತಮ ಮಾಹಿತಿಯನ್ನು ಹಂಚಿಕೊಳ್ಳಲು ಆಸಕ್ತಿ ತೋರದಿರುವುದು ನಿಜ. ಅಂಥ ಸಂದರ್ಭಗಳಲ್ಲಿ ಆ?ಯಪ್‌ನಲ್ಲಿ ಮಾಹಿತಿ ನೀಡಲು ನಿರಾಕರಿಸಿದ್ದಾರೆ ಎಂಬ ಆಯ್ಕೆಯಿದೆ ಮತ್ತು ಫಲಾನುಭವಿಯಿಂದ ಸಹಿಯನ್ನೂ ಪಡೆಯಲಾಗುತ್ತದೆ. ಇದುವರೆಗೆ ಯಾವುದೇ ಫಲಾನುಭವಿಯನ್ನು ಪಟ್ಟಿಯಿಂದ ಕೈಬಿಡಲಾಗಿಲ್ಲ. ಯೋಜನೆಯಿಂದ ಯಾರನ್ನಾದರೂ ಹೊರಗಿಡುವ ಕುರಿತು ಅಂತಿಮ ನಿರ್ಧಾರವನ್ನು ಸರ್ಕಾರವೇ ಕೈಗೊಳ್ಳಲಿದೆ ಎಂದು ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಶಿವಶಂಕರ ಎನ್ ಅವರು, ಸ್ಪಷ್ಟಪಡಿಸಿದ್ದಾರೆ.

**ಸಮೀಕ್ಷೆ ವೇಳೆ ಯಾವ ದಾಖಲೆಗಳು ಬೇಕು?**

ಮನೆ-ಮನೆ ಸಮೀಕ್ಷೆ ವೇಳೆ ಫಲಾನುಭವಿಗಳು ಈ ಕೆಳಗಿನ ದಾಖಲೆಗಳನ್ನು ಸಿದ್ಧವಾಗಿಟ್ಟುಕೊಳ್ಳುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ. ಆಧಾರ್ ಕಾರ್ಡ್, ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರ, ಮತದಾರರ ಗುರುತಿನ ಚೀಟಿ, ಪ್ಯಾನ್ ಕಾರ್ಡ್, ಬಾಡಿಗೆ ಅಥವಾ ಲೀಸ್ ಒಪ್ಪಂದ ಪತ್ರ(ಅಗತ್ಯವಿದ್ದರೆ), ಪಡಿತರ ಚೀಟಿ, ಜಾತಿ ಪ್ರಮಾಣಪತ್ರ (ಐಚ್ಛಿಕ), ಬಿಪಿಎಲ್ ಅಥವಾ ಎಪಿಎಲ್ ಕಾರ್ಡ್ ವಿವರಗಳು. ಇದರ ಜೊತೆಗೆ ಫಲಾನುಭವಿಯ ವೃತ್ತಿ, ವಾಸಿಸುವ ಸ್ಥಳ ಸೇರಿದಂತೆ ಕೆಲವು ಮೂಲಭೂತ ಮಾಹಿತಿಯನ್ನೂ ಮೀಟರ್ ರೀಡರ್‌ಗಳು ದಾಖಲಿಸುತ್ತಿದ್ದಾರೆ.

ಇಲ್ಲಿವರೆಗೆ ಬೆಸ್ಕಾಂ ವ್ಯಾಪ್ತಿಯಲ್ಲಿ 37,28,114, ಸಿಇಎಸ್‌ಸಿ (ಮೈಸೂರು) ವ್ಯಾಪ್ತಿಯಲ್ಲಿ 11,09,782, ಗೆಸ್ಕಾಂ (ಕಲಬುರಗಿ) ವ್ಯಾಪ್ತಿಯಲ್ಲಿ 8,50,786, ಹೆಸ್ಕಾಂ (ಹುಬ್ಬಳ್ಳಿ-ಧಾರವಾಡ) ವ್ಯಾಪ್ತಿಯಲ್ಲಿ 22,03,401, ಮೆಸ್ಕಾಂ (ಮಂಗಳೂರು) ವ್ಯಾಪ್ತಿಯಲ್ಲಿ 12,31,289 ಹಾಗೂ ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರ ಸಂಘದ ವ್ಯಾಪ್ತಿಯಲ್ಲಿ 26,709 ಫಲಾನುಭವಿಗಳ ಸಮೀಕ್ಷೆ ಪೂರ್ಣಗೊಂಡಿದೆ.

### 26,997 ಕೋಟಿಗೂ ಅಧಿಕ ವೆಚ್ಚ

**ಆಗಸ್ಟ್ 2023ರಲ್ಲಿ ಆರಂಭವಾದ ಗೃಹಜ್ಯೋತಿ ಯೋಜನೆಗಾಗಿ ಮೇ 2026ರವರೆಗೆ ರಾಜ್ಯ ಸರ್ಕಾರ ಒಟ್ಟು ರೂ.26,997.54 ಕೋಟಿ ವೆಚ್ಚ ಮಾಡಿದೆ. ಇದರಲ್ಲಿ ಬೆಸ್ಕಾಂ ವ್ಯಾಪ್ತಿಯಲ್ಲೇ ಅತಿ ಹೆಚ್ಚು 12,577.61 ಕೋಟಿ ರೂ. ವೆಚ್ಚವಾಗಿದೆ.**

**ಈ ನಡುವೆ ರಾಜ್ಯ ಸರ್ಕಾರದ ಅತ್ಯಂತ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ ಗೃಹಜ್ಯೋತಿ ಯೋಜನೆಯ ಫಲಾನುಭವಿಗಳು ಸಮೀಕ್ಷೆಯಲ್ಲಿ ಕಡ್ಡಾಯವಾಗಿ ಸಹಕರಿಸಬೇಕು ಎಂದು ಇಂಧನ ಇಲಾಖೆ ಮನವಿ ಮಾಡಿದೆ.**

## ಈ ಬಾರಿ ಅನಾವರಣಗೊಳ್ಳಲಿವೆ ಗಂಗ ಸಾಮ್ರಾಜ್ಯದ ಗತವೈಭವ ಬಿಂಬಿಸುವ ಹೂವಿನ ಕಲಾಕೃತಿಗಳು


## ನಾಳೆಯಿಂದ ಆ.17ರವರೆಗೆ ಲಾಲ್‌ಬಾಗ್‌ನಲ್ಲಿ ಸ್ವಾತಂತ್ರ್ಯೋತ್ಸವ ಫಲಪುಷ್ಪ ಪ್ರದರ್ಶನ

**ಬೆಂಗಳೂರು,ಆ.4:** ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ನಗರದ ಲಾಲ್‌ಬಾಗ್‌ನಲ್ಲಿ ನಡೆಯಲಿರುವ 220ನೇ ಫಲಪುಷ್ಪ ಪ್ರದರ್ಶನದಲ್ಲಿ ಈ ಬಾರಿ ಗಂಗ ಸಾಮ್ರಾಜ್ಯದ ಗತವೈಭವ ಹೂಗಳ ಮೂಲಕ ಅನಾವರಣಗೊಳ್ಳಲಿದೆ.

ಆಗಸ್ಟ್ 6ರಿಂದ 17ರವರೆಗೆ 12 ದಿನಗಳ ಕಾಲ ನಡೆಯಲಿರುವ ಫಲಪುಷ್ಪ ಪ್ರದರ್ಶನಕ್ಕೆ ತೋಟಗಾರಿಕೆ ಇಲಾಖೆ ಭರದ ಸಿದ್ಧತೆ ನಡೆಸಿದೆ. ಆಗಸ್ಟ್ 6ರಂದು ಬೆಳಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ ಎಂದು ತೋಟಗಾರಿಕೆ ಇಲಾಖೆಯ ಕಾರ್ಯದರ್ಶಿ ಆರ್. ಗಿರೀಶ್ ಇಂದು ಲಾಲ್‌ಬಾಗ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಗಂಗರ ಆಳ್ವಿಕೆಯ ವೈಭವವನ್ನು ಬಿಂಬಿಸುವ ಬಣ್ಣಬಣ್ಣದ ಹೂವಿನ ಕಲಾಕೃತಿಗಳು ಈ ಬಾರಿಯ ಪ್ರದರ್ಶನದ ಪ್ರಮುಖ ಆಕರ್ಷಣೆಯಾಗಲಿವೆ. ಗಂಗ ದೊರೆಗಳ ಬಲಿಷ್ಠ ಗಜಸೇನೆ, ಯುದ್ಧದ ಸನ್ನಿವೇಶ, ಶ್ರವಣಬೆಳಗೊಳದ ಬಾಹುಬಲಿ ಪ್ರತಿಮೆ ಹಾಗೂ ತಲಕಾಡಿನ ದೇವಾಲಯಗಳ ಪ್ರತಿಕೃತಿಗಳನ್ನು ಹೂಗಳಿಂದ ನಿರ್ಮಿಸಲಾಗುತ್ತಿದೆ.

ಇದರೊಂದಿಗೆ ಕನ್ನಡ ಸಾಹಿತ್ಯ, ಶಿಕ್ಷಣ, ನೀರಾವರಿ ಹಾಗೂ ಶಿಲ್ಪಕಲೆಗೆ ಗಂಗರ



ಕೊಡುಗೆಯನ್ನು ಪರಿಚಯಿಸುವ ವಿನೂತನ ಕಲಾಕೃತಿಗಳನ್ನೂ ಪ್ರದರ್ಶಿಸಲಾಗುವುದು. ಇತಿಹಾಸವನ್ನು ಹೂಗಳ ಮೂಲಕ ಸಾರ್ವಜನಿಕರಿಗೆ ಪರಿಚಯಿಸುವ ಉದ್ದೇಶದಿಂದ ಈ ವಿಶೇಷ ಥೀಮ್ ರೂಪಿಸಲಾಗಿದೆ ಎಂದು ತೋಟಗಾರಿಕೆ ಇಲಾಖೆಯ ಹೆಚ್ಚುವರಿ ನಿರ್ದೇಶಕ ಜಗದೀಶ್ ತಿಳಿಸಿದರು.

**2.75 ಕೋಟಿ ರೂ. ವೆಚ್ಚ**

220ನೇ ಫಲಪುಷ್ಪ ಪ್ರದರ್ಶನಕ್ಕಾಗಿ ಸುಮಾರು 2.75 ಕೋಟಿ ರೂ. ಬಜೆಟ್ ಮೀಸಲಿಡಲಾಗಿದೆ. ಪ್ರದರ್ಶನಕ್ಕೆ ಅಗತ್ಯವಿರುವ ಹೂಗಳನ್ನು ಕುಂಡಗಳಲ್ಲಿ ಹಾಗೂ ನೆಲದಲ್ಲಿ ಬೆಳೆಸಲಾಗಿದ್ದು, ವಿವಿಧ ರಾಜ್ಯಗಳಿಂದ ಅಪರೂಪದ ಹೂಗಳನ್ನು ತರಿಸುವ ವ್ಯವಸ್ಥೆ ಮಾಡಲಾಗಿದೆ. ಲಕ್ಷಾಂತರ ಮಂದಿ ಪ್ರದರ್ಶನಕ್ಕೆ ಭೇಟಿ ನೀಡುವ ನಿರೀಕ್ಷೆಯಿದೆ.

**ಕೃತಕ ಜಲಪಾತ, ಸೆಲ್ಫಿ ಪಾಯಿಂಟ್**

ಈ ಬಾರಿ ಲಾಲ್‌ಬಾಗ್ ಕೆರೆ ಬಳಿ ಕೃತಕ ಜಲಪಾತ ನಿರ್ಮಿಸಲಾಗಿದ್ದು, ಸಾರ್ವಜನಿಕರಿಗಾಗಿ ವಿಶೇಷ ಸೆಲ್ಫಿ ಪಾಯಿಂಟ್ ಕೂಡ ನಿರ್ಮಿಸಲಾಗಿದೆ. ಹೂವಿನ ಕಲಾಕೃತಿಗಳ ಜೊತೆಗೆ ಇವು ಕೂಡ ಪ್ರವಾಸಿಗರನ್ನು ಆಕರ್ಷಿಸುವ ನಿರೀಕ್ಷೆಯಿದೆ.

**ಪ್ರವೇಶ ಶುಲ್ಕ ಎಷ್ಟು?**

ಸಾಮಾನ್ಯ ದಿನಗಳಲ್ಲಿ ವಯಸ್ಕರಿಗೆ 80 ರೂ. ಹಾಗೂ ಮಕ್ಕಳಿಗೆ 30 ರೂ. ಪ್ರವೇಶ ಶುಲ್ಕ ನಿಗದಿಪಡಿಸಲಾಗಿದೆ. ಶನಿವಾರ ಹಾಗೂ ರಜಾ ದಿನಗಳಲ್ಲಿ ವಯಸ್ಕರಿಗೆ 100 ರೂ. ಶುಲ್ಕ ಇರಲಿದೆ. 10ನೇ ತರಗತಿವರೆಗಿನ ಶಾಲಾ ಮಕ್ಕಳು ಸಮವಸ್ತ್ರದಲ್ಲಿ ಆಗಮಿಸಿದರೆ ಉಚಿತ ಪ್ರವೇಶ ನೀಡಲಾಗುವುದು. ಬೆಳಿಗ್ಗೆ 11 ಗಂಟೆಯಿಂದ ರಾತ್ರಿ 7 ಗಂಟೆಯವರೆಗೆ ಸಾರ್ವಜನಿಕರಿಗೆ ಪ್ರದರ್ಶನ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಇಲಾಖೆ ತಿಳಿಸಿದೆ.

**ಆನ್‌ಲೈನ್ ಟಿಕೆಟ್, ಪಾರ್ಕಿಂಗ್ ವ್ಯವಸ್ಥೆ**

ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಆಗಮಿಸುವ ನಿರೀಕ್ಷೆಯ ಹಿನ್ನೆಲೆಯಲ್ಲಿ ಈ ಬಾರಿ ಆನ್‌ಲೈನ್ ಟಿಕೆಟ್ ವ್ಯವಸ್ಥೆ ಮಾಡಲಾಗಿದೆ. ವಾಹನಗಳ ನಿಲುಗಡೆಗೆ ಪಾರ್ಕಿಂಗ್ ವ್ಯವಸ್ಥೆಯನ್ನೂ ಕಲ್ಪಿಸಲಾಗಿದೆ. ಸಾರ್ವಜನಿಕರ ಸುರಕ್ಷತೆಗಾಗಿ ಲಾಲ್‌ಬಾಗ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ 136 ಸಿಸಿ ಕ್ಯಾಮೆರಾಗಳ ಕಣ್ಗಾವಲು ವ್ಯವಸ್ಥೆ ಮಾಡಲಾಗಿದೆ. ತುರ್ತು ಪರಿಸ್ಥಿತಿ ಎದುರಾದಲ್ಲಿ ನೆರವಾಗಲು ನಾಲ್ಕು ದ್ವಾರಗಳಲ್ಲೂ ಆಂಬ್ಯುಲೆನ್ಸ್ ವ್ಯವಸ್ಥೆ ಮಾಡಲಾಗಿದೆ. ಸಂಚಾರ ದಟ್ಟಣೆ ನಿಯಂತ್ರಣಕ್ಕಾಗಿ ಹೆಚ್ಚಿನ ಪೊಲೀಸ್ ಭದ್ರತೆ ಕಲ್ಪಿಸಲಾಗಿದ್ದು, ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

## ಮಂಕಾಳು ವೈದ್ಯರನ್ನು ಕೈಬಿಟ್ಟಿದ್ದೇಕೆ, ಎಸ್.ಎಸ್. ಮಲ್ಲಿಕಾರ್ಜುನ್ ಸಂಪುಟಕ್ಕೆ ಸೇರಿಸಿದ್ದೇಕೆ..?

ಬೆಂಗಳೂರು, ಆ.4: ಮಂಕಾಳು ವೈದ್ಯ ಅವರನ್ನು ಸಂಪುಟದಿಂದ ಕೈಬಿಟ್ಟಿದ್ದೇಕೆ, ಎಸ್.ಎಸ್. ಮಲ್ಲಿಕಾರ್ಜುನ್ ಅವರನ್ನು ಸಚಿವರನ್ನಾಗಿ ಮಾಡಿದ್ದೇಕೆ ಎಂದು ಎಐಸಿಸಿ ಉತ್ತರಿಸಬೇಕು ಎಂದು ವಿಧಾನಪರಿಷತ್ತಿನ ಪ್ರತಿಪಕ್ಷ ಮುಖ್ಯ ಸಚೇತಕ ಎನ್.ರವಿಕುಮಾರ್ ಒತ್ತಾಯಿಸಿದ್ದಾರೆ.



ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ಎಸ್.ಎಸ್.ಮಲ್ಲಿಕಾರ್ಜುನ್ ಅವರನ್ನು ಹೆಚ್ಚಿನ ಲಾಭಕ್ಕಾಗಿ ಸಚಿವರನ್ನಾಗಿ ಮಾಡಿದ್ದಾರಾ. ಮಂಕಾಳು ವೈದ್ಯ ಅವರನ್ನು ಸಚಿವರನ್ನಾಗಿ ಮಾಡಿದರೆ ಲಾಭ ಇಲ್ಲವೆಂದು ಕೈಬಿಟ್ಟರೇ? ಇದಕ್ಕೆ ಉತ್ತರಿಸಲಿ ಎಂದು ಕೇಳಿದರು.

ಬಹುಶಃ ಆದಾಯ ಜಾಸ್ತಿ ಬಂದಿರಬೇಕು. ಎಷ್ಟು ಬಂದಿದೆ ಎಂದು ಗೊತ್ತಿಲ್ಲ ಎಂದು ಪ್ರಶ್ನೆಗೆ ಉತ್ತರ ಕೊಟ್ಟರು. ಕಾಂಗ್ರೆಸ್ ಲೆಟರ್‌ಹೆಡ್‌ನಲ್ಲಿ ಸಭಾಪತಿ, ಉಪ ಸಭಾಪತಿಯನ್ನು ಪ್ರಕಟಿಸಿದ್ದಾರೆ. ಇದು ಸದನದಲ್ಲಿ ಆಗಬೇಕಾದ ಪ್ರಕ್ರಿಯೆ. ಮಾತೆತ್ತಿದರೆ ಸಂವಿಧಾನವನ್ನು ತೋರುವಿರಲ್ಲವೇ? ಎಲ್ಲಿ ಹೋಗಿದೆ ನಿಮ್ಮ ಸಂವಿಧಾನ ಎಂದು ನೇರವಾಗಿ ರಾಹುಲ್ ಗಾಂಧಿಯವರನ್ನು ಪ್ರಶ್ನಿಸಿದರು. ಕಾಂಗ್ರೆಸ್ಸಿನ ವಿಧಾನ ಇದುವೇ ಎಂದು ಕೇಳಿದರು.

ಬಿ.ಕೆ.ಹರಿಪ್ರಸಾದರನ್ನು ಕೆಪಿಸಿಸಿ ಅಧ್ಯಕ್ಷರನ್ನಾಗಿ ನೇಮಕ ಮಾಡಿದಿರಲ್ಲವೇ? ಆ ಥರ ಇವರನ್ನೂ ನೇಮಿಸಿದ್ದಲ್ಲವೇ? ಸ್ಪೀಕರ್, ಸಭಾಪತಿಗಳನ್ನು ಕೆಪಿಸಿಸಿ ಅಧ್ಯಕ್ಷರ ನೇಮಕ ಮಾಡಿದಂತೆ ನೇಮಿಸಿದ್ದೀರಾ ಎಂದು ಕೇಳಿದರು. ಇದಾ ನಿಮ್ಮ ಸಂವಿಧಾನ ಎಂದು ಪ್ರಶ್ನಿಸಿದರು.

**ಕೊನೆವರೆಗೆ ಚೌಕಾಶಿ ನಡೆಯಿತೇ?**

ಸೋಮವಾರ 4 ಗಂಟೆ ಬದಲಾಗಿ 5 ಗಂಟೆಗೆ ಸಚಿವರಿಗೆ ಪ್ರಮಾಣವಚನ ಬೋಧಿಸಲಾಗಿದೆ. ಕೊನೆಹೊತ್ತಿಗೆ ಬದಲಾವಣೆ ಸಂಬಂಧ ಚೌಕಾಶಿ ನಡೆಯುತ್ತಿತ್ತೇ ಎಂದು ಕೇಳಿದರು. ಸಭಾಪತಿ, ಸ್ಪೀಕರ್ ಸ್ಥಾನಕ್ಕೆ ಅವಮಾನ ಮಾಡಿದ್ದಾರೆ. ಇದು ಸಂವಿಧಾನಕ್ಕೆ, ಪ್ರಜಾಪ್ರಭುತ್ವಕ್ಕೆ, ಇಡೀ ಶಾಸಕರು, ಎಂಎಲ್‌ಸಿಗಳಿಗೆ ಮಾಡಿದ ಅಪಮಾನ ಎಂದು ಟೀಕಿಸಿದರು. ಸದನದ ಒಳಗೆ ನಡೆಯಬೇಕಾದ ಪ್ರಕ್ರಿಯೆ ಇದು ಎಂದು ವಿಶ್ಲೇಷಿಸಿದರು.

ರಾಜೀನಾಮೆ ಕೊಟ್ಟರೆ ಅದನ್ನು ಅಂಗೀಕರಿಸುವುದಾಗಿ ಮುಖ್ಯಮಂತ್ರಿಗಳ ಹೇಳಿಕೆ ಕುರಿತು ಪತ್ರಕರ್ತರು ಗಮನ ಸೆಳೆದರು. ರಾಜೀನಾಮೆ ಕೊಡುವವರ ಸಂಖ್ಯೆ ಹೆಚ್ಚಾಗದೇ ಇರಲಿ ಎಂದು ಸಿಎಂ ಧಮ್ಕಿ ಹಾಕಿರಬಹುದು ಎಂದು ರವಿಕುಮಾರ್ ಅವರು ಉತ್ತರಿಸಿದರು. ರಾಜೀನಾಮೆ ಕೊಡುವ ಸಾಹಸ ಮಾಡದಿರಿ ಎಂದು ಪರೋಕ್ಷವಾಗಿ ಹೇಳಿರಬೇಕು ಎಂದರು.



ಆಗಸ್ಟ್ 15ಕ್ಕೆ ನಡೆಯಲಿರುವ ಸ್ವಾತಂತ್ರ್ಯ ದಿನಾಚರಣೆಯ ಹಿನ್ನೆಲೆಯಲ್ಲಿ ಮಂಗಳವಾರ ಬೆಂಗಳೂರಿನ ಲಾಲ್‌ಬಾಗ್ ಸಸ್ಯೋದ್ಯಾನದಲ್ಲಿ ಫಲಪುಷ್ಪ ಪ್ರದರ್ಶನದ ಸಿದ್ಧತೆಗಳು ಭರದಿಂದ ಸಾಗಿದ್ದವು.

# ನೀರಾವರಿಗಾಗಿ ರೈತರ ಸಂಘಟಿತ ಹೋರಾಟ ಅಗತ್ಯ: ಬಿರಾದಾರ

**ಕಲಬುರಗಿ, ಆ. 4:** ಸಮಗ್ರ ಹಾಗೂ ಶಾಶ್ವತ ನೀರಾವರಿ ವ್ಯವಸ್ಥೆ ಕಲ್ಪಿಸಲು ರೈತರು ಸಂಘಟಿತರಾಗಿ ನಿರಂತರ ಹೋರಾಟ ನಡೆಸುವ ಮೂಲಕ ಇಲ್ಲಿ ಹರಿಯುವ ನದಿಯ ಸಂಪೂರ್ಣ ಸದುಪಯೋಗ ಪಡೆಯಬೇಕಿಗಿದೆ ಎಂದು ರೈತ ಮುಖಂಡ ಶ್ರೀಮಂತ ಬಿರಾದಾರ್ ರೈತರಿಗೆ ಕರೆ ನೀಡಿದರು.

ಜಿಲ್ಲೆಯ ಅಫಜಲಪುರದ ಅಳ್ಳಗಿ ಕ್ರಾಸ್‌ನಲ್ಲಿರುವ ಸ್ಫೂರ್ತಿ ಕಾಲೇಜಿನ ಆವರಣದಲ್ಲಿ ನಡೆದ ತಾಲ್ಲೂಕು ಸಮಗ್ರ ಶಾಶ್ವತ ನೀರಾವರಿ ಹೋರಾಟ ಸಮಿತಿ ವತಿಯಿಂದ ಆಯೋಜಿಸಿದ್ದ ರೈತರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ತಾಲ್ಲೂಕು ಪ್ರತಿ ವರ್ಷ ಬರಗಾಲಕ್ಕೆ ತುತ್ತಾಗುತ್ತಿದ್ದು, ಭೀಮಾನದಿ ತುಂಬಿ ಹರಿಯುತ್ತಿದ್ದರೂ ಉಪಯೋಗವಿಲ್ಲದೇ ವ್ಯರ್ಥವಾಗಿ ನೀರು ಹರಿದು ಹೋಗುತ್ತದೆ. ಸುಮಾರು 30 ವರ್ಷಗಳ ಹಿಂದೆ ಆರಂಭವಾದ ಭೀಮಾ ಏತ ನೀರಾವರಿ ಯೋಜನೆಯ




ನೀರು ಇನ್ನೂ ರೈತರ ಜಮೀನುಗಳಿಗೆ ತಲುಪಿಲ್ಲ. ಯೋಜನೆಗಾಗಿ ಭೂಮಿ ಕಳೆದುಕೊಂಡ ರೈತರಿಗೆ ಸಮರ್ಪಕ ಪರಿಹಾರವೂ ದೊರೆತಿಲ್ಲ ಎಂದರು.

ಮಹಾರಾಷ್ಟ್ರದ ಉಜ್ಜನಿ ಜಲಾಶಯದಿಂದ ಬಚಾವತ್ ತೀರ್ಪಿನಂತೆ ಭೀಮಾ ನದಿಗೆ 15 ಟಿಎಂಸಿ ನೀರು ಹರಿಸುವಂತೆ ರಾಜ್ಯ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು. ರೈತಮುಖಂಡ ಗುರು ಚಾಂದಕವಟೆ ಅವರು ಮಾತನಾಡಿ, ತಾಲ್ಲೂಕಿನ ಕೆರೆಗಳ ಹೂಳೆತ್ತಿ ನೀರು ಸಂಗ್ರಹಿಸುವ ವ್ಯವಸ್ಥೆ ಮಾಡಬೇಕು. ಶಾಶ್ವತ ನೀರಾವರಿಯೇ ರೈತರ ಬದುಕಿಗೆ ಶಾಶ್ವತ ಪರಿಹಾರವಾಗಿದ್ದು, ಈ ಕುರಿತು ಜನಾಂದೋಲನ ರೂಪಿಸುವ ಅಗತ್ಯವಿದೆ ಎಂದರು.

ನಾಮದೇವ ಕಡಕೋಳ್ ಹಾಗೂ ಭೀಮರಾಯ ಗೌರ್ ಮಾತನಾಡಿ, ರೈತರ ಸಮಸ್ಯೆಗಳ ಬಗ್ಗೆ ಸರ್ಕಾರ ನಿರ್ಲಕ್ಷ್ಯ ವಹಿಸುತ್ತಿದೆ. ತಾಲೂಕಿಗೆ ಸಮಗ್ರ ನೀರಾವರಿ ಯೋಜನೆ ಜಾರಿಗೊಳಿಸಲು ಎಲ್ಲ ರೈತರು ಒಗ್ಗಟ್ಟಿನಿಂದ ಹೋರಾಟ ನಡೆಸಬೇಕು ಎಂದು ಹೇಳಿದರು. ಶಾಂತು ಅಂಜುಟಗಿ ಮಾತನಾಡಿ, ಭೀಮಾ ಏತ ನೀರಾವರಿ ಯೋಜನೆ, ಬಚಾವತ್ ತೀರ್ಪಿನ ನೀರಿನ ಹಂಚಿಕೆ ಹಾಗೂ ರೈತರ ಬೇಡಿಕೆಗಳನ್ನು ಈಡೇರಿಸುವವರೆಗೆ ಹೋರಾಟ ನಿರಂತರವಾಗಿ ಮುಂದುವರಿಯಲಿದೆ ಎಂದು ತಿಳಿಸಿದರು.

ಸಭೆಯಲ್ಲಿ ಮುಂದಿನ ಹೋರಾಟದ ರೂಪುರೇಷೆ ಕುರಿತು ಚರ್ಚಿಸಿ, ತಾಲ್ಲೂಕಿನಲ್ಲಿ ಸಮಗ್ರ ಹಾಗೂ ಶಾಶ್ವತ ನೀರಾವರಿಗಾಗಿ ಹೋರಾಟ ಸಮಿತಿಯನ್ನು ಮತ್ತಷ್ಟು ಬಲಪಡಿಸುವ ಕುರಿತು ನಿರ್ಧರಿಸಲಾಯಿತು.

# 'ಭಾರತ್ ಜೋಡೋ' ಯುವಸಂಘ ಸ್ಥಾಪನೆಗೆ ಡಿಸಿ ಶಿಲ್ಪಾ ಶರ್ಮಾ ಕರೆ

ಬೀದರ್, ಆ. 4: ಪ್ರತಿ ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ, ನಗರಸಭೆ ಹಾಗೂ ಮಹಾನಗರ ಪಾಲಿಕೆಗಳ ವಾರ್ಡ್‌ಗಳಲ್ಲಿ ಸಶಕ್ತ ಯುವ ಜನತೆಯನ್ನು ಒಳಗೊಂಡ ಸಮುದಾಯ ಒಂದುಗೂಡಿಸಲು 'ಭಾರತ್‌ಜೋಡೋ' ಯುವ ಸಂಘಗಳನ್ನು ಸ್ಥಾಪಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಸೇವಾ ಹಾಗೂ ಕ್ರೀಡಾ ಇಲಾಖೆಯ ವತಿಯಿಂದ ಏರ್ಪಡಿಸಿದ್ದ ವಿಕಾಸಶೀಲ ಮತ್ತು ಸೌಹಾರ್ದಶೀಲ ಕರ್ನಾಟಕ ನಿರ್ಮಾಣಕ್ಕಾಗಿ ಸಮುದಾಯ 'ಭಾರತ್ ಜೋಡೋ' ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಕಾಸಶೀಲ ಮತ್ತು ಸೌಹಾರ್ದ ಕರ್ನಾಟಕ ನಿರ್ಮಾಣಕ್ಕಾಗಿ ಸಮುದಾಯ ಅಭಿವೃದ್ಧಿ, ಸಾಮಾಜಿಕ ಸಾಮರಸ್ಯ, ಕ್ರೀಡೆ, ಫಿಟ್‌ನೆಸ್ ಹಾಗೂ



ಕೌಶಲ ಅಭಿವೃದ್ಧಿಯ ಮೂಲಕ ಯುವಜನರನ್ನು ಸಬಲೀಕರಣಗೊಳಿಸಲು ತಳಮಟ್ಟದ ಆಡಳಿತದಲ್ಲಿ ಸಕ್ರಿಯವಾಗಿ ಪಾಲುದಾರರಾಗಿ ಮಾಡಬೇಕಿದೆ ಎಂದರು.

ಪ್ರತಿಯೊಂದು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಒಂದು ಸಂಘ, ಪ್ರತಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಸರಾಸರಿ 4,000 ಜನಸಂಖ್ಯೆಗೆ ಒಂದು ಸಂಘ, ಪ್ರತಿ ಪುರಸಭೆಯಲ್ಲಿ ಸರಾಸರಿ 6,000 ಜನಸಂಖ್ಯೆಗೆ ಒಂದು ಸಂಘ, ಪ್ರತಿ ನಗರಸಭೆಯಲ್ಲಿ ಸರಾಸರಿ 8,000 ಜನಸಂಖ್ಯೆಗೆ ಒಂದು ಸಂಘ ಹಾಗೂ ಮಹಾನಗರ ಪಾಲಿಕೆ ಮತ್ತು ಜಿಬಿಎ ವ್ಯಾಪ್ತಿಯಲ್ಲಿ ಸರಾಸರಿ 10,000 ಜನಸಂಖ್ಯೆಗೆ ಒಂದು ಸಂಘ ಸ್ಥಾಪಿಸಬೇಕು ಎಂದು ಸೂಚಿಸಿದರು.

'ಭಾರತ್ ಜೋಡೋ' ಯುವ ಸಂಘ ಘಟಕದ ಸ್ಥಾಪನೆ ಮತ್ತು ನೋಂದಣಿ, ಬಿಜಿವೈಎಸ್ ಪೋರ್ಟಲ್ ಮೊಬೈಲ್ ಆಪ್ ಮೂಲಕ ಮಾಡಬೇಕು. ಗ್ರಾಮ ಪಂಚಾಯಿತಿ ಹಾಗೂ ನಗರ ಪ್ರದೇಶಗಳಲ್ಲಿ ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್, ನಾಗರಿಕ ಸೇವಾ ಕೇಂದ್ರಗಳ ಸಹಾಯದಿಂದ ಅರ್ಜಿ ಸಲ್ಲಿಸಬೇಕು ಎಂದರು.

ಆಧಾರ್ ಆಧಾರಿತ ನೋಂದಣಿ ಮಾಡಿಸಬೇಕು. ಪ್ರತಿಯೊಬ್ಬ ಸದಸ್ಯರ ನೋಂದಣಿಗೆ ಆಧಾರ್ ಕಡ್ಡಾಯ. 16 ರಿಂದ 35 ವರ್ಷ ಒಳಗಿರಬೇಕು. ಕನಿಷ್ಠ ಸದಸ್ಯತ್ವ ಘಟಕ ರಚನೆಗೆ ಕನಿಷ್ಠ 100 ಯುವ ಸದಸ್ಯರಿರಬೇಕು. ಐಡಿ ಕಾರ್ಡ್ ಸೇರಿದಂತೆ ನೋಂದಣಿ ಪ್ರತಿಯೊಂದು ಸಂಘವು ಕರ್ನಾಟಕ ಕಾಯ್ದೆಯಡಿ ನೋಂದಾಯಿಸಿರಬೇಕು. ಅರ್ಜಿದಾರರು ಅದೇ ಗ್ರಾಮ ಪಂಚಾಯಿತಿ, ವಾರ್ಡ್‌ನವರು ಆಗಿರಬೇಕು. ಪ್ರತಿಯೊಬ್ಬ ಸದಸ್ಯರು ಒಂದು ಸಂಘಕ್ಕೆ ಮಾತ್ರ ಸದಸ್ಯರಾಗಲು ಅರ್ಹರಿರುತ್ತಾರೆ ಎಂದು ಹೇಳಿದರು.

## ಸ್ವರೂಪ ಹೀಗಿರಲಿ...

**ಯುವ ಸಂಘವು ಸ್ಥಳೀಯ ಶಾಲೆ, ಕಾಲೇಜು, ಸರ್ಕಾರಿ ಸಮುದಾಯ ಭವನ, ಯಾವುದಾದರೂ ಸರ್ಕಾರಿ ಕಟ್ಟಡದಲ್ಲಿ ಕರ್ತವ್ಯ ನಿರ್ವಹಿಸುವಂತಿರಬೇಕು. ಘಟಕದ ಆಡಳಿತ ಮತ್ತು ಕಾರ್ಯಕಾರಿ ಸಮಿತಿ ಪ್ರತಿ ಘಟಕವು ಪ್ರಜಾಸತ್ತಾತ್ಮಕವಾಗಿ ಆಯ್ಕೆಯಾದ 15 ಜನ ಸದಸ್ಯರ ಆಂತರಿಕ ಕಾರ್ಯಕಾರಿ ಸಮಿತಿಯನ್ನು ಹೊಂದಿರಬೇಕು. ಸಮಿತಿಯ ರಚನೆ ಅಧ್ಯಕ್ಷರು–1, ಉಪಾಧ್ಯಕ್ಷರು–1, ಖಜಾಂಚಿ–1, ಕಾರ್ಯಕಾರಿ ಸದಸ್ಯರು–12, ಅಧ್ಯಕ್ಷರು ಅಥವಾ ಉಪಾಧ್ಯಕ್ಷರುಗಳಲ್ಲಿ ಒಬ್ಬರು ಮಹಿಳೆಯರು ಕಡ್ಡಾಯವಾಗಿ ಇರಬೇಕು. ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿಯು ಸಂಘದ ಅರ್ಹ ಸದಸ್ಯರ ಪೈಕಿ ಕಾರ್ಯಕಾರಿ ಸಮಿತಿಯ ಅಧ್ಯಕ್ಷರನ್ನು ಆಯ್ಕೆ ಮಾಡುವುದು. ಎಸ್‌ಸಿ, ಎಸ್‌ಟಿ–3 ಸದಸ್ಯರು (1 ಮಹಿಳೆ), ಒಬಿಸಿ 4 ಸದಸ್ಯರು (1 ಮಹಿಳೆ), ಸಾಮಾನ್ಯ 8 ಸದಸ್ಯರು (3 ಮಹಿಳೆ) ಮೀಸಲಾತಿ ಕಾರ್ಯಕಾರಿ ಸಮಿತಿಯಲ್ಲಿ ಮೀಸಲಾತಿ ಒದಗಿಸುವುದು ಕಡ್ಡಾಯ. –ಶಿಲ್ಪಾ ಶರ್ಮಾ, ಜಿಲ್ಲಾಧಿಕಾರಿಗಳು ಬೀದರ.**

# ಫಸಲ್ ಬಿಮಾ ನೋಂದಣಿ: ರೈತರಿಗೆ ಭಗವಂತ ಖೂಬಾ ಅಭಿನಂದನೆ



ಪ್ರಸಕ್ತ ಸಾಲಿನಲ್ಲಿ ಬೀದರ ಜಿಲ್ಲೆಯ ಪ್ರಧಾನ ಮಂತ್ರಿಗಳ ಮೇಲೆ ಸಂಪೂರ್ಣ ವಿಶ್ವಾಸ ವಿಟ್ಟು, ಫಸಲ್ ಬಿಮಾ ಯೋಜನೆಯ ಮೇಲೆ ವಿಶ್ವಾಸವನ್ನು ಹೊಂದಿ, ಪ್ರಸಕ್ತ ವರ್ಷದ ಮುಂಗಾರು ಹಂಗಾಮಿನಲ್ಲಿ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ 3.94 ಲಕ್ಷಕ್ಕೂ ಅಧಿಕ ರೈತರು ತಮ್ಮ ಬೆಳೆಗಳು ನೊಂದಣಿ ಮಾಡಿಸಿಕೊಂಡಿದ್ದಾರೆ, ಕೇಂದ್ರ ಸರ್ಕಾರದ ಯೋಜನೆಗಳು ಸಮರ್ಪಕವಾಗಿ ಬಳಸಿಕೊಳ್ಳಲು ನಮ್ಮ ರೈತರು ರಾಷ್ಟ್ರಕ್ಕೆ ಮಾದರಿಯಾಗಿದ್ದಾರೆ ಸಮಸ್ತ ಜಿಲ್ಲೆಯ ರೈತರಿಗೆ ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಅಭಿನಂದನೆಗಳು ತಿಳಿಸಿದ್ದಾರೆ.

ಯೋಜನೆ ಪ್ರಾರಂಭವಾದ ವರ್ಷದಿಂದ ಇಲ್ಲಿಯವರೆಗೆ ನಮ್ಮ ರೈತರು ಈ ಯೋಜನೆಯಡಿ ಲಾಭ ಪಡೆದುಕೊಳ್ಳುತ್ತಾ ಬಂದಿದ್ದಾರೆ ಇದರ ಹಿಂದೆ ನಮ್ಮ ಕೇಂದ್ರ ಸರ್ಕಾರದ ಪ್ರಾಮಾಣಿಕ ನಡೆ ಮತ್ತು ಕಳೆದ ನನ್ನ ಅಧಿಕಾರವಧಿಯಲ್ಲಿ ನಾನು ರೈತರಲ್ಲಿ ಮೂಡಿಸಿರುವ ಜಾಗೃತಿಯ ಫಲವಾಗಿ ಈ ಯೋಜನೆ ಇಂದಿಗೂ ಯಶಸ್ವಿಯಾಗಿ ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿದೆ, ಈ ವರ್ಷವು ಅತಿ ಹೆಚ್ಚು ನೊಂದಣಿಯಾಗಿದೆ ಈ ದಿಸೆಯಲ್ಲಿ ಶ್ರಮಿಸಿದ ಕೃಷಿ ಇಲಾಖೆಯ ಅಧಿಕಾರಿಗಳು, ಬ್ಯಾಂಕ್ ಸಿಬ್ಬಂದಿ, ಸಿ.ಎಸ್.ಸಿಯವರಿಗೆ ಎಲ್ಲರಿಗೂ ಭಗವಂತ ಖೂಬಾ ಧನ್ಯವಾದು ತಿಳಿಸಿದ್ದಾರೆ.

ಭಾಲ್ಕಿ ತಾಲೂಕಿನ ಶಾಸಕರಾದ ಈಶ್ವರ ಖಂಡ್ರೆಯವರು ಈ ಯೋಜನೆ ಬಗ್ಗೆ ವಿಧಾನಸಭೆಯಲ್ಲಿ, ವಿವಿಧ ಸಭೆಗಳಲ್ಲಿ ಅಪಪ್ರಚಾರ ಮಾಡುತ್ತಿದ್ದರು, ಸುಳ್ಳು ಹೆಳುತ್ತಿದ್ದರು, ಇವರ ಅಪಪ್ರಚಾರದ ವಿರುದ್ಧ ನಾನು ಪ್ರತಿ ಬಾರಿಯೂ ವಿರೋಧಿಸಿ, ಫಸಲ್ ಬಿಮಾ ಬಗ್ಗೆ ಸತ್ಯಾಸತ್ಯತೆಯನ್ನು ರೈತರಿಗೆ ತಿಳಿಸಿ, ಯೋಜನೆ ಬಗ್ಗೆ ಗೊಂದಲವಾಗದ ಹಾಗೆ ನೋಡಿಕೊಂಡಿದ್ದೆ, ಈ ಯೋಜನೆ ಆಪತ್ಭಾಂಧವವಾಗಿರುವುದನ್ನು ರೈತರಿಗೆ ಮನವರಿಕೆ ಮಾಡಿಕೊಟ್ಟಿದ್ದೆ, ಆದ್ದರಿಂದ ಇಂದು ರೈತರು ಸ್ವಯಂ ಪ್ರೇರಿತರಾಗಿ ತಮ್ಮ ಬೆಳೆಗಳನ್ನು ಪ್ರತಿ ವರ್ಷ ನೊಂದಣಿ ಮಾಡಿಕೊಳ್ಳುತ್ತಿದ್ದಾರೆ ಮತ್ತು ಈ ವರ್ಷ ಭಾಲ್ಕಿ ತಾಲೂಕಿನ ರೈತರು ಅತಿ ಹೆಚ್ಚು ನೊಂದಣಿ ಮಾಡಿಕೊಂಡು, ಶಾಸಕರ ಅಪಪ್ರಚಾರಕ್ಕೆ ರೈತರೆ ತಿರುಗೇಟು ನೀಡಿದ್ದಾರೆ, ಮೋದಿ ಸರ್ಕಾರದ ಯೋಜನೆ ಜೊತೆ ನಿಂತು ಶಾಸಕರಿಗೆ ಮುಖಭಂಗ ಮಾಡಿದ್ದಾರೆ ಎಂದು ಖೂಬಾ ತಿಳಿಸಿದ್ದಾರೆ.


ನೊಂದಣಿಯಾಗಿರುವ ರೈತರಿಗೆ ಮುಂದಿನ ದಿನಗಳಲ್ಲಿ ಯಾವುದೇ ರಿತಿಯ ಸಹಾಯ, ಸಹಕಾರದ ಅವಶ್ಯಕತೆ ಬಿದ್ದಲ್ಲಿ ಕೃಷಿ ಇಲಾಖೆ, ಕಂದಾಯ ಇಲಾಖೆಯವರು, ಬ್ಯಾಂಕಿನವರು ಮತ್ತು ಸಂಬಂದಪಟ್ಟ ಇನ್ಸೂರೆನ್ಸ್ ಕಂಪನಿಯವರು ರೈತರೊಂದಿಗೆ ಸಹಕರಿಸುವುದು ಎಲ್ಲರ ಜವಾಬ್ದಾರಿಯಾಗಿದೆ, ಈ ನಿಟ್ಟಿನಲ್ಲಿ ತಾವೆಲ್ಲರೂ ತಮ್ಮ ಕರ್ತವ್ಯನಿಷ್ಠೆ ಪಾಲಿಸಬೇಕು ಎಂದು ಖೂಬಾ ಮನವಿ ಮಾಡಿದ್ದಾರೆ.

# ನೂತನ ಸಚಿವ ಸಂತೋಷ್ ಲಾಡ್‌ಗೆ ಬಳ್ಳಾರಿಯ ಮುಖಂಡರಿಂದ ಸನ್ಮಾನ



**ಬಳ್ಳಾರಿ,ಆ.04.** ಬೆಂಗಳೂರಿನ ಸದಾಶಿವನಗರದಲ್ಲಿರುವ ನೂತನ ಸಚಿವರಾದ ಸಂತೋಷ್ ಲಾಡ್ ಅವರ ನಿವಾಸದಲ್ಲಿ ಸನ್ಮಾನಿಸಿ ಶುಭ ಕೋರಲಾಯಿತು. ಈ ಸಂದರ್ಭದಲ್ಲಿ ಬಳ್ಳಾರಿ ಲೋಕಸಭಾ ಸದಸ್ಯರು ಈ ತುಕಾರಾಂ, ಬುಡಾ ಅಧ್ಯಕ್ಷರು ಜೆ.ಎಸ್. ಆಂಜನೇಯುಲು, ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿ ಕಾರ್ಯಾಧ್ಯಕ್ಷರು ಬೋಯಪಾಟಿ ವಿಷ್ಣುವರ್ಧನ್, ಉಪಾಧ್ಯಕ್ಷರು ಕೆ. ಶ್ರೀನಿವಾಸುಲು, ಬಳ್ಳಾರಿ ಪಾಲಿಕೆಯ ಸ್ಥಾಯಿ ಸಮಿತಿ ಅಧ್ಯಕ್ಷರು ಪೇರಂ ವಿವೇಕ್, ಕುಬೇರ, ಮುಖಂಡರು ನಾಗರಾಜು, ಅಖಿಲ್ ಹಾಗೂ ಕಾರ್ಯಕರ್ತರು ಇದ್ದರು.

# ನೂತನ ಸಚಿವರಾದ ಕೆ.ಎಸ್.ಬಸವಂತಪ್ಪ, ಮುನಿಯಪ್ಪರಿಗೆ ಶುಭ ಕೋರಿದ ವೆಂಕಟೇಶ್ ಹೆಗಡೆ



**ಬಳ್ಳಾರಿ, ಅ.04.** ಬೆಂಗಳೂರಿನ ಕುಮಾರ ಕೃಪ ಅತಿಥಿ ಗೃಹದಲ್ಲಿ ನೂತನ ಸಚಿವರಾದ ಕೆ.ಎಸ್.ಬಸವಂತಪ್ಪ ರವರನ್ನು ಅಭಿನಂದಿಸ ಲಾಯಿತು ತದನಂತರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವರಾದ ಮಾನ್ಯ ಶ್ರೀ ಕೆ.ಹೆಚ್.ಮುನಿಯಪ್ಪ ರವರ ಮನೆಯಲ್ಲಿ ಅವರಿಗೆ ಶುಭವನ್ನು ಕೋರಲಾಯಿತು. ಈ ಸಂದರ್ಭದಲ್ಲಿ ಮಾಜಿ ಸಚಿವರಾದ ಹೆಚ್ ಆಂಜನೇಯ ಅಣ್ಣನವರು ಮತ್ತು ಮಾಜಿ ಸಂಸದರು ಬಿ.ಎನ್.ಚಂದ್ರಪ್ಪರವರಿಗೆ ಶುಭ ಕೋರಲಾಯಿತು.

# ಹೀರದ ಸೂಗಮ್ಮ ಶಾಲೆಯ ಶತಮಾನೋತ್ಸವ ಸಂಭ್ರಮ



**ಬಳ್ಳಾರಿ ಆ. 04.** ನಗರದ ಪ್ರತಿಷ್ಠಿತ ವೀವಿ ಸಂಘದ ಹೀರದ ಸೂಗಮ್ಮ ಹಿರಿಯ ಪ್ರಾಥಮಿಕ ಶಾಲೆಯ ಶತಮಾನೋತ್ಸವ ಕಾರ್ಯಕ್ರಮವನ್ನು ಆ 08 ಮತ್ತು 09 ರಂದು ನಗರದ ಹೊಸ ಬಸ್ ನಿಲ್ದಾಣದ ಎದುರುಗಡೆ ಇರುವ ಹಿರದ ಸೂಗಮ್ಮ ಶಾಲೆಯ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಕಾರ್ಯದರ್ಶಿ ಡಾ.ಅರವಿಂದ್ ಪಾಟಿಲ್ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಹಾನಗಲ್ ಕುಮಾರ ಶಿವಯೋಗಿಗಳು ಮತ್ತು ಉಜ್ಜಯಿನಿ ಪೀಠದ ಸಿದ್ಧಲಿಂಗ ಶಿವಾಚಾರ್ಯ ಜಗದ್ಗುರುಗಳ ಮಾರ್ಗದರ್ಶನದಲ್ಲಿ ಜನರಲ್ಲಿ ಧರ್ಮಜಾಗೃತಿಯನ್ನು ಬೆಳೆಸುವುದರ ಜೊತೆಗೆ ಶೈಕ್ಷಣಿಕ ಹಾಗೂ ಸಾಮಾಜಿಕ ಜಾಗೃತಿ ಮೂಡಿಸಲು 1916ರಲ್ಲಿ ವೀರಶೈವ ವಿದ್ಯಾವರ್ಧಕ ಸಂಘ ಸ್ಥಾಪನೆಯಾಯಿತು. ಪ್ರಾರಂಭದಲ್ಲಿ ವಿಶ್ರಾಂತಿ ನಿಲಯ, ನಂತರ ವಿದ್ಯಾರ್ಥಿ ಪ್ರಸಾದ ನಿಲಯ ಸ್ಥಾಪಿಸಿಲಾಯಿತು.ನಂತರ ಸಂಸ್ಕೃತ ಪಾಠಶಾಲೆ ಪ್ರಾರಂಭಿಸಿಸಲಾಯಿತು.

1906ರಲ್ಲಿ ಧರ್ಮಾರ್ಥಕಾರ್ಯಕ್ಕಾಗಿ ಹೀರದ ಸೂಗಮ್ಮನವರು ನಗರದ ಗಣೇಶಗುಡಿ ಬೀದಿಯಲ್ಲಿ ಚೌಕಿಯೊಂದನ್ನು ಪ್ರಾರಂಭಿಸಿದ್ದರು. ಸದರಿ ಚೌಕಿಯಲ್ಲಿ ದಿನಾಂಕ:04–04–1924ರಲ್ಲಿ ವೀರಶೈವ ವಿದ್ಯಾವರ್ಧಕ ಸಂಘವು ಸಂಸ್ಕೃತ ಪಾಠಶಾಲೆಯನ್ನು ಸ್ಥಳಾಂತರಿಸುವುದರ ಜೊತೆಗೆ "ವೀರಶೈವ ಸ್ಕೂಲ್" ತೆರೆಯಲಾಯಿತು. ನಂತರ ಸದರಿ ಶಾಲೆಯನ್ನು ಹೀರದ ಸೂಗಮ್ಮ ಎಲಿಮೆಂಟರಿ ಬೇಸಿಕ್ ಶಾಲೆ ಎಂದು ಮರುನಾಮಕರಣ ಮಾಡಲಾಯಿತು. ಸ್ವಾತಂತ್ರ್ಯ ನಂತರ 1956ರಲ್ಲಿ ಹೀರದ ಸೂಗಮ್ಮ ಬೇಸಿಕ್ ಹಿರಿಯ ಪ್ರಾಥಮಿಕ ಶಾಲೆಯಾಯಿತು. ಈಗ ಅಖಂಡ ಬಳ್ಳಾರಿ ಜಿಲ್ಲೆಯಲ್ಲಿ ವೀ.ವಿ.ಸಂಘವು ಅನೇಕ ಶಾಲಾ ಕಾಲೇಜುಗಳನ್ನು ಹೊಂದಿದೆ.

ಆಗ ನಗರದ ಸುತ್ತ ಮುತ್ತಲಿನ ಹಳ್ಳಿಗಳಲ್ಲಿ ಹಿರಿಯ ಪ್ರಾಥಮಿಕ ಶಾಲೆಗಳು ಇಲ್ಲದಕಾರಣ ನಗರದ ಸುತ್ತಮುತ್ತಲು ಹತ್ತು–ಹದಿನೈದು ಕಿಲೋಮೀಟರ್ ದೂರದ ಹಳ್ಳಿಗಳಿಂದ ಈ ಶಾಲೆಗೆ ಮಕ್ಕಳು ಬರುತ್ತಿದ್ದರು. ಈವರೆಗೆ ಸಾವಿರಾರು ಮಕ್ಕಳಿಗೆ ವಿದ್ಯಾದಾನ ಮಾಡಿದ ಈ ಶಾಲೆ ಅನುದಾನಿತ ಶಾಲೆಯಾಗಿದೆ.

ಶಾಲೆಯ ಮಕ್ಕಳು ಸಾಂಸ್ಕೃತಿಕ ಮತ್ತು ಕ್ರೀಡಾ ವಿಭಾಗದಲ್ಲಿ ಅನೇಕ ಹಂತಗಳಲ್ಲಿ ಬಹುಮಾನ ಮತ್ತು ಪ್ರಶಸ್ತಿ ಪಡೆದಿದ್ದಾರೆ. ಅದರಲ್ಲೂ ಗುಂಡು ಎಸೆತದಲ್ಲಿ ಮತ್ತು ಓಟದಲ್ಲಿ ಮಕ್ಕಳು ಎರೆಡು ಬಾರಿ ರಾಜ್ಯ ಮಟ್ಟದಲ್ಲಿ ಸ್ಪರ್ಧೆ ಮಾಡಿದ್ದಾರೆ. ಈ ಶಾಲೆಯಲ್ಲಿ ಸೇವೆ ಸಲ್ಲಿಸಿದ ಶ್ರೀ ಚ.ಮ.ಗಂಗಾಧರಯ್ಯ ಅವರಿಗೆ ಶಿಕ್ಷಕರಿಗೆ ನೀಡುವ ಭಾರತ ಸರ್ಕಾರದ ರಾಷ್ಟ್ರಪ್ರಶಸ್ತಿ ಮತ್ತು ಶ್ರೀ ಹೆಚ್.ಎಂ.ವೀರಭದ್ರ ಶರ್ಮ ಇವರಿಗೆ ಕರ್ನಾಟಕ ಸರ್ಕಾರ ನೀಡುವರಾಜ್ಯ ಪ್ರಶಸ್ತಿ ದೊರೆತಿದೆ.

# ಸನ್ಮಾನಕ್ಕಿಂತ ಸಂಸ್ಕಾರ-ಸಂಸ್ಕೃತಿ ಮುಖ್ಯ: ಶ್ರೀ ರಂಭಾಪುರಿ ಜಗದ್ಗುರುಗಳು

**ಹರಿಹರ–ಆಗಸ್ಟ್–4.**ಸತ್ಯದ ದಾರಿಯಲ್ಲಿ ಸಾವಿರ ಸಂಕಷ್ಟ. ಸ್ತುತಿ ನಿಂದೆಗಳು ಸದಾ ಇರುತ್ತವೆ. ಅರಿವಿಗಿಂತ ಆಚಾರ ದೊಡ್ಡದು. ಮಾನ ಸನ್ಮಾನಕ್ಕಿಂತ ಮನುಷ್ಯನಿಗೆ ಸಂಸ್ಕಾರ ಮತ್ತು ಸಂಸ್ಕೃತಿ ಬಹಳ ಮುಖ್ಯವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಸಂತಸದ ಮತ್ತು ಶಾಂತಿಯ ಬದುಕಿಗೆ ಆಧ್ಯಾತ್ಮದ ಅರಿವು ಆಚರಣೆಗಳು ಬೇಕು. ಮನುಷ್ಯ ಸಂಬಂಧ ಗಟ್ಟಿಗೊಳ್ಳಲು ಹೃದಯ ಶ್ರೀಮಂತಿಕೆ ಬೇಕು. ಭವ್ಯ ಕಟ್ಟಡ ಭವನಗಳನ್ನು ಎತ್ತರಕ್ಕೆ ಕಟ್ಟಿದರಷ್ಟೇ ಸಾಲದು. ಅದರ ಜೊತೆಗೆ ಮಾನವೀಯತೆಯ ಆದರ್ಶಗಳನ್ನು ಎತ್ತರಕ್ಕೆ ಬೆಳೆಸಬೇಕಾದುದು ಅವಶ್ಯಕ. ನಮಗಾಗಿ ಹೇಗೆ ಸುಖ ಸಂತೋಷ ಬಯಸುತ್ತೇವೆಯೋ ಅದೇ ರೀತಿ ಇತರರಿಗಾಗಿ ಬಯಸುವುದು ನಿಜವಾದ ಧರ್ಮ. ಕೈಲಾಸಕ್ಕಿಂತ ಕಾಯಕ ಶ್ರೇಷ್ಠ. ಧರ್ಮಕ್ಕಿಂತಲೂ ದಯಾಗುಣ ಶ್ರೇಷ್ಠ. ಭೌತಿಕ ಆಸ್ತಿಗಿಂತ ಆಧ್ಯಾತ್ಮ ಸಂಪತ್ತು ಶಾಶ್ವತವೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿಯಲ್ಲಿ ಬೋಧಿಸಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಜರುಗಲಿರುವ 35ನೇ ಶ್ರಾವಣ ಮಾಸ ಕಾರ್ಯಕ್ರಮದ ಪತ್ರಿಕೆಯನ್ನು ಬಿಡುಗಡೆಗೊಳಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಮಾಜಿ ಶಾಸಕ ಎಚ್.ಎಸ್.ಶಿವಶಂಕರ್ ಮಾತನಾಡಿ ಮನುಷ್ಯ ಜೀವನದಲ್ಲಿ ದ್ವೇಷವನ್ನು ಕಳೆದುಕೊಳ್ಳದಿದ್ದರೆ ಬದುಕಿನಲ್ಲಿ ಸುಖ ಸಂತಸದ ಹೂವು ಅರಳುವುದಿಲ್ಲ. ಜಗತ್ತಿನಲ್ಲಿ ನಮಗೆ ಬೇಕಾದುದು ಮತ್ತು ಬೇಡವಾದುದು ಎರಡೂ ಇವೆ. ಯಾವುದನ್ನು ಅನುಸರಿಸಿ ಬಾಳಿದರೆ ನೆಮ್ಮದಿ ಸಿಗುವುದೋ ಆ ಹೆದ್ದಾರಿಯಲ್ಲಿ ಮರೆಯದೇ ಮುನ್ನಡೆಯಬೇಕು. ಶ್ರೀ ರಂಭಾಪುರಿ ಜಗದ್ಗುರುಗಳ ನಿರಂತರ ಜನಜಾಗೃತಿ ಸಮಾರಂಭಗಳು ಎಲ್ಲೆಡೆ ನಡೆಯುತ್ತಿರುವುದು ನಮ್ಮೆಲ್ಲರ ಸೌಭಾಗ್ಯವೆಂದರು.

ಅವಧೂತ ಕವಿ ಗುರುರಾಜ ಗುರೂಜಿ ಮಾತನಾಡಿ ಮನುಷ್ಯ ಸಮಸ್ಯೆಗಳತ್ತ ಗಮನ ಹರಿಸಿದಾಗ ಸಮಸ್ಯೆಗಳೇ ಹೆಚ್ಚಾಗುತ್ತವೆ. ಅದೇ ಸಾಧನೆಗಳತ್ತ ನೋಟ ಹರಿಸಿದಾಗ ನಮಗೆ ಹೆಚ್ಚೆಚ್ಚು ಅವಕಾಶಗಳು ಬಂದೇ ಬರುತ್ತವೆ. ಯಾರೂ ನಿರಾಶರಾಗದೇ ಆಶಾವಾದಿಗಳಾಗಿ ಬಾಳುವುದು ಶ್ರೇಯಸ್ಕರ. ಆಧ್ಯಾತ್ಮ ಜ್ಞಾನದ ಅರಿವು ಜೀವನದ ವಿಕಾಸಕ್ಕೆ ಭದ್ರ ಬುನಾದಿ ಎಂದರು.

ನೇತೃತ್ವ ವಹಿಸಿದ ಮಳಲಿ ಸಂಸ್ಥಾನಮಠದ ಡಾ॥ ನಾಗಭೂಷಣ ಶಿವಾಚಾರ್ಯರು ಮಾತನಾಡಿ ಮನುಷ್ಯನ ಎಲ್ಲ ಸಮಸ್ಯೆಗಳಿಗೆ ಔಷಧ ಸಹನೆ ಮತ್ತು ಸಾಧನೆ. ಇತರರಿಗೆ ಏನಾದರೂ ಹಂಚುವುದಿದ್ದರೆ ಸಂತಸವನ್ನು ಹಂಚಬೇಕು. ಧರ್ಮದಲ್ಲಿ ಸತ್ಯ ಶಾಂತಿ ನೆಲೆಸಿವೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ತತ್ವ ಸಿದ್ಧಾಂತಗಳು ಮಾನವ ಜೀವ ಸಂಕುಲದ ಸಂವರ್ಧನೆಗೆ ಸಂಜೀವಿನಿಯಾಗಿವೆ ಎಂದರು.

ಹಂಪಸಾಗರದ ಶಿವಲಿಂಗ ರುದ್ರಮುನಿ ಶಿವಾಚಾರ್ಯರು ಮಾತನಾಡಿ ಬದುಕಿ ಬಾಳುವ ಮನುಷ್ಯನಿಗೆ ಧರ್ಮವೊಂದೆ ಆಶಾಕಿರಣ. ವೀರಶೈವ ಧರ್ಮದ ತತ್ವ ತ್ರಯಗಳು ಜೀವನದ ವಿಕಾಸಕ್ಕೆ ಕಾರಣವಾಗಿವೆ. ಶ್ರೀ ರಂಭಾಪುರಿ ಜಗದ್ಗುರುಗಳ ಧರ್ಮಯಜ್ಞ ಜನಮನದ ಜಾಗೃತಿಗೆ ಈ ಸಮಾರಂಭ ಸಾಕ್ಷಿಯಾಗಿದೆ ಎಂದರು.

# ವಯನಾಡಿನಲ್ಲಿ ಮಳೆ ಆರ್ಭಟ ಕಬಿನಿ ಜಲಾಶಯಕ್ಕೆ ಹೆಚ್ಚಿದ ಒಳಹರಿವು

**ನಂಜನಗೂಡು, ಆ.4:** ಕೇರಳದ ವಯನಾಡಿನಲ್ಲಿ ಹೆಚ್ಚಾದ ಮಳೆಯಿಂದಾಗಿ ಕಬಿನಿ ಜಲಾಶಯಕ್ಕೆ ನೀರಿನ ಒಳಹರಿವು ಹೆಚ್ಚಾಗಿದೆ. ಜಲಾಶಯದ ಸುರಕ್ಷತೆಯ ದೃಷ್ಟಿಯಿಂದ ಅಪಾರ ಪ್ರಮಾಣದ ನೀರನ್ನು ಹೊರಬಿಡಲಾಗುತ್ತಿದ್ದು, ಇದರಿಂದಾಗಿ ನಂಜನಗೂಡಿನ ಮೂಲಕ ಹರಿಯುವ ಕಪಿಲಾ ನದಿ ಮೈದುಂಬಿ ಹರಿಯುತ್ತಿದೆ. ಕಬಿನಿ ಜಲಾಶಯಕ್ಕೆ ಪ್ರಸ್ತುತ 31,746 ಕ್ಯೂಸೆಕ್ ನೀರು ಒಳಹರಿವು ಬರುತ್ತಿದೆ. ಜಲಾಶಯದ ನೀರಿನ ಮಟ್ಟ ನಿಯಂತ್ರಿಸಲು 27,000 ಕ್ಯೂಸೆಕ್ ನೀರನ್ನು ಹೊರಬಿಡಲಾಗುತ್ತಿದೆ.

ನಂಜನಗೂಡು ತಹಶೀಲ್ದಾರ್ ಡಾ. ಸ್ಮಿತಾ ರಾಮು, ನಗರಸಭಾ ಆಯುಕ್ತ ಬಸವರಾಜು, ಶ್ರೀಕಂಠೇಶ್ವರ ಸ್ವಾಮಿ ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣ ಅವರು ಸ್ಥಳಕ್ಕೆ ಭೇಟಿನೀಡಿ ಪರಿಶೀಲನೆ ನಡೆಸಿದರು.ಈ ಸಂದರ್ಭದಲ್ಲಿ ಮಾತನಾಡಿದ ತಹಶೀಲ್ದಾರ್ ಡಾ. ಸ್ಮಿತಾ ರಾಮು ಅವರು, ನದಿಪಾತ್ರದ ಜನರು ಎಚ್ಚರಿಕೆಯಿಂದ ಇರಬೇಕು. ಮಕ್ಕಳನ್ನು ನದಿ ಬಳಿ ಬಿಡಬಾರದು. ನದಿ ದಡದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ. ಸಾರ್ವಜನಿಕರು ಕಪಿಲಾ ನದಿಗೆ



ತೆರಳದಂತೆ ಮನವಿ ಎಂದು ಹೇಳಿದರು.ವೈನಾಡಿನಲ್ಲಿ ಮಳೆ ಮುಂದುವರೆಯುತ್ತಿರುವ ಕಾರಣ ಮುಂದಿನ 24 ಗಂಟೆಗಳ ಕಾಲ ನೀರಿನ ಮಟ್ಟ ಮತ್ತಷ್ಟು ಏರುವ ಸಾಧ್ಯತೆಯಿದೆ. ತಗ್ಗುಪ್ರದೇಶದ ಜನರು ಅಗತ್ಯ ಸಾಮಗ್ರಿಗಳೊಂದಿಗೆ ಸಿದ್ಧರಾಗಿರಬೇಕು ಎಂದು ತಾಲ್ಲೂಕು ಆಡಳಿತ ಸೂಚಿಸಿದೆ.

# ಸಚಿವ ಸ್ಥಾನ ಸಿಗದಿದ್ದಕ್ಕೆ ಶಾಸಕ ಹಂಪನಗೌಡ ಬೆಂಬಲಿಗರಿಂದ ಪ್ರತಿಭಟನೆ

**ರಾಯಚೂರು, ಆ. 4:** ಜಿಲ್ಲೆಯ ಸಿಂಧನೂರು ಹಿರಿಯ ಶಾಸಕ ಹಂಪನಗೌಡ ಬಾದರ್ಲಿ ಅವರಿಗೆ ಸಚಿವ ಸ್ಥಾನ ತಪ್ಪಿದ್ದಕ್ಕೆ ಕಾಂಗ್ರೆಸ್ ಕಾರ್ಯಕರ್ತರು, ಬೀದಿಗಿಳಿದು ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಗಾಂಧಿ ವೃತ್ತದಲ್ಲಿ ಸೋಮವಾರ ಮಧ್ಯಾಹ್ನ ಬೇಸರಗೊಂಡ ಶಫೀಯುಲ್ಲಾ ಖಾನ್, ಪೆಟ್ರೋಲ್ ಸುರಿದುಕೊಂಡು ಆತ್ಮಹತ್ಯೆ ಯತ್ನಸಿದ ಅವರನ್ನು ತಡೆದು, ವಶಕ್ಕೆ ಪಡೆದುಕೊಂಡರು.

ಹಂಪನಗೌಡರ ಬೆಂಬಲಿಗರು ಕಾಂಗ್ರೆಸ್ ಪಕ್ಷದ ಮುಖಂಡರ ವಿರುದ್ಧ ಧಿಕ್ಕಾರ ಕೂಗಿ ಪ್ರತಿಭಟಿಸಿದರು. ಮಾಜಿ ಮುಖ್ಯಮಂತ್ರಿ ಸಿದ್ಧರಾಮಯ್ಯ, ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರ ನಿವಾಸಗಳಿಗೆ ತೆರಳಿ ಹಂಪನಗೌಡರನ್ನು ಸಚಿವ ಸ್ಥಾನದಿಂದ ವಂಚಿಸುವುದು ಅನ್ಯಾಯವಲ್ಲವೇ? 5 ಬಾರಿ ಶಾಸಕರಾಗಿ ಸಿಂಧನೂರು ತಾಲ್ಲೂಕು ಸೇರಿದಂತೆ ರಾಯಚೂರು ಜಿಲ್ಲೆಯಲ್ಲಿ ಪ್ರಭಾವಿ ನಾಯಕರಾಗಿರುವ ಅವರಿಗೆ ನಿರಂತರವಾಗಿ ಅನ್ಯಾಯ ಮಾಡಲಾಗುತ್ತಿದೆ ಎಂದು ಕಾರ್ಯಕರ್ತರು ತೀವ್ರ ಅಸಮಾಧಾನ



ವ್ಯಕ್ತಪಡಿಸಿದರು. ಇನ್ನು ಕೆಲವರು ತಮ್ಮ ನಾಯಕನಿಗೆ ಸಚಿವ ಸ್ಥಾನ ಸಿಗದಿರುವುದಕ್ಕೆ ಕಣ್ಣೀರು ಹಾಕಿದರು.

ಮುಖಂಡರಾದ ಬಸವರಾಜ ಹಿರೇಗೌಡರ, ಎನ್.ಅಮರೇಶ, ಅಶೋಕ ಉಮಲೂಟಿ, ಸಣ್ಣಭೀಮನಗೌಡ ಗೊರೇಬಾಳ, ಶಿವನಗೌಡ ಎಲೆಕೂಡ್ಲಿಗಿ, ಅಮರೇಗೌಡ ಕೋಳಬಾಳ, ಸುರೇಶ ಜಾಧವ, ವೀರೇಶ ಹಟ್ಟಿ, ವೀರೇಶ ಶಿರಡಿ, ಪ್ರಭುರಾಜ, ಶಬ್ಬೀರ್ ನಾಯಕ, ಬಸವರಾಜ ಸಾಹುಕಾರ, ತಿಮ್ಮಣ್ಣ ಸಾಹುಕಾರ, ವಾಗೇಶ ಸೇರಿದಂತೆ ಬೆಂಗಳೂರಿನಲ್ಲಿ ಸುಮಾರು 700ಕ್ಕೂ ಹೆಚ್ಚು ಅಭಿಮಾನಿಗಳು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

ವನಸಿರಿ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ಅಮರೇಗೌಡ ಮಲ್ಲಾಪುರ ಮಾತನಾಡಿ, ಹಂಪನಗೌಡರು ಕಾಂಗ್ರೆಸ್ ಪಕ್ಷಕ್ಕೆ ನಿಷ್ಠಾವಂತರಾಗಿ ದಶಕಗಳವರೆಗೆ ಸೇವೆ ಸಲ್ಲಿಸಿದ್ದಾರೆ. ಪಕ್ಷವನ್ನು ತಳಮಟ್ಟದಿಂದ ಕಟ್ಟುವಲ್ಲಿ ಶ್ರಮಿಸಿದ್ದಾರೆ. ಈ ಬಾರಿ ಸಚಿವರಾಗುತ್ತಾರೆ ಎನ್ನುವ ಅದಮ್ಯ ವಿಶ್ವಾಸವಿತ್ತು. ಭಾನುವಾರ ರಾತ್ರಿ ಸಾವಿರಾರು ಅಭಿಮಾನಿಗಳು, ಮುಖಂಡರು ಅವರ ಪ್ರಮಾಣ ವಚನ ಸ್ವೀಕಾರ ಸಮಾರಂಭವನ್ನು ಕಣ್ತುಂಬಿಕೊಳ್ಳಲು ತೆರಳಿದ್ದರು. ಆದರೆ ಪಕ್ಷದ ಹೈಕಮಾಂಡ್ ಏಕಾಏಕಿ ಅವರ ಹೆಸರನ್ನು ತೆಗೆದುಹಾಕಿರುವುದು ನೋವಿನ ಸಂಗತಿ.

ಬಾದರ್ಲಿ ಮನವಿ: ಶಾಸಕ ಹಂಪನಗೌಡ ಬಾದರ್ಲಿ ಅವರು ಪ್ರತಿಕ್ರಿಯಿಸಿ, ಸಿಂಧನೂರು ಕ್ಷೇತ್ರವನ್ನು ಅಭಿವೃದ್ಧಿ ಪಥದೆಡೆಗೆ ಕೊಂಡೊಯ್ದಿದ್ದೇನೆ. ಜ್ಯೇಷ್ಠತೆಯ ಆಧಾರದ ಮೇಲೆ ಸಚಿವ ಸ್ಥಾನಕ್ಕೆ ಪ್ರಯತ್ನಿಸಿದ್ದೆ. ಪಕ್ಷದ ಎಲ್ಲ ಮುಂಚೂಣಿ ನಾಯಕರು ಭರವಸೆ ಕೊಟ್ಟಿದ್ದರು. ಆದರೆ ಯಾವ ಕಾರಣಕ್ಕೆ ತಮ್ಮ ಹೆಸರು ತೆಗೆಯಲಾಗಿದೆ ಎಂಬುವದು ಗೊತ್ತಿಲ್ಲ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ತಮಗೆ ಉಂಟಾಗಿರುವ ನೋವನ್ನು ಅವರಿಗೆ ಮನವರಿಕೆ ಮಾಡಿದ್ದೇನೆ. ಕಾರ್ಯಕರ್ತರು ಅಹಿತಕರ ಘಟನೆಗೆ ಅವಕಾಶ ಕೊಡದೆ ಶಾಂತರೀತಿಯಿಂದ ವರ್ತಿಸಬೇಕು ಎಂದು ವಿನಂತಿಸಿದರು.

# ಡಾ.ಅಜಯ್ ಸಿಂಗ್‌ಗೆ ಸಚಿವ ಸ್ಥಾನ, ಭಾವುಕರಾದ ಧರ್ಮಸಿಂಗ್ ತಾಯಿ-ಪತ್ನಿ, ಕಲಬುರಗಿಯಲ್ಲಿ ಸಂಭ್ರಮ

**ಕಲಬುರಗಿ, ಆ. 4:** ರಾಜ್ಯ ಸಚಿವ ಸಂಪುಟ ವಿಸ್ತರಣೆಯಲ್ಲಿ ಜಿಲ್ಲೆಯ ಜೇವರ್ಗಿ ಶಾಸಕರೂ ಆದ ಮಾಜಿ ಮುಖ್ಯಮಂತ್ರಿ ಎನ್.ಧರ್ಮಸಿಂಗ್ ಅವರ ಪುತ್ರ ಡಾ. ಅಜಯ್ ಸಿಂಗ್ ಅವರಿಗೆ ಸಂಪುಟ ದರ್ಜೆ ಸಚಿವ ಸ್ಥಾನ ಲಭಿಸಿದ್ದು, ಜಿಲ್ಲೆಯಲ್ಲಿ ಅವರ ಅಭಿಮಾನಿಗಳಲ್ಲಿ ಸಂಭ್ರಮ ಮನೆಮಾಡಿದೆ.



ಮಾಜಿ ಮುಖ್ಯಮಂತ್ರಿ ದಿವಂಗತ ಧರ್ಮಸಿಂಗ್ ಕುಟುಂಬದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿದ್ದು, ಪುತ್ರ ಸಚಿವರಾಗುತ್ತಿರುವ ಕ್ಷಣವನ್ನು ಕಂಡ ತಾಯಿ ಪ್ರಭಾವತಿ ಧರ್ಮಸಿಂಗ್ ಮತ್ತು ಅಜಯ್ ಪತ್ನಿ ಭಾವುಕರಾದರು.

ಸಚಿವರಾದ ಸುದ್ದಿ ಹೊರಬೀಳುತ್ತಲೇ ಮತ್ತು ಪ್ರಮಾಣ ವಚನ ಸ್ವೀಕರಿಸುವ ಸುದ್ದಿ ಹೊರಬೀಳುತ್ತಿದ್ದಂತೆಯೇ ಡಾ. ಅಜಯ್ ಸಿಂಗ್ ನಿವಾಸಕ್ಕೆ ಅಪಾರ ಅಭಿಮಾನಿಗಳು ಮತ್ತು ಬೆಂಬಲಿಗರು ಆಗಮಿಸಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಡಾ.ಅಜಯ್ ಸಿಂಗ್ ಅವರನ್ನು ಹೆಗಲ ಮೇಲೆ ಹೊತ್ತು ಅಭಿನಂದನೆ ಸಲ್ಲಿಸಿದ ಕಾರ್ಯಕರ್ತರು ಘೋಷಣೆಗಳನ್ನು ಕೂಗಿ ವಿಜಯೋತ್ಸವ ಆಚರಿಸಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ತವರು ಜಿಲ್ಲೆಯಾಗಿರುವ ಕಲಬುರಗಿಗೆ ಈ ಬಾರಿ ಸಚಿವ ಸಂಪುಟದಲ್ಲಿ ಭರ್ಜರಿ ಪ್ರತಿನಿಧಿತ್ವ ಸಿಕ್ಕಂತಾಗಿದೆ. ಈಗಾಗಲೇ ಎಐಸಿಸಿ ಅಧ್ಯಕ್ಷರ ಪುತ್ರ ಪ್ರಿಯಾಂಕ್ ಖರ್ಗೆ ಸಚಿವರಾಗಿದ್ದು, ಜಿಲ್ಲೆಯ ಸೇಡಂ ಕ್ಷೇತ್ರದ ಶಾಸಕ ಡಾ. ಶರಣಪ್ರಕಾಶ್ ಪಾಟೀಲ್ ಅವರೂ ಕೂಡ ಸಚಿವ ಸಂಪುಟದಲ್ಲಿದ್ದಾರೆ. ಇದೀಗ ಡಾ. ಅಜಯ್ ಸಿಂಗ್ ಸೇರ್ಪಡೆಯಿಂದ ಸುಮಾರು ಎರಡು ದಶಕಗಳ ಬಳಿಕ ಕಲಬುರಗಿ ಜಿಲ್ಲೆಗೆ ಮೂರು ಸಚಿವ ಸ್ಥಾನಗಳು ದೊರೆತಂತಾಗಿದೆ.

ಪುತ್ರ ಸಚಿವರಾಗುತ್ತಿರುವ ಸುದ್ದಿ ಕೇಳುತ್ತಿದ್ದಂತೆಯೇ ತಾಯಿ ಪ್ರಭಾವತಿ ಧರ್ಮಸಿಂಗ್ ಮಗನನ್ನು ತಬ್ಬಿಕೊಂಡು ಭಾವುಕರಾಗಿ ಕಣ್ಣೀರು ಹಾಕಿದರು. ಹಲವು ವರ್ಷಗಳ ರಾಜಕೀಯ ಪಯಣದ ಬಳಿಕ ಪುತ್ರ ಸಚಿವ ಸ್ಥಾನಕ್ಕೇರಿದ ಸಂತಸದ ಕ್ಷಣ ಅಲ್ಲಿದ್ದವರ ಮನಮುಟ್ಟಿತು. ಬೆಂಬಲಿಗರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಡಾ.ಅಜಯ್ ಸಿಂಗ್ ಅವರಿಗೆ ಅಭಿನಂದನೆಗಳ ಮಹಾಪೂರ ಹರಿಸಿದರು.

ಡಾ, ಅಜಯಸಿಂಗ್ ಅವರು 2013ರಿಂದ ಸತತ ಮೂರು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಅವರೊಂದಿಗೇ ಮೊದಲ ಬಾರಿಗೆ ಆಯ್ಕೆಯಾದ ಪ್ರಿಯಾಂಕ್ ಖರ್ಗೆ ಅವರಿಗೆ ಅಂದಿನ ಸಿದ್ದರಾಮಯ್ಯ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ದೊರೆಯಿತು. ಆದರೆ ಡಾ.ಅಜಯಸಿಂಗ್ ಅವರಿಗೆ ದೊರೆಯದಿರುವುದು ಜಿಲ್ಲೆಯ ರಾಜಕೀಯದಲ್ಲಿ ತಂದೆಯ ಪ್ರಭಾವದಿಂದ ಪ್ರಿಯಾಂಕ್ ಖರ್ಗೆ ಸಚಿವರಾಗಿದ್ದಾರೆ. ಧರ್ಮಸಿಂಗ್ ಅವರು ಈಗ ಜೀವಂತವಾಗಿಲ್ಲದ್ದರಿಂದ ಡಾ.ಅಜಯಸಿಂಗ್ ಅವರನ್ನು ಕೈಬಿಡಲಾಗಿದೆ ಎಂದು ಆಡಿ ಕೊಳ್ಳುವಂತಾಗಿತ್ತು.

ಅನಂತರ 2018ರಲ್ಲೂ ಡಾ.ಅಜಯಸಿಂಗ್ ಆಯ್ಕೆಯದರೂ ಅಂದಿನ ಸಮ್ಮಿಶ್ರ ಸರ್ಕಾರದಲ್ಲಿ ಸಚಿವ ಸ್ಥಾನದಿಂದ ವಂಚಿತರಾದರು. 2023ರಲ್ಲಿ ಮೂರನೇ ಬಾರಿಗೆ ಆಯ್ಕೆಯದ ಡಾ.ಅಜಯಸಿಂಗ್ ಈ ಬಾರಿ ಸಚಿವ ಸ್ತಾನ ಖಂಡಿತ ದೊರೆಯುತ್ತದೆ ಎಂದು ಅವರು ಮತ್ತು ಅವರ ಬೆಂಬಲಿಗರು ಅಪಾರ ನಿರೀಕ್ಷೆಯನ್ನಿಟ್ಟುಕೊಂಡಿದ್ದರು. ಆಗಲೂ ಸಿದ್ದರಾಮಯ್ಯ ಸರ್ಕಾರದಲ್ಲಿ ಪ್ರಿಯಾಂಕ್ ಖರ್ಗೆ ಅವರಿಗೆ ಸಚಿವ ಸ್ಥಾನ ದೊರೆಯಿತು. ಡಾ.ಅಜಯಸಿಂಗ್ ಅವರಿಗೆ ದೊರೆಯಲಿಲ್ಲ. ಅನಂತರ ಕಾರ್ಯಕರ್ತರ ಅಸಮಾಧಾನ ಶಮನಗೊಳಿಸಲು ಡಾ.ಅಜಯಸಿಂಗ್ ಅವರಿಗೆ ಕಲ್ಯಾಣ ಕರ್ನಟಕ ಅಭಿವೃದ್ಧಿಒ ಮಂಡಳಿ ಅಧ್ಯಕ್ಷರನ್ನಾಗಿ ಮಾಡಲಾಯಿತು. ಇದರಿಂದಲೂ ಅಸಮಾಧಾನ ಶಮನವಾಗದೇ ಡಾ.ಅಜಯಸಿಂಗ್ ಅವರಿಗೆ ಅರ್ಹತೆಯಿಲ್ಲವೇ? ವಿದ್ಯಾವಂತರು, ವೈದ್ಯರು, ಸಮಾಜ ಸೇವೆಯಿಂದ ಅತ್ಯಂತ ಜನಪ್ರಿಯತೆ ಪಡೆದವರನ್ನು ಸಚಿವ ಸ್ತಾನದ ಅವಕಶ ನೀಡದೇ ಅನ್ಯಾಯ ಮಾಡಲಾಗುತ್ತಿದೆ ಎಂಬ ಆರೋಪಗಳು ನಿರಂತರ ಕೇಳಿ ಬಂದವು. ಸಿದ್ದರಾಮಯ್ಯ ಅವರು ಕಲಬುರಗಿಗೆ ಬಂದಾಗಲೂ ಈ ಪ್ರಶ್ನೆ ಎದುರಾದಾಗ, ಹೈಕಮಾಂಡ್ ನಿರ್ಧಾರಕ್ಕೆ ನಾವೆಲ್ಲ ತಲೆಬಾಗಬೇಕೆಂದು ಚುಟುಕಾಗಿ ಉತ್ತರಿಸಿ ಜಾರಿಕೊಂಡರು. ಇದೀಗ ರಾಜ್ಯದಲ್ಲಿ ಸಿಎಂ ಬದಲದ ನಂತರ ಡಿಕೆ ಶಿವಕುಮಾರ ಅವರ ಸಚಿವ ಸಂಪುಟದಲ್ಲ ಡಾ.ಅಜಯಸಿಂಗ್ ಅವರಿಗೆ ಸಚಿವ ಸ್ಥಾನ ನಿಡುವ ಮೂಲಕ ನ್ಯಾಯ ಒದಗಿಸಿದ್ದಾರೆಂದು ಅವರ ಅಭಿಮಾನಿಗಳು ಮುಖ್ಯಮಂತ್ರಿಗಳಿಗೆ ಮತ್ತು ಕಾಂಗ್ರೆಸ್ ಹೈಕಮಾಂಡ್‌ಗೆ ಅಭಿನಂದಿಸಿದ್ದರು.



ಪ್ರಮೋದಾ ದೇವಿ ಒಡೆಯರ್, ಮೈಸೂರು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಜಿ.ಟಿ. ದೇವೇಗೌಡ ಅವರು ಮಂಗಳವಾರ ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ನಡೆದ ಚಾಮುಂಡೇಶ್ವರಿ ವರ್ಧಂತಿ ಮೆರವಣಿಗೆಯಲ್ಲಿ ಭಾಗವಹಿಸಿದರು.

# ವ್ಯಸನ ಮುಕ್ತ ಸಮಾಜ ಕಟ್ಟಲು ಪಣ ತೊಡಬೇಕು: ಡಾ.ಹಂಪಣ್ಣ ಸಜ್ಜನ್

**ರಾಯಚೂರು, ಆ.4:** ಮದ್ಯ ಹಾಗೂ ಮಾದಕ ವಸ್ತುಗಳ ಸೇವನೆಯಿಂದ ಅನೇಕ ಕುಟುಂಬಗಳು ವಿವಿಧ ರೀತಿಯ ಸಮಸ್ಯೆಗಳು ಎದುರಿಸುತ್ತಿದ್ದು, ಎಲ್ಲರೂ ವ್ಯಸನ ಮುಕ್ತ ಸಮಾಜ ಕಟ್ಟಲು ಪಣ ತೊಡಬೇಕು ಎಂದು ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್ ಅವರು ಹೇಳಿದರು.



ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಪದವಿ ಕಾಲೇಜಿನಲ್ಲಿ ಕಾರ್ಯಕ್ರಮ ಆಯೋಜನೆ ಮಾಡಿದ್ದು, ಅರ್ಥಪೂರ್ಣ ವಾಗಿದೆ ಮಹಾಂತ್ ಶಿವ ಯೋಗಿಗಳು ಮಹಾಂತ್ ಜೋಳಿಗೆಯನ್ನು ಸ್ಥಾಪಿಸಿ. ಸಮಾಜದಲ್ಲಿ ಆನೇಕ ಕುಟುಂಬಗಳನ್ನು ದುಶ್ಚಟಗಳಿಂದ ಹೊರತಂದರು. ಅವರು ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಸಾಮಾಜಿಕ ಕಾರ್ಯಗಳನ್ನು ಮಾಡಿದ್ದಾರೆ ಎಂದರು.

ಡ್ರಗ್ಸ್ ಮುಕ್ತ ರಾಜ್ಯಕ್ಕಾಗಿ ಆಪರೇಷನ್ ರೈಸಿ ಈಗಾಗಲೇ ಸರ್ಕಾರದಿಂದ ಪ್ರಾರಂಭವಾಗಿದೆ. ಸಾರ್ವಜನಿಕರಿಗೆ ಡ್ರಗ್ಸ್ ಕುರಿತು ಮಾಹಿತಿ ಸಿಕ್ಕಲ್ಲಿ ಹತ್ತಿರದ ಪೋಲೀಸ್ ಠಾಣೆಗೆ ಮಾಹಿತಿ ನೀಡುವ ಮೂಲಕ ಡ್ರಗ್ಸ್ ಮುಕ್ತ ಕರ್ನಾಟಕಕ್ಕೆ ಎಲ್ಲರೂ ಸಹಕರಿಸಬೇಕು. ಅಲ್ಲದೆ ವಿದ್ಯಾರ್ಥಿಗಳು ದುಶ್ಚಟಗಳಿಗೆ ಬಲಿಯಾಗದೆ ಅತ್ಯಂತ ಶ್ರದ್ಧೆಯಿಂದ ಚೆನ್ನಾಗಿ ಓದಿ ಉನ್ನತ ಮಟ್ಟದ ಅಧಿಕಾರಿಗಳಾಗಿ ಸಮಾಜಕ್ಕೆ ಸೇವೆ ಸಲ್ಲಿಸಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ನಂತರ ಉಪನ್ಯಾಸಕರಾಗಿ ಮನೋ ವೈದ್ಯರಾದ ಡಾ.ವಿ.ಎ.ಮಾಲಿ ಪಾಟೀಲ್ ಅವರು ಮಾತನಾಡಿ, ಡಾ.ಮಹಾಂತ ಶಿವಯೋಗಿಗಳ ಜನ್ಮದಿನವು ಬಹಳಷ್ಟು ಮಹತ್ವ ಪೂರ್ಣವಾಗಿದ್ದು, ಜೀವನದಲ್ಲಿ ಅವರು ಮಹಾಂತ ಜೋಳಿಗೆ ದುಶ್ಚಟ ಗಳ ಭಿಕ್ಷೆ ಎನ್ನುವಂತೆ ಪ್ರತಿಯೊಬ್ಬರೂ ಇವರ ರೀತಿಯ ಜೀವನವನ್ನು ನಡೆಸಿದರೆ ಯುವಜನತೆಯು ವ್ಯಸನ ಗಳಿಂದ ಮುಕ್ತರಾಗಿ ಒಳ್ಳೆಯ ಜೀವನ ವನ್ನು ನಡೆಸಲು ಅನುಕೂಲವಾಗುತ್ತದೆ ಎಂದರು.

ಇದಕ್ಕೂ ಮುಂಚೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಡಾ. ಸುರೇಶ ಜಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಮದ್ಯಪಾನ, ಗುಟ್ಕಾ, ತಂಬಾಕು, ಮಾದಕ ದ್ರವ್ಯಗಳು ಇಂದು ಹಳ್ಳಿ ಹಳ್ಳಿಗಳಿಗೂ ನುಗ್ಗಿವೆ. ಯುವಕರು ಅವಕ್ಕೆ ದಾಸರಾಗಿ ದಾರಿ ತಪ್ಪುತ್ತಿದ್ದಾರೆ.

ಒಂದು ಕುಟುಂಬದ ಒಬ್ಬ ವ್ಯಕ್ತಿ ವ್ಯಸನಿಯಾದರೆ ಆ ಇಡೀ ಕುಟುಂಬವೇ ನಾಶವಾಗುತ್ತದೆ. ಆರ್ಥಿಕವಾಗಿ ದಿವಾಳಿಯಾಗುತ್ತದೆ, ಸಾಮಾಜಿಕವಾಗಿ ಅವಮಾನಕ್ಕೆ ಒಳಗಾಗುತ್ತದೆ. ಈ ಸತ್ಯವನ್ನು ಶ್ರೀಗಳು ಅರಿತು ವ್ಯಸನಮುಕ್ತ ಸಮಾಜಕ್ಕಾಗಿ ಶ್ರಮಿಸಿದ್ದರು. ಅವರು ತಮ್ಮ ಇಡೀ ಬದುಕನ್ನು ವ್ಯಸನಮುಕ್ತ ಸಮಾಜದ ನಿರ್ಮಾಣಕ್ಕೆ ಮುಡಿಪಾಗಿಟ್ಟರು ಎಂದರು.

# ಜಿಬಿಎ ಕೆಲವಾರ್ಡ್‌ಗಳಲ್ಲಿ ಎಸ್‌ಐಆರ್ ಅಮಾನತು

## ಆಕ್ಷೇಪಣೆ ಬೆನ್ನಲ್ಲೇ ರಾಜ್ಯ ಚುನಾವಣಾ ಆಯೋಗದಿಂದ ಹೈಕೋರ್ಟ್‌ಗೆ ಮಾಹಿತಿ

**ಬೆಂಗಳೂರು, ಆ.4:** ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಕೆಲ ವಾರ್ಡ್‌ಗಳಿಗೆ ಪರ್ಯಾಯ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ನಡೆಸುವುದನ್ನು ಅಮಾನತಿನಲ್ಲಿಡಲಾಗಿದೆ ಎಂದು ರಾಜ್ಯ ಚುನಾವಣಾ ಆಯೋಗವು ಸೋಮವಾರ ಕರ್ನಾಟಕ ಹೈಕೋರ್ಟ್‌ಗೆ ತಿಳಿಸಿತು.

ದೇಶದಾದ್ಯಂತ ಕೇಂದ್ರ ಚುನಾವಣಾ ಆಯೋಗ ಹಮ್ಮಿಕೊಂಡಿರುವ ಎಸ್‌ಐಆರ್ ಪ್ರಕ್ರಿಯೆ ಚಾಲ್ತಿಯಲ್ಲಿರುವಾಗಲೇ ಬೆಂಗಳೂರಿನ ಕೆಲ ವಾರ್ಡ್‌ಗಳಿಗೆ ಪ್ರತ್ಯೇಕ ಹಾಗೂ ಸಮಾನಾಂತರ ಎಸ್‌ಐಆರ್ ನಡೆಸಲು ರಾಜ್ಯ ಚುನಾವಣಾ ಆಯೋಗ ಜೂನ್ 19ರಂದು ಹೊರಡಿಸಿರುವ ಆದೇಶ ರದ್ದು ಕೋರಿ ಬೆಂಗಳೂರಿನ ವಿವೇಕ್ ಸೇರಿ ಐದು ಮಂದಿ ಸಲ್ಲಿಸಿರುವ ಅರ್ಜಿಯನ್ನು ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ರಾಜ್ಯ ಚುನಾವಣಾ ಆಯೋಗವನ್ನು ಪ್ರತಿನಿಧಿಸಿದ್ದ ಹಿರಿಯ ವಕೀಲ ಕೆ ಎನ್ ಫಣೀಂದ್ರ ಅವರು ?ಭಾರತೀಯ ಚುನಾವಣಾ ಆಯೋಗದಿಂದ ಎಸ್‌ಐಆರ್ ನಡೆಯುತ್ತಿರುವ ಹಿನ್ನೆಲೆಯಲ್ಲಿ ಜಿಬಿಎಗೆ ಎಸ್‌ಐಆರ್ ನಡೆಸುವುದನ್ನು ಅಮಾನತಿನಲ್ಲಿಡಲಾಗಿದೆ. ಈ ಸಂಬಂಧ ಮೆಮೊ ಸಲ್ಲಿಸಲಾಗಿದೆ ಎಂದರು.

ರಾಜ್ಯ ಸರ್ಕಾರವನ್ನು ಪ್ರತಿನಿಧಿಸಿದ್ದ ಅಡ್ವೊಕೇಟ್ ಜನರಲ್ ಕೆ. ಶಶಿಕಿರಣ್ ಶೆಟ್ಟಿ ಅವರು ಎಸ್‌ಐಆರ್ ಮುಗಿದ ಮೇಲೆ ಜಿಬಿಎ ಚುನಾವಣೆ ನಡೆಸುವಂತೆ ಸುಪ್ರೀಂ ಕೋರ್ಟ್ ನಿರ್ದೇಶಿಸಿದೆ ಎಂದರು.

ಈ ಹಂತದಲ್ಲಿ ಅರ್ಜಿದಾರರನ್ನು ಪ್ರತಿನಿಧಿಸಿದ್ದ ವಕೀಲ ವೆಂಕಟೇಶ್ ದಳವಾಯಿ ಅವರು ?ಜೂನ್ 19ರಂದು ಪ್ರತ್ಯೇಕ ಎಸ್‌ಐಆರ್ ನಡೆಸುವ ಸಂಬಂಧ ಜಿಬಿಎ ಮಾಡಿರುವ ಆದೇಶವನ್ನು ಮರು ಚಾಲ್ತಿಗೆ ತರುವ ಸ್ವಾತಂತ್ರ್ಯವನ್ನು ರಾಜ್ಯ ಚುನಾವಣಾ ಆಯೋಗ ಕಾಯ್ದಿರಿಸಿಕೊಂಡಿದೆ? ಎಂದರು. ಇದಕ್ಕೆ ಪೀಠವು ನೀವು ನಿಮ್ಮದನ್ನು ಚಾಲ್ತಿಗೆ ತನ್ನಿ ಎಂದಿತು.


ಅಂತಿಮವಾಗಿ ಪೀಠವು ರಾಜ್ಯ ಚುನಾವಣಾ ಆಯೋಗದ ಪರ ಹಿರಿಯ ವಕೀಲ ಕೆ ಎನ್ ಫಣೀಂಧ್ರ ಅವರು ಮೆಮೊ ಸಲ್ಲಿಸಿದ್ದು, ಸಂಸದರು/ಶಾಸಕರ ಕ್ಷೇತ್ರಗಳಲ್ಲಿ ಎಸ್‌ಐಆರ್ ನಡೆಯುತ್ತಿರುವುದರಿಂದ ಜಿಬಿಎಗೆ ಪ್ರತ್ಯೇಕ ಎಸ್‌ಐಆರ್ ನಡೆಸುವುದನ್ನು ಅಮಾನತಿನಲ್ಲಿಡಲಾಗಿದೆ ಎಂದು ತಿಳಿಸಿದ್ದಾರೆ ಎಂದು ಆದೇಶದಲ್ಲಿ ದಾಖಲಿಸಿ, ವಿಚಾರಣೆಯನ್ನು ಸೆಪ್ಟೆಂಬರ್ 28ಕ್ಕೆ ಮುಂದೂಡಿತು.

ಕೇಂದ್ರ ಸರ್ಕಾರ ಎಸ್‌ಐಆರ್ ನಡೆಸುವುದಾಗಿ 2025ರ ಅಕ್ಟೋಬರ್ 27ರಂದು ಪ್ರಕಟಿಸಿತ್ತು. ಅದರಂತೆ 2026ರ ಜೂನ್ 16ರಂದು ರಾಜ್ಯದಲ್ಲಿ ವಿಧಾನಸಭೆ ಕ್ಷೇತ್ರಗಳ ಮತದಾರರ ಪಟ್ಟಿಯನ್ನು ಜಪ್ತಿ ಮಾಡಿತ್ತು. ಇದಾದ ಮೂರೇ ದಿನಗಳಲ್ಲಿ ಅಂದರೆ ಜೂನ್ 19ರಂದು ರಾಜ್ಯ ಚುನಾವಣಾ ಆಯೋಗ ಸಹ ಜಿಬಿಎಯ ಕೆಲವು ವಾರ್ಡ್‌ಗಳ ಮತಪಟ್ಟಿ ಪರಿಷ್ಕರಣೆ ನಡೆಸಲು ಆದೇಶಿಸಿದೆ ಎಂದು ಅರ್ಜಿದಾರರು ಅರ್ಜಿಯಲ್ಲಿ ಆಕ್ಷೇಪಿಸಿದ್ದಾರೆ.

ಕೇಂದ್ರ ಚುನಾವಣಾ ಆಯೋಗದ ನಿರ್ದೇಶನದಂತೆ ಜೂನ್ 26ರಿಂದ ಈಗಾಗಲೇ ಜಿಬಿಎ ಸೇರಿ ರಾಜ್ಯದಾದ್ಯಂತ ಎಸ್‌ಐಆರ್ ಮನೆ ಮನೆ ಸರ್ವೇ ಆರಂಭವಾಗಿದೆ. ಒಂದೇ ಅವಧಿಯಲ್ಲಿ ಪ್ರತ್ಯೇಕವಾಗಿ ಪರ್ಯಾಯ ಎಸ್‌ಐಆರ್ ನಡೆಸುವುದರಿಂದ ಸಾಕಷ್ಟು ಗೊಂದಲಗಳು ಸೃಷ್ಟಿಯಾಗಲಿವೆ. ಮೇಲಾಗಿ ಇದು ಕೇಂದ್ರ ಚುನಾವಣಾ ಆಯೋಗದ ನಿರ್ದೇಶನಗಳಿಗೆ ವಿರುದ್ಧವಾಗಿದೆ. ಆದ್ದರಿಂದ, ರಾಜ್ಯ ಚುನಾವಣಾ ಆಯೋಗ ಜೂನ್ 19ರಂದು ಹೊರಡಿಸಿರುವ ಆದೇಶ ರದ್ದುಪಡಿಸಬೇಕು ಎಂದು ಅರ್ಜಿಯಲ್ಲಿ ಕೋರಲಾಗಿದೆ.

# ಸ್ಥಗಿತಗೊಂಡಿದ್ದ ಮಂಗಳೂರು-ಬೆಂಗಳೂರು ರೈಲು ಸಂಚಾರ ಪುನರಾರಂಭ

**ಮಂಗಳೂರು, ಆ.4:** ಭೂಕುಸಿತದ ಕಾರಣದಿಂದ ಕಳೆದ ಕೆಲವು ದಿನಗಳಿಂದ ಸ್ಥಗಿತಗೊಂಡಿದ್ದ ಮಂಗಳೂರು ಮತ್ತು ಬೆಂಗಳೂರು ನಡುವಿನ ರೈಲು ಸಂಚಾರವು ಈಗ ಅಧಿಕೃತವಾಗಿ ಪುನರಾರಂಭಗೊಂಡಿದೆ.



ರೈಲ್ವೆ ಇಲಾಖೆಯು ಮಾರ್ಗದ ದುರಸ್ತಿ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದು, ಸುರಕ್ಷತಾ ಪರಿಶೀಲನೆ ನಡೆಸಿದ ಬಳಿಕ ಈ ಮಾರ್ಗದಲ್ಲಿ ರೈಲುಗಳ ಸಂಚಾರಕ್ಕೆ ಹಸಿರು ನಿಶಾನೆ ತೋರಿಸಲಾಗಿದೆ.

ಕರಾವಳಿ ಭಾಗದಿಂದ ರಾಜ್ಯದ ರಾಜಧಾನಿ ಬೆಂಗಳೂರಿಗೆ ದಿನನಿತ್ಯ ಪ್ರಯಾಣಿಸುವ ಸಾವಿರಾರು ಸಾರ್ವಜನಿಕರು, ಉದ್ಯೋಗಿಗಳು, ರೋಗಿಗಳು ಹಾಗೂ ವಿದ್ಯಾರ್ಥಿಗಳಿಗೆ ಈ ಬೆಳವಣಿಗೆಯಿಂದ ಭಾರಿ ನಿರಾಳತೆಯಾಗಿದೆ.

ಈ ಹಿಂದೆ ರೈಲು ಸೇವೆ ಸ್ಥಗಿತಗೊಂಡಿದ್ದರಿಂದ ಪ್ರಯಾಣಿಕರು ಖಾಸಗಿ ಹಾಗೂ ಸರ್ಕಾರಿ ಬಸ್ಸಗಳನ್ನು ಅವಲಂಬಿಸಬೇಕಾಗಿತ್ತು, ಇದು ಸಮಯ ಮತ್ತು ಸಾರಿಗೆ ವೆಚ್ಚ ಎರಡನ್ನೂ ಹೆಚ್ಚಿಸಿ ಜನರಿಗೆ ತೀವ್ರ ತೊಂದರೆ ಉಂಟುಮಾಡಿತ್ತು.ರೈಲ್ವೆ ಇಲಾಖೆಯ ಉನ್ನತಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಹಳಿಗಳ ಸ್ಥಿತಿಗತಿ ಹಾಗೂ ಸಿಗ್ನಲಿಂಗ್ ವ್ಯವಸ್ಥೆಯನ್ನು ಕೂಲಂಕುಷವಾಗಿ ಪರಿಶೀಲಿಸಿದ್ದಾರೆ. ಹಳಿಗಳ ಮೇಲೆ ಬಿದ್ದಿದ್ದ ಮಣ್ಣು ಮತ್ತು ಕಲ್ಲುಗಳನ್ನು ತೆರವುಗೊಳಿಸಿ, ಭವಿಷ್ಯದಲ್ಲಿ ಮತ್ತೆ ಯಾವುದೇ ಅಡೆತಡೆಗಳು ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಪ್ರಸ್ತುತ ಈ ಮಾರ್ಗದಲ್ಲಿ ಸುರಕ್ಷಿತವಾಗಿ ರೈಲುಗಳನ್ನು ಚಲಾಯಿಸಲು ಸಂಪೂರ್ಣ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಸಂಚಾರ ಪುನರಾರಂಭಗೊಂಡಿದ್ದರೂ, ಪ್ರಯಾಣಿಕರು ತಮ್ಮ ಪ್ರಯಾಣವನ್ನು ಯೋಜಿಸುವ ಮೊದಲು ಪರಿಷ್ಕೃತ ವೇಳಾಪಟ್ಟಿ ಮತ್ತು ರೈಲುಗಳ ನೈಜ ಸಮಯವನ್ನು ಪರಿಶೀಲಿಸಿಕೊಳ್ಳುವಂತೆ ಕೋರಲಾಗಿದೆ. ಪ್ರಯಾಣಿಕರು ಭಾರತೀಯ ರೈಲ್ವೆಯ ಅಧಿಕೃತ ವೆಬ್ಸೈಟ್ ಅಥವಾ 'ಓಖಿಇಖ' ಆಪ್ ಬಳಸಿಕೊಂಡು ಸಮಯದ ವಿವರ ಪಡೆಯಬಹುದು ಎಂದು ಇಲಾಖೆಯು ತಿಳಿಸಿದೆ.

# ಅಕ್ಕಮಹಾದೇವಿ ಮಹಿಳಾ ಪತ್ತಿನ ಸಹಕಾರ ಸಂಘ: ಮೂಲ ಧ್ಯೇಯ ಸಬಲೀಕರಣ



**ಬೀದರ್, ಆ. 4:** ಮಹಿಳೆಯರು ಇಂದಿನ ಕಾಲದಲ್ಲಿ ಸಾಕಷ್ಟು ಸ್ವಾವಲಂಬಿಗಳಾಗುತ್ತಿದ್ದಾರೆ. ಅವರಿಗೆ ಸ್ವಲ್ಪ ಸಹಕಾರ ನೀಡಿ ಅವರನ್ನು ಇನ್ನಷ್ಟು ಸಬಲೀಕರಣಗೊಳಿಸುವುದೇ ಅಕ್ಕಮಹಾದೇವಿ ಮಹಿಳಾ ಪತ್ತಿನ ಸಹಕಾರ ಸಂಘದ ಮೂಲ ಧ್ಯೇಯವಾಗಿದೆ ಎಂದು ಸಂಘದ ಅಧ್ಯಕ್ಷೆ ಸಾವಿತ್ರಿಬಾಯಿ ಹೆಬ್ಬಾಳೆ ತಿಳಿಸಿದರು.

ನಗರದ ಕರ್ನಾಟಕ ಸಾಹಿತ್ಯ ಸಂಘದ ಸಾಂಸ್ಕೃತಿಕ ಭವನದಲ್ಲಿ ಜರುಗಿದ ಸಂಘದ 28ನೇ ಸಾಮಾನ್ಯ ಸಭೆಯ ಅವರು ಮಾತನಾಡಿ, ಸಂಘದ ಕಚೇರಿ ಸದ್ಯ ಬಾಡಿಗೆಯಲ್ಲಿ ನಡೆಸುತ್ತಿರುವುದರಿಂದ ಮುಂದಿನ ದಿನಗಳಲ್ಲಿ ಸ್ವಂತ ನಿವೇಶನ ಪಡೆದು ಕಟ್ಟಡ ನಿರ್ಮಿಸುವ ಗುರಿ ಹೊಂದಲಾಗಿದೆ. ನಮ್ಮ ಸಂಘದಲ್ಲಿ ಆಕರ್ಷಕ ಬಡ್ಡಿದರ ನೀಡಲಾಗುತ್ತಿದ್ದು ಮಹಿಳೆಯರು ಇದರ ಸದುಪಯೋಗ ಪಡೆದುಕೊಳ್ಳಬೇಕು. 2025-26ನೇ ಸಾಲಿನಲ್ಲಿ ಸಂಘವು 26 ಲಕ್ಷ ನಿವ್ವಳ ಲಾಭ ಗಳಿಸಿದೆ. ಸಂಘವು ಯಶಸ್ವಿಯಾಗಿ ಜರುಗಲು ಸಹಕಾರ ನೀಡುತ್ತಿರುವ ಎಲ್ಲಾ ಆಡಳಿತ ಮಂಡಳಿ ಸದಸ್ಯರಿಗೆ ಧನ್ಯವಾದಗಳು ತಿಳಿಸಿದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷೆ ಮೀನಾಕ್ಷಿ ತಗಾರೆ, ನಿರ್ದೇಶಕರಾದ ಶಾಂತಾಬಾಯಿ ಗುಂದಗಿ, ಶಾಂತಾಬಾಯಿ ಗುನ್ನಳ್ಳಿ, ಜಗದೇವಿ ಸೂರೆ, ಇಂದುಮತಿ ಮಾಳಗೆ, ಸರಸ್ವತಿ ನಾನಾಪೂರೆ, ರೇಖಾ ಹಾದಿಮನಿ, ಶಾಮಲಾ ಎಲಿ, ಅಂಬಿಕಾ ಬಿರಾದಾರ, ಪಂಕಜಾ ಎಸ್. ಹುಗ್ಗಿ, ಸುನಿತಾ ಕೂಡ್ಲಿಕರ್, ಸುನಿತಾ ಬುಡೇರಿ, ಪುಷ್ಪಾವತಿ ಫುಲೇಕರ್, ಅಂಬಿಕಾ ನಿಣ್ಣೆ, ಶಿವಕುಮಾರ ಪರೀಟ್, ಪರಮೇಶ ಪಾಟೀಲ ಸೇರಿದಂತೆ ಇತರರು ಇದ್ದರು.

# ಮಳಖೇಡದಲ್ಲಿ ಶ್ರೀ ಜಯತೀರ್ಥರ ಆರಾಧನೆ ನಿಮಿತ್ತ ಜೋಡು ರಥೋತ್ಸವ

**ಕಲಬುರಗಿ, ಆ. 4:** ಜಿಲ್ಲೆಯ ಕಾಗಿಣೆ ತೀರದಲ್ಲಿರುವ ಮಳಖೇಡದ ಉತ್ತರಾದಿ ಮಠದ ಶ್ರೀ ಜಯತೀರ್ಥರ ಮೂಲ ವೃಂದಾವನ ಸನ್ನಿಧಾನದಲ್ಲಿ ಲಕ್ಷಾಂತರ ಭಕ್ತರ ಮಧ್ಯೆ ಸಂಭ್ರಮದಿಂದ ಶ್ರೀ ಟೀಕಾಕೃತ್ಪಾದರೆಂದು ಖ್ಯಾತಿ ಪಡೆದಿರುವ ಜಯತೀರ್ಥರ ಮಧ್ಯಾರಾಧನೆ ಅಂಗವಾಗಿ ಜೋಡು ರಥೋತ್ಸವ ಉತ್ತರದಿಮಠಾಧೀಶರಾದ ಶ್ರೀ ಸತ್ಯಥ್ಮ ತೀರ್ಥರ ನೇತೃತ್ವದಲ್ಲಿ ಜಗುರಿತು.



ನಸುಕಿನ ಜಾವ ಶ್ರೀ ಸತ್ಯಾತ್ಮ ತೀರ್ಥರ ಬ್ರಾಹ್ಮೀ ಉತ್ಥಾನ, ದಂಡೋದಕ ಸ್ನಾನ, ಮೂಲ ವೃಂದಾವನಕ್ಕೆ ಪಂಚಾಮೃತಾಭಿಷೇಕ ಮುಂತಾದವುಗಳು ನೆರವೇರಿದವು. ಬಳಿಕ ಶ್ರೀಗಳು ವಿದ್ಯಾರ್ಥಿಗಳಿಗೆ ಸುಧಾ ಪಾಠ, ಅಸಂಖ್ಯಾತ ಭಕ್ತರಿಗೆ ತಪ್ತ ಮುದ್ರಾಧಾರಣೆ ಮಾಡಿದರು.

ಪ್ರಾಂಗಣದಲ್ಲಿ ರಜತ ರಥೋತ್ಸವ ನೆರವೇರಿತು. ರಥಾಂಗ ಹೋಮ ನೆರವೇರಿದ ಬಳಿಕ ವಿವಿಧ ಪುಷ್ಪಗಳಿಂದ ಅಲಂಕಾರಗೊಂಡ ಜೋಡು ರಥೋತ್ಸವಕ್ಕೆ ಶ್ರೀ ಸತ್ಯಾತ್ಮ ತೀರ್ಥರು ಚಾಲನೆ ನೀಡಿದರು. ಶ್ರೀಮಠದಿಂದ ಮುಖ್ಯ ರಸ್ತೆಯವರೆಗೆ ಅದ್ದೂರಿಯಾಗಿ ರಥೋತ್ಸವ ಭಕ್ತರ ಭಜನೆಯೊಂದಿಗೆ ಜರುಗಿತು.

ಶ್ರೀ ಜಯತೀರ್ಥರು ಇಂದ್ರಾಂಶ ಸಂಭೂತರೆಂದೆ ಖ್ಯಾತಿ ಪಡೆದಿದ್ದು, ರಥೋತ್ಸವ ಸಂದರ್ಭದಲ್ಲಿ ಇಂದ್ರ ದೇವನು ಮಳೆಯ ಸಿಂಚನ ಮಾಡಿದ. ದಾರಿಯುದ್ದಕ್ಕೂ ಭಕ್ತರ ಭಜನೆ, ನೃತ್ಯ ಗಮನಸೆಳೆಯಿತು.

ಎದುರಾರೈ ಗುರುವೇ ನಿಮಗೆ ಸಮನಾರೈ..... ಯತಿಕುಲಮುಕುಟ ಶ್ರೀ ಜಯತೀರ್ಥ.. ಕಾಗಿಣೆ ತಟವಾಸ ಮಳಖೇಡ ನಿವಾಸ.. ಟೀಕಾಚಾರ್ಯರ ಪಾದ ಸೋಕಿದ ಕೊನೆಧೂಳಿ. ಸಾರಿ ಭಜಿಸಿರೋ ಟೀಕಾರಾಯರ ಎಂಬುದು ಸೇರಿ ಹಲವು ದಾಸರ ಪದಗಳು ಮೊಳಗಿದವು. ಶ್ರೀ ಜಯತೀರ್ಥ ಮಹಾರಾಜ್ ಕಿ ಜೈ.. ಶ್ರೀ ಸತ್ಯಾತ್ಮ ತೀರ್ಥರಿಗೆ ಜಯವಾಗಲಿ.. ಹರಿ ಸರ್ವೋತ್ತಮ, ವಾಯು ಜೀವೋತ್ತಮ.. ಹರೇ ಶ್ರೀನಿವಾಸ.. ಶ್ರೀ ಗುರುಭ್ಯೋಂ ನಮಃ ಘೋಷಣೆಗಳು ಮೊಳಗಿದವು.

ರಾಜ್ಯದ ವಿವಿಧ ಭಾಗಗಳೂ ಸೇರಿದಂತೆ ತೆಲಂಗಾಣ, ಆಂಧ್ರಪ್ರದೇಶ, ಮಹಾರಾಷ್ಟ್ರ, ತಮಿಳುನಾಡು ಹಾಗೂ ವಿವಿಧೆಡೆಯಿಂದ ಅಸಂಖ್ಯಾತ ಭಕ್ತರು ಶ್ರೀ ಜಯತೀರ್ಥರ ಮೂಲ ವೃಂದಾವನದ ದರ್ಶನ ಪಡೆದು ಪುನೀತರಾದರು. ಶ್ರೀ ಸತ್ಯಧ್ಯಾನ ವಿದ್ಯಾಪಿಠದ ಕುಲಪತಿ ಪಂ. ವಿದ್ಯಾಸಿಂಹಾಚಾರ್ಯ ಮಾಹುಲಿ ಅವರು ಕನ್ನಡೀಕರಣ ಮಾಡಿದ ಶ್ರೀ ಜಯತೀರ್ಥರ ಭಗವದ್ಗೀತಾಭಾಷ್ಯ ಪ್ರಮೇಯ ದೀಪಿಕಾ ಗ್ರಂಥವನ್ನು ಶ್ರೀಗಳು ಲೋಕಾರ್ಪಣೆ ಮಾಡಿದರು.

# ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ, ಹವಾಮಾನ-ಮಾನವನ ಮೇಲಿನ ಪ್ರಭಾವ ಅಂತರಾಷ್ಟ್ರೀಯ ಸಮ್ಮೇಳನ: ಭಿತ್ತಿಪತ್ರ ಬಿಡುಗಡೆ

**ಕಲಬುರಗಿ, ಜು. 4:** ಜಿಲ್ಲೆಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಭೂವಿಜ್ಞಾನ ನಿಕಾಯದ ಭೂಗೋಳಶಾಸ್ತ್ರ ವಿಭಾಗದ ವತಿಯಿಂದ, ಮೆಕ್ಸಿಕೋ ನಗರದ ಅಂತರಶಿಸ್ತೀಯ ಅಧ್ಯಯನ ಕೇಂದ್ರ, ರಾಷ್ಟ್ರೀಯ ಪಾಲಿಟೆಕ್ನಿಕ್ ಸಂಸ್ಥೆ ಮತ್ತು ಪ್ರಾದೇಶಿಕ ಹಾಗೂ ಪರಿಸರ ಸಾಮಾಜಿಕ-ನಗರ ಸಮಸ್ಯೆಗಳ ಕುರಿತಾದ ಅಂತರರಾಷ್ಟ್ರೀಯ ಸಂಶೋಧಕರ ಜಾಲ ಸಹಯೋಗ 'ದೊಂದಿಗೆ ಇದೇ ಅಕ್ಟೋಬರ್ 26ರಿಂದ 30ರವರೆಗೆ ವಿಶ್ವವಿದ್ಯಾಲಯದ ಕ್ಯಾಂಪಸ್ ಆವರಣದಲ್ಲಿ ಭೂಮಿಯ ಹವಾಮಾನ ಮತ್ತು ಪರಿಸರ ವ್ಯವಸ್ಥೆಯ ಮೇಲೆ ಮಾನವನ ಪ್ರಭಾವದ ಕುರಿತು ಐದು ದಿನಗಳ ಕಾಲ ಅಂತರರಾಷ್ಟ್ರೀಯ ಸಮ್ಮೇಳನ ಜರುಗಲಿದೆ.



ಕುಲಪತಿ ಪ್ರೊ. ಬಟ್ಟು ಸತ್ಯ ನಾರಾಯಣ ಹಾಗೂ ಕುಲಸಚಿವ ಪ್ರೊ. ಆರ್.ಆರ್. ಬಿರಾದಾರ್ ಅವರು ಅಂತರಾಷ್ಟ್ರೀಯ ಸಮ್ಮೇಳನದ ಪೋಸ್ಟರ್ ಬಿಡುಗಡೆ ಹಾಗೂ ಅಧಿಕೃತ ವೆಬ್‌ಸೈಟ್‌ನ್ನು ಅನಾವರಣ ಮಾಡಿದರು. ಈ ಸಂದರ್ಭದಲ್ಲಿ ಭಾರತೀಯ ಸಮ್ಮೇಳನದ ಸಂಚಾಲಕರು ಹಾಗೂ ಭೂವಿಜ್ಞಾನ ನಿಕಾಯದ ಡೀನ್‌ರಾದ ಪ್ರೊ. ಎಂ. ಪ್ರಶಾಂತ್ ಮತ್ತು ಭೂ ವಿಜ್ಞಾನ ವಿಭಾಗದ ಪ್ರಾಧ್ಯಾಪಕರಾದ ಡಾ. ಬಾಬು ನಲ್ಲುಸಾಮಿ, ಸಮ್ಮೇಳನದ ಸಂಘಟನಾ ಕಾರ್ಯದರ್ಶಿ ಹಾಗೂ ಭೂವಿಜ್ಞಾನ ಪ್ರಾಧ್ಯಾಪಕರಾದ ಡಾ.ತೇಜಸ್ವಿ ಲಕ್ಕುಂಡಿ ಅವರು ಉಪಸ್ಥಿತರಿದ್ದರು.

ಐಸಿಇಇಎ ಮೊದಲ ಸಮ್ಮೇಳನವು ನಮ್ಮ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕ್ಯಾಂಪಸ್‌ನಲ್ಲಿ 2021ರಲ್ಲಿ ನಡೆದಿದ್ದು, ಎರಡನೇ ಆವೃತ್ತಿಯು ಸಹ ಮಾರ್ಚ್ 2025ರಲ್ಲಿ ಆಯೋಜಿಸಲಾಗಿತ್ತು, ಈ ಮುಂಬರುವ ಸಮ್ಮೇಳನವು ಖಅಇಇಂ-2026 ರ ಮೂರನೇ ಆವೃತ್ತಿಯೂ ಸಹ ನಮ್ಮ ವಿ.ವಿ.ಯಲ್ಲಿ ಆಯೋಜನೆಗೊಂಡಿದೆ. "ಭೂಮಿ ಮತ್ತು ಪರಿಸರ, ವಿಜ್ಞಾನ ಕ್ಷೇತ್ರದ ಸಂಶೋಧನಾ ಶ್ರೇಷ್ಠತೆಗೆ ಹಾಗೂ ಜಾಗತಿಕ ಶೈಕ್ಷಣಿಕ ಸಹಯೋಗದತ್ತ ನಮ್ಮ ವಿ.ವಿ.ಯ ಬದ್ಧತೆಯು ಮತ್ತೊಮ್ಮೆ ಪ್ರತಿಪಾದಿಸಿದೆ.

ಅಕ್ಟೋಬರ್ 26ರಿಂದ 28ರವರೆಗೆ ಅಂತರಾಷ್ಟ್ರೀಯ ಸಮ್ಮೇಳನದ ಉದ್ಘಾಟನಾ ಸಮಾರಂಭ, ಅಂತರ ರಾಷ್ಟ್ರೀಯ ಖ್ಯಾತ ತಜ್ಞರಿಂದ ಪ್ರಮುಖ ಭಾಷಣಗಳು, ತಾಂತ್ರಿಕ ಅವಧಿಗಳು ನಡೆಯಲಿದೆ. ಹಲವಾರು ಸಂಶೋಧನಾ ಮಹಾ ಪ್ರಬಂಧಗಳ ಮಂಡನೆಯಾಗಲಿದ್ದು, ಶೈಕ್ಷಣಿಕ ಚರ್ಚೆ ಮತ್ತು ಸಂವಾದ ಸಹ ನಡೆಯಲಿದೆ. ಅಕ್ಟೋಬರ್ 29 ಮತ್ತು 30 ರಂದು ಶೈಕ್ಷಣಿಕ ಹಾಗೂ ಭೂವೈಜ್ಞಾನಿಕ ಅಧ್ಯಯನಕ್ಕಾಗಿ ಹಟ್ಟಿ ಚಿನ್ನದ ಗಣಿ ಸೇರಿದಂತೆ ಭೂವೈಜ್ಞಾನಿಕ ಗಣಿ ಪ್ರದೇಶಗಳಿಗೆ ಭೇಟಿ ನೀಡಲಿದ್ದು, ಭೂವಿಜ್ಞಾನ ಕ್ಷೇತ್ರದ ತಜ್ಞರೊಂದಿಗೆ ಸಂವಾದ ಮತ್ತು 30 ರಂದು ಸಮಾರೋಪ ಸಮಾರಂಭ ನಡೆಯಲಿದೆ.

ಸಮ್ಮೇಳನದ ಪ್ರಮುಖ ಉದ್ದೇಶ ದೇಶ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಹವಾಮಾನ ವೈಪರೀತ್ಯದ ಬದಲಾವಣೆ, ಸುಸ್ಥಿರತೆ, ನೈಸರ್ಗಿಕ ಸಂಪನ್ಮೂಲಗಳು, ಭೂ-ವಿಜ್ಞಾನಗಳು, ಪರಿಸರದ ಅವನತಿ, ವಿಪತ್ತು ನಿರ್ವಹಣೆ, ಆಡಳಿತ ಹಾಗೂ ಪರಿಸರ ಸ್ಥಿತಿಸ್ಥಾಪಕತ್ವಕ್ಕಾಗಿ ತಾಂತ್ರಿಕ ಪರಿಹಾರಗಳು ಸೇರಿದಂತೆ ಮಾನವನ ಯುಗದಲ್ಲಿ ಪ್ರಮುಖ ಭೂಮಿ ಮತ್ತು ಪರಿಸರದ ಸವಾಲುಗಳ ಬಗ್ಗೆ ಚರ್ಚೆ, ಪ್ರಶ್ನೋತ್ತರ, ಸಂವಾದ ನಡೆಯಲಿದೆ. ದೇಶ-ವಿದೇಶದ ಸಂಶೋಧಕರು, ಶಿಕ್ಷಣ ತಜ್ಞರು, ಪರಿಸರವಾದಿಗಳು, ನೀತಿ ನಿರೂಪಕರು ಒಂದೇ ವೇದಿಕೆಯಲ್ಲಿ ಭಾಗಿಯಾಗಲಿದ್ದಾರೆ.

ಸಮ್ಮೇಳನದ ಪ್ರಮುಖ ವಿಷಯಗಳಾಗಿ ಭೂವಿಜ್ಞಾನ ಮತ್ತು ಭೂಮಿಯ ವಸ್ತುಗಳು, ಭೂ-ಪರಿಸರ ವಿಜ್ಞಾನ ಮತ್ತು ಸುಸ್ಥಿರತೆ, ಸಾಗರ ಭೂವಿಜ್ಞಾನ ಮತ್ತು ಕರಾವಳಿ ವ್ಯವಸ್ಥೆಗಳು, ತಾಂತ್ರಿಕ ಮತ್ತು ಅನ್ವಯಿಕ ಭೂ ವಿಜ್ಞಾನಗಳು, ಪರಿಸರದ ರಾಜಕೀಯ ಮತ್ತು ಸಾಮಾಜಿಕ ಆಯಾಮಗಳು, ವಿಪತ್ತು ನಿರ್ವಹಣೆ, ಪರಿಸರ ಸುಸ್ಥಿರತೆ, ಆಡಳಿತ ಮತ್ತು ಹಸಿರು ಅಭಿವೃದ್ಧಿ ಸೇರಿದಂತೆ ಇತರೆ ವಿಷಯಗಳು ಚರ್ಚೆಗೆ ಬರಲಿವೆ. ನೋಂದಣಿ ಮತ್ತು ಪ್ರತಿನಿಧಿ ಶುಲ್ಕವು ವಿದೇಶಿ ಪ್ರತಿನಿಧಿಗಳಿಗೆ (ಶಿಕ್ಷಕರು/ಸಂಶೋಧಕರು/ವಿಜ್ಞಾನಿಗಳು/ಪ್ರಾಧ್ಯಾಪಕರು)-350ರೂ.ಗಳು, ವಿದೇಶಿ ವಿದ್ಯಾರ್ಥಿಗಳಿಗೆ- 150ರೂ.ಗಳು, ಭಾರತೀಯ ಪ್ರತಿನಿಧಿಗಳಿಗೆ -3,500 ರೂ.ಗಳು, ಸಂಶೋಧನಾ ವಿದ್ಯಾರ್ಥಿಗಳಿಗೆ- 1,500ರೂ.ಗಳು, ಭಾರತೀಯ ವಿದ್ಯಾರ್ಥಿ ಪ್ರತಿನಿಧಿಗಳಿಗೆ 750ರೂ.ಗಳು, ಭಾರತೀಯ ಅತಿಥಿಗಳಾಗಿ ಭಾಗವಹಿಸುವವರಿಗೆ 1500ರೂ.ಗಳಾಗಿದೆ.



॥ ಶ್ರೀರಸ್ತು ॥
॥ ಶುಭಮಸ್ತು ॥
ಕರ್ನಾಟಕ ರಾಜ್ಯ ಮುಜರಾಯಿ ದೇವಾಲಯಗಳ ಅರ್ಚಕರ ಆಗಮಿಕರ ಮತ್ತು ನೌಕರರ ಸಂಘ (ರಿ)
ರಾಜ್ಯ ಮಟ್ಟದ ಮುಜರಾಯಿ ಅರ್ಚಕರ ಬೃಹತ್ ಸಮಾವೇಶ
ದಿನಾಂಕ: 5.8.2026 ಬುಧವಾರ ಸಮಯ: ಬೆಳಿಗ್ಗೆ 11.00 ಗಂಟೆ ಸ್ಥಳ: ಡಾ. ಅಂಬೇಡ್ಕರ್ ಭವನ, ಬೆಂಗಳೂರು
ಕರ್ನಾಟಕ ರಾಜ್ಯ ಅರ್ಚಕರ ಕಣ್ಮಣಿ
ಶ್ರೀಯುತ ರಾಮಲಿಂಗಾರೆಡ್ಡಿಯವರಿಗೆ
ಅಭಿನಂದನಾ ಸಮಾರಂಭ
ದಿವ್ಯ ಸಾನಿಧ್ಯ:
ಡಾ. ಶ್ರೀ ಶ್ರೀ ಕರಿವೃಷಭದೇಶೀಕೇಂದ್ರ
ಶಿವಯೋಗೀಶ್ವರ ಮಹಾಸ್ವಾಮಿಗಳು, ಕಾಡಸಿದ್ದೇಶ್ವರ
ಮಠ, ನೊಣವಿನಕೆರೆ
ಉದ್ಘಾಟನೆ:
ಶ್ರೀಯುತ ಡಿ.ಕೆ. ಶಿವಕುಮಾರ್‌ರವರು,
ಮಾನ್ಯ ಕರ್ನಾಟಕ ರಾಜ್ಯ ಜನಪ್ರಿಯ ಮುಖ್ಯಮಂತ್ರಿಗಳು
ಮುಖ್ಯ ಅತಿಥಿಗಳು:
ಡಾ. ಜಿ. ಪರಮೇಶ್ವರ್‌ರವರು, ಮಾನ್ಯ ಕರ್ನಾಟಕ
ರಾಜ್ಯ ಜನಪ್ರಿಯ ಉಪ ಮುಖ್ಯಮಂತ್ರಿಗಳು ಮತ್ತು
ಕಂದಾಯ ಸಚಿವರು
ಶ್ರೀಯುತ ರಾಮಲಿಂಗಾರೆಡ್ಡಿರವರು, ಮಾನ್ಯ
ಕರ್ನಾಟಕ ರಾಜ್ಯ ಜನಪ್ರಿಯ ಜಲಸಂಪನ್ಮೂಲ
ಸಚಿವರು
ಡಾ. .ಶ್ರೀ ದ್ವಾರಕನಾಥ್ ರವರು
ಖ್ಯಾತ ಜ್ಯೋತಿಷಿಗಳು ಹಾಗೂ ಧಾರ್ಮಿಕ ಪರಿಷತ್
ಸದಸ್ಯರು, ಮುಜರಾಯಿ
ವಿಶೇಷ ಆಹ್ವಾನಿತು:
ಸನ್ಮಾನ್ಯ ಶ್ರೀ ಬಿ. ಶರತ್‌ರವರು, ಆಯುಕ್ತರು, ಹಿಂದೂ ಧಾರ್ಮಿಕ ದತ್ತಿ ಇಲಾಖೆ
ಸನ್ಮಾನ್ಯ ಶ್ರೀ ಕಾಂತರಾಜ್‌ರವರು, ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ
ಸನ್ಮಾನ್ಯ ಶ್ರೀ ಪಿ. ದಿನೇಶ್‌ರವರು, ಕೇಂದ್ರ ಸ್ಥಾನಿಕ ಸಹಾಯಕರು
ಸನ್ಮಾನ್ಯ ದಯಾನಂದರವರು, ಕೇಂದ್ರ ಸ್ಥಾನಿಕ ಸಹಾಯಕರು
ಅಧ್ಯಕ್ಷತೆ: ಸನ್ಮಾನ್ಯ ಶ್ರೀ ಶ್ರೀವತ್ಸ ರವರು
ರಾಜ್ಯಾಧ್ಯಕ್ಷರು ಕ.ರಾ.ಮು.ದೇ.ಅ.ಆ.ನೌ. ಸಂಘ
ಸರ್ವರಿಗೂ ಆದರದ ಸುಸ್ವಾಗತ